ಸಂಪುಟ: 14 Volume ಸಂಚಿಕೆ: 98 Issue ಪುಟಗಳು 08 Pages ಬುಧವಾರ 22 ಜುಲೈ 2026 ₹4 PRGINO.120927 (RNINO:KARKAN/2011/48371) BDR/054/2026-2027 www.mallammanudi.in mallammanudi@gmail.com 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಕೊಟ್ಟು ಕೆಟ್ಟವರಿಲ್ಲ,
ತಿಂದು ಬದುಕಿದವರಿಲ್ಲ.
ಕೊಟ್ಟು ಕದಿಯಲು ಬೇಡ,
ಕೊಟ್ಟಾಡಿಕೊಳಬೇಡ.
–ಸರ್ವಜ್ಞ



ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಅವರಿಂದು ದೆಹಲಿಯಲ್ಲಿ ಕೇಂದ್ರ ಹಣಕಾಸು ಮತ್ತು ಸಾಂಸ್ಥಿಕ ವ್ಯವಹಾರಗಳ ಖಾತೆ ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿ ಮಾಡಿ, 15ನೇ ಹಣಕಾಸು ಆಯೋಗದ ಶಿಫಾರಸಿನಂತೆ 2025–26ನೇ ಸಾಲಿನಲ್ಲಿ ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ ಹಂಚಿಕೆ ಮಾಡಿದ್ದ 2186.20 ಕೋಟಿ ರೂ. ಅನುದಾನವನ್ನು ಬಿಡುಗಡೆ ಮಾಡಿಸುವಂತೆ ಮನವಿ ಮಾಡಿದರು.






ಚಿತ್ತಾಪುರ: ವಾಡಿ(ಜಂಕ್ಷನ್)ನಗರದಲ್ಲಿ ದಿಡೀರ್ ತಪಾಸಣೆ ಕೈಗೊಂಡು ನಾಲ್ಕು ಮಕ್ಕಳನ್ನು ಕೆಲಸದಿಂದ ಬಿಡುಗಡೆಗೊಳಿಸಿ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಗೆ ಪುನರ್ ವಸತಿಗಾಗಿ ಹಾಜರುಪಡಿಸಲಾಯಿತು.

## ಲಾರಿ-ಬೋಲೆರೋ ವಾಹನ ಡಿಕ್ಕಿ ಇಬ್ಬರು ಸ್ಥಳದಲ್ಲಿ ಸಾವು



**ಕೊಪ್ಪಳ:** ರಸ್ತೆ ಬದಿಯಲ್ಲಿ ನಿಂತಿದ್ದ ಲಾರಿಗೆ ಬೊಲೇರೊ ವಾಹನ ಡಿಕ್ಕಿ ಇಬ್ಬರು ಸ್ಥಳದಲ್ಲಿ ಸಾವು. 6 ಜನರಿಗೆ ಗಂಭೀರ ಗಾಯ ರಾಷ್ಟ್ರೀಯ ಹೆದ್ದಾರಿ 50 ರ ಕೆರೆಹಳ್ಳಿ ಬಳಿ ಘಟನೆ ಹುಲಿಗಿಯ ಖಾದರಖಾನ್(75), ಆತನ ಪತ್ನಿ ಖೈರುನ್ನಬಿ (70) ಸಾವು ಗಾಯಾಳುಗಳನ್ನು ಕೊಪ್ಪಳ ಜಿಲ್ಲಾಸ್ಪತ್ರೆಗೆ ದಾಖಲು ಕುಷ್ಟಗಿ ಕಡೆಯಿಂದ ಹೊಸಪೇಟೆಗೆ ಹೊರಟಿದ್ದ ಬೊಲೇರೋ ವಾಹನ ಕೆರೆಹಳ್ಳಿ ಆರ್‌ಟಿಒ ಅಧಿಕಾರಿಗಳು ಅವೈಜ್ಞಾನಿಕವಾಗಿ ತಡೆಯುತ್ತಿರುವುದೇ ಘಟನೆಗೆ ಕಾರಣವಂತೆ ಮುನಿರಾಬಾದ್ ಪೊಲೀಸರು ಭೇಟಿ ಪರಿಶೀಲನೆ ನೆಡಿಸಿದ್ದಾರೆ.



ಎಐಸಿಸಿ ಅಧ್ಯಕ್ಷರು ಹಾಗೂ ರಾಜ್ಯಸಭೆ ವಿರೋಧ ಪಕ್ಷದ ನಾಯಕರಾದ ಮಲ್ಲಿಕಾರ್ಜುನ ಖರ್ಗೆ ಅವರ ಜನ್ಮದಿನದ ಹಿನ್ನೆಲೆಯಲ್ಲಿ ಅವರ ದೆಹಲಿಯ ನಿವಾಸಕ್ಕೆ ತೆರಳಿ ಸಿಎಂ ಡಿ ಕೆ ಶಿವಕುಮಾರ್ ಅವರು ಹೂಗುಚ್ಛ ನೀಡಿ ಶುಭಕೋರಿದರು.

## ಕಂಗನಕೋಟದಲ್ಲಿ ಮಳೆಗಾಗಿ ಬುಟ್ಟಿ ಜಾತ್ರೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ತಾಲೂಕಿನ ಕಂಗನಕೋಟ್ ಗ್ರಾಮದಲ್ಲಿ ಮಳೆಗಾಗಿ ಪ್ರಾರ್ಥನೆ ಮಾಡಿ ಬುಟ್ಟಿ ಜಾತ್ರೆ ಮಾಡಲಾಯಿತು.

ಈ ಸಂಧರ್ಭದಲ್ಲಿ ಊರಿನ ಎಲ್ಲ ರೈತರು ಜಾತಿ ಭೇದ ಎನ್ನದೆ ಎಲ್ಲರೂ ಒಟ್ಟೂ ಗೂಡಿ ಸಿದ್ದೇಶ್ವರ ದೇವಾಲಯದಲ್ಲಿ ಪೂಜೆಯನ್ನು ಸಲ್ಲಿಸಿ ಒಟ್ಟಾಗಿ ಕುಳಿತು ಭೋಜನ ಸವಿದು ಸಾಮಾಜಿಕ ಸಾಮರಸ್ಯದ ಏಕತೆಯನ್ನು ಬಿಂಬಿಸಿ ಸಂಭ್ರಮ ಪಟ್ಟರು.

ಹೆಣ್ಣುಮಕ್ಕಳು ಕಬಡ್ಡಿ, ಖೋಕೋ, ಆಟ ಹಾಗು ಬುಲಯಿ ಪದ ಹಾಗು ಪುರುಷರು ಕೋಲಾಟ ಗಮನ ಸೆಳೆಯಿತು ಸೆಳೆಯಿತು.

ಗ್ರಾಮದ ಸಿದ್ದೇಶ್ವರ ಟ್ರಸ್ಟ್ ಅಧ್ಯಕ್ಷರು ಹಾಗು ಕಾರ್ಯದರ್ಶಿಗಳಾದ ಕೇದಾರನಾಥ ಶಂಭು, ಮಕ್ಕಳ ಸಾಹಿತ್ಯ ಪರಿಷತ್ ಕಾರ್ಯದರ್ಶಿ ಓಂಕಾರ ಪಾಟೀಲ, ಧನಶೆಟ್ಟಿ ಶಂಭು, ವಿಜಯಕುಮಾರ, ನಿಜಗುಣ, ಕಂಟೆಪ್ಪ ಒತಿ, ಕಮಲಾಕರ ಶಂಭು, ಸುನಿಲ ಭುಳ್ಳ,





ಶಿವು, ಅಶೋಕ, ಬಾಬು ಮಲಶೆಟ್ಟಿ, ಸಚಿನ, ಶ್ರೀಮತಿ ಪುತಳಾಬಾಯಿ, ಸಂಗೀತ ಓತಿ, ಪ್ರೇಮಲತಾ, ಸಂಗೀತ, ಶಾರದಾ ಬಾಯಿ ಸೇರಿದಂತೆ ಊರಿನ ಪ್ರಮುಖರು ಹಿರಿಯರು ಮಕ್ಕಳು ಭಾಗವಹಿಸಿದರು.

## ವೇಶ್ಯಾವಾಟಿಕೆ ಅಡ್ಡೆ ಮೇಲೆ ಪೊಲೀಸರ ದಾಳಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲೆಯಲ್ಲಿ ಜನವರಿ 2026ರಿಂದ ಅಕ್ರಮ ದಂಧೆಗಳಿಗೆ ಕಡಿವಾಣ ಬಿದ್ದಿದೆ. ಎಸ್ಪಿ ಸುಮನ್ ಡಿ ಪನ್ನೇಕರ್ ರವರ ಕಟ್ಟುನಿಟ್ಟಿನ ಕ್ರಮದಿಂದ ಅಕ್ರಮ ಚಟುವಟಿಕೆಗಳಿಗೆ ಬ್ರೇಕ್ ಬಿದ್ದಿದೆ. ಇನ್ನು ಪನ್ನೇಕರ್ ರವರ ದಿಟ್ಟ ಆಡಳಿತ ವೈಖರಿಯಿಂದ ಹಲವು ಪೊಲೀಸ್‌ರು ಸುಧಾ–ರಿಸಿಕೊಂಡು ಕಾನೂನು ಪಾಲನೆಯನ್ನು ಕಟ್ಟುನಿಟ್ಟಾಗಿ ಪಾಲಿಸುತ್ತಿದ್ದಾರೆ. ಇಷ್ಟೆಲ್ಲ ಖಡಕ್ ಪೊಲೀಸಿಂಗ್ ಇದ್ದರೂ ಸಹ ಅಕ್ರಮ ದಂಧೆಕೋರರು ಕದ್ದು ಮುಚ್ಚಿ ತಮ್ಮ ಹಗ್ಗ ಕಡಿಯುವ ಚಾಳಿ ಮಾತ್ರ ಬಿಡುತ್ತಿಲ್ಲ. ಜಿಲ್ಲೆಯಲ್ಲಿ ಇನ್ನು ಅಕ್ರಮ ಪಡಿತರ ದಂಧೆ ಎಸ್ಪಿಯವರಿಗೆ ಗೊತ್ತಿಲ್ಲದೇ ಕದ್ದುಮುಚ್ಚಿ ಕೆಲ ಪೊಲೀಸ್ ಇನ್ಸ್‌ಪೆಕ್ಟರ್‌ಗಳ ನೆರಳಲ್ಲಿ ನಡೆ–ಯುತ್ತಿದ್ದರೆ, ಅಕ್ರಮ ಮರಳು ಅಕ್ರಮ ಮರಂ ಹಾಗೂ ಮಟ್ಕಾ ಡಬಲ್ ಚೀಟಿ ದಂಧೆ ನಡೆಯುತ್ತಲೇ



ಇದೆ ಇದಲ್ಲದೇ ವೇಶ್ಯಾವಾಟಿಕೆ ದಂಧೆಯಂತೂ ಈಗ ಹೈಫೈ ಬಡಾವಣೆಗಳಲ್ಲಿ ಮನೆಗಳನ್ನು ಬಾಡಿಗೆ ಪಡೆದು ನಡೆಸುತ್ತಿದ್ದಾರೆ.

ಇದಕ್ಕೆ ಪೂರಕವಾಗಿ ಇಂದು ಬಳ್ಳಾರಿಯ ಎಪಿಎಂಸಿ ಯಾರ್ಡ್ ಪೊಲೀಸ್ ಠಾಣಾ ವ್ಯಾಪ್ತಿಯ ಕಂಬಳಿ ಬಜಾರ್‌ನ ಮನೆಯೊಂದರಲ್ಲಿ ವೇಶ್ಯಾವಾಟಿಕೆ ದಂಧೆ ನಡೆಯುತ್ತಿದ್ದ ಸ್ಥಳದ ಮೇಲೆ ಪೊಲೀಸರು ದಾಳಿ ಮಾಡಿ ಮಾಂಸ ದಂಧೆಯ ಹೆಡೆಮುರಿ ಕೆ ದಂಧೆಯಲ್ಲಿ ತೊಡಗಿದ್ದ ಸಂತ್ರಸ್ತ ಪಿನ್‌ಗಳನ್ನು ಕಟ್ಟಿ ವೇಶ್ಯಾವಾಟಿಕೆಯಿಂದ ರಕ್ಷಿಸಿದ್ದಾರೆ.

# ಸಂಪುಟ ವಿಸ್ತರಣೆ ಫೈನಲ್

## ನಿರೀಕ್ಷೆಯಂತೆ ಎಲ್ಲವೂ ನಡೆದರೆ ಇಂದು ಪೂರ್ಣ ಪ್ರಮಾಣದ ಸಂಪುಟ ಅಂತಿಮ ಹಂತ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಸಿಎಂ ಡಿಕೆಶಿವಕುಮಾರ್ ನೇತೃತ್ವದ ಸಚಿವ ಸಂಪುಟ ವಿಸ್ತರಣೆ ಜಟಾಪಟಿ ಅಂತಿಮ ಹಂತಕ್ಕೆ ತಲುಪಿದೆ. ನಿರೀಕ್ಷೆಯಂತೆ ಎಲ್ಲವೂ ನಡೆದರೆ ಇಂದು ಮಧ್ಯಾಹ್ನವೇ ಪೂರ್ಣ ಪ್ರಮಾಣದ ಸಂಪುಟ ವಿಸ್ತರಣೆಯಾಗುವ ಸಾಧ್ಯತೆ ದಟ್ಟವಾಗಿದೆ. ರಾಜ್ಯ ಸಂಪುಟದಲ್ಲಿ ಖಾಲಿ ಇರುವ 20 ಸ್ಥಾನಗಳಿಗೆ ಸಚಿವರನ್ನು ನೇಮಿಸುವ ಕುರಿತಂತೆ ದೆಹಲಿಯಲ್ಲಿಂದು ಹೈಕಮಾಂಡ್ ವರಿಷ್ಠರ ಜೊತೆಗೆ ರಾಜ್ಯ ನಾಯಕರು ಸರಣಿ ಸಭೆಗಳನ್ನು ನಡೆಸಿದ್ದು, ಸಂಪುಟ ವಿಸ್ತರಣೆಯ ಕುರಿತು ಚರ್ಚೆ ನಡೆಸಲು ಮಾಜಿ ಸಿಎಂ ಸಿದ್ದರಾಮಯ್ಯ, ಸಿಎಂ ಡಿ.ಕೆ.ಶಿವಕುಮಾರ್, ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಬೆಂಗಳೂರಿನಿಂದ ವಿಶೇಷ ವಿಮಾನದಲ್ಲಿ ದೆಹಲಿಗೆ ತೆರಳಿದ್ದಾರೆ. ಪ್ರಯಾಣದ ನಡುವೆಯೇ ಮೂವರು ನಾಯಕರು ಸಂಭವನೀಯ ಸಚಿವರ ಪಟ್ಟಿಯ ಬಗ್ಗೆ ಚರ್ಚೆ ನಡೆಸಿದ್ದಾರೆ ಎಂದು ತಿಳಿದು ಬಂದಿದೆ.

**33 ನಾಯಕರು ಹೆಸರು:** ಒಟ್ಟು 33 ಜನರ ಹೆಸರನ್ನು ಇಂದು ಹೈಕಮಾಂಡ್ ಮುಂದೆ ಮೂವರು ನಾಯಕರು ಇಟ್ಟಿದ್ದಾರೆ. ದೆಹಲಿಯಲ್ಲಿ ವರಿಷ್ಠರ ಜೊತೆಗೆ ಮಾತುಕತೆ ನಡೆಯಲಿದ್ದು, ಪಟ್ಟಿ ಪರಿಶೀಲನೆ ಮಾಡಿ ಅಂತಿಮ ಹಂತದ ನಿರ್ಧಾರ ಕೈಗೊಳ್ಳುವ ಸಾಧ್ಯತೆ ದಟ್ಟವಾಗಿದೆ. ಸಾಮಾನ್ಯವಾಗಿ ಸಂಪುಟದಲ್ಲಿ ಸಿಎಂ ಆಗಿದ್ದವರ ಕೈ ಮೇಲಾಗುತ್ತದೆ.

**ಮೂರು ಬಣಗಳು:** ಆದರೆ, ಕರ್ನಾಟಕದಲ್ಲಿ ಸದ್ಯ ಆ ರೀತಿಯ ಪರಿಸ್ಥಿತಿ ಇಲ್ಲ. ಇಲ್ಲಿ ಸಿದ್ದರಾಮಯ್ಯ ಬಣ , ಡಿಕೆ ಶಿವಕುಮಾರ್ ಬಣ ಹಾಗೂ ಹೈಕಮಾಂಡ್ ಬಣ ಎಂದು ಮೂರು ಬಣಗಳು ಇವೆ. ಈ ಪೈಕಿ ಕೆಲವರು ಎರಡು ಬಣಗಳಲ್ಲಿ ಗುರುತಿಸಿಕೊಂಡಿದ್ದಾರೆ. ದಿನೇಶ್ ಗುಂಡೂರಾವ್,ಜಿಎಸ್ ಪಾಟೀಲ್,ಅಜಯ್ ಸಿಂಗ್, ಬಿಆರ್ ಪಾಟೀಲ್ ಹೆಸರನ್ನು ಹೈಕಮಾಂಡ್ ಶಿಫಾರಸು ಮಾಡಿದೆ.



### ಮುಖ್ಯಮಂತ್ರಿಯ ಆಪ್ತರ ಪಟ್ಟಿ

ಒಂದು ಮೂಲದ ಪ್ರಕಾರ, ಸಿಎಂ ಡಿ.ಕೆ.ಸಿವಕುಮಾರ್ ಅವರ ಆಪ್ತವಲಯದಲ್ಲಿ ಗುರುತಿಸಿಕೊಂಡವರು ಲಾಬಿ ನಡೆಸಿದ್ದಾರೆ. ಎಚ್ಸಿ ಬಾಲಕೃಷ್ಣ, ಲಕ್ಷ್ಮಣ ಸವದಿ, ಮಧು ಬಂಗಾರಪ್ಪ ಶರತ್ ಬಚ್ಚೇಗೌಡ, ತನ್ವೀರ್ ಸೇಠ್, ರಿಜ್ವಾನ್ ಅರ್ಷದ್ ಯಶವಂತರಾಯ ಗೌಡ ಪಾಟೀಲ್, ಲಕ್ಷ್ಮೀ ಹೆಬ್ಬಾಳ್ಕರ್, ಶ್ರೀನಿವಾಸ್ ಮಾನೆ ಅವರ ಹೆಸರನ್ನು ಡಿಕೆಶಿ ಪ್ರಸ್ತಾಪಿಸಿದ್ದಾರೆ ಎನ್ನಲಾಗಿದೆ.

### ಮಾಜಿ ಸಿಎಂ ಆಪ್ತರು

ಸಂತೋಷ್ ಲಾಡ್,ಪುಟ್ಟರಂಗ ಶೆಟ್ಟಿ,ಲೇಔಟ್ ಕೃಷ್ಣಪ್ಪ, ಶಿವಲಿಂಗೇಗೌಡ, ಎಎಸ್ ಪೊನ್ನಣ್ಣ, ಜಮೀರ್ ಅಹ್ಮದ್ ಖಾನ್, ರಘುಮೂರ್ತಿ ಚಳ್ಳಕೆರೆ, ಪ್ರಸಾದ್ ಅಬ್ಬಯ್ಯ, ವಿಜಯಾನಂದ ಕಾಶಪ್ಪನವರ್, ಅಶೋಕ್ ಪಟ್ಟಣ, ಶಿವಾನಂದ ಪಾಟೀಲ್, ಬಸವರಾಜ ರಾಯರೆಡ್ಡಿ,ಮುಂತಾದವರ ಹೆಸರನ್ನು ಸಿದ್ದರಾಮಯ್ಯ ಶಿಫಾರಸು ಮಾಡಿದ್ದಾರೆ.

### 20 ಸ್ಥಾನ ಮಾತ್ರ..!

ಸದ್ಯಕ್ಕೆ ರಾಜ್ಯದಲ್ಲಿ ಸಚಿವ ಸ್ಥಾನ ಖಾಲಿ ಇರುವುದು 20 ಮಾತ್ರ. ಆದರೆ 20 ಸ್ಥಾನಗಳಿಗೆ 40 ಕ್ಕೂ ಅಧಿಕ ಆಕಾಂಕ್ಷಿಗಳಿದ್ದಾರೆ. ಹಾಗಾಗಿ ಯಾರಿಗೆ ಅವಕಾಶ ಸಿಗಲಿದೆ ಎಂಬುವುದು ಮಾತ್ರ ಕುತೂಹಲದ ಸಂಗತಿಯಾಗಿದೆ. ಜಾತಿವಾರು, ಸಮುದಾಯವಾರು ಹಾಗೂ ಪ್ರಾದೇಶಿಕವಾರು ಆಧಾರದಲ್ಲಿ ಸಂಪುಟದಲ್ಲಿ ಅವಕಾಶ ಹಂಚಿಕೆ ಮಾಡಲಾಗುತ್ತದೆ.

### ಹಳಬರು ಹೊಸಬರು..!

ಈ ಹಿಂದೆ ಸಚಿವರಾಗಿದ್ದವರ ಪೈಕಿ 10 ಮಂದಿಯನ್ನು ಪರಿಗಣಿಸಬೇಕು ಎಂದು ರಾಜ್ಯ ನಾಯಕರು ಮನವಿ ಮಾಡಿದ್ದಾರೆ. ಹಳೆಯ ಐದು ಮಂದಿಗೆ ಮಾತ್ರ ಅವಕಾಶ ಕೊಟ್ಟು, ಹೊಸದಾಗಿ 15 ಮಂದಿಯನ್ನು ಸಂಪುಟಕ್ಕೆ ಸೇರಿಸಿಕೊಳ್ಳಬೇಕು ಎಂದು ಕೆ.ಸಿ.ವೇಣುಗೋಪಾಲ್ ಸೂಚಿಸಿದ್ದಾರೆ. ಹಳಬರು ಮತ್ತು ಹೊಸಬರನ್ನು ಸೇರಿ ತಲಾ 10 ರ ಅನುಪಾತದಲ್ಲಿ ಅವಕಾಶ ನೀಡುವ ಚರ್ಚೆಯಾಗಿದೆ.

## ಡೆತ್ ನೋಟ್ ಬರೆದಿಟ್ಟು ನೇಣಿಗೆ ಶರಣು

• ಮಲ್ಲಮ್ಮ ನುಡಿ ವಾರ್ತೆ ಇಂಡಿ



ನಗರದ ವಿಜಯಪೂರ ರಸ್ತೆಯಲ್ಲಿ ಇರುವ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಡಾ. ಬಿ ಆರ್ ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ ಇಂಡಿ ಟೌನ್‌ಯಲ್ಲಿ ಬೆಳಿಗ್ಗೆ 11:30 ಸುಮಾರಿಗೆ ಯುವಕನೊಬ್ಬ ಹಾಸ್ಟೆಲ್‌ನಲ್ಲಿ ಡೆತ್ ನೋಟ್ ಬರೆದಿಟ್ಟು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಡೆದಿದೆ. ಮೃತ ವಿದ್ಯಾರ್ಥಿ ಅಭಿಜಿತ್ ಉರ್ಫ ಅಂಬರೀಶ್ ಭೀಮರಾಯ ಸಮಗಾರ(17) ಎಂದು ತಿಳಿದು ಬಂದಿದೆ. ಹಗಲು ಹೊತ್ತಿನಲ್ಲಿ ಈ ಹಾಸ್ಟೆಲ್‌ನಲ್ಲಿ ವಾರ್ಡನ್ ಆಗಿರಬಹುದು ಅಥವಾ ಸಿಬ್ಬಂದಿಗಳು ಆಗಿರಬಹುದು ಇಲ್ಲದೇ ಇರುವುದರಿಂದ ಸಾಕಷ್ಟು ಅನುಮಾನಗಳಿಗೆ ಕಾರಣವಾಗಿದೆ. ನನ್ನ ಮಗನು ಆತ್ಮಹತ್ಯೆ ಮಾಡಿಕೊಂಡಿಲ್ಲ ಇದು ಕೊಲೆ ಎಂದು ಮೃತ ವಿದ್ಯಾರ್ಥಿಯ ಪಾಲಕರು ಆರೋಪಿಸುತ್ತಿದ್ದಾರೆ. ಸುದ್ದಿ ತಿಳಿದು ಸ್ಥಳಕ್ಕೆ ಭೇಟಿ ನೀಡಿದ ಅಧಿಕಾರಿಗಳು ಘಟನೆ ಬಗ್ಗೆ ವರದಿ ಪಡೆದುಕೊಂಡರು.

## 14.10 ಲಕ್ಷ ಮತದಾರರ ಡಿಜಿಟೈಸ್ ಪೂರ್ಣ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಭಾಗವಾಗಿ ಜಿಲ್ಲೆಯಾದ್ಯಂತ ಮಂಗಳವಾರದ ಅಂತ್ಯಕ್ಕೆ ಒಟ್ಟು 23,71,542 ಮತದಾರರ ಪೈಕಿ 14,10,652 ಮತದಾರರ ಗಣತಿ ನಮೂನೆಗಳನ್ನು ಡಿಜಿಟೈಸ್ ಮಾಡಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಇಕ್ರಮ್ ಶರೀಫ್ ತಿಳಿಸಿದ್ದಾರೆ.

23,71,542 ಮತದಾರರ ಪೈಕಿ 23,69,596 ಮತದಾರರಿಗೆ ಗಣತಿ ನಮೂನೆ ವಿತರಣೆ ಮಾಡಲಾಗಿದೆ. ಬಿ.ಎಲ್.ಓ.ಗಳು ಮನೆ–ಮನೆ ಭೇಟಿ ಕೊಟ್ಟಾಗ ಇಲ್ಲಿಯವರೆಗೆ 1,090 ಮತದಾರರು ಮನೆಯಲ್ಲಿ ಇಲ್ಲದಿರುವ (ಗೈರು), 30,659 ಮತದಾರರು ಶಾಶ್ವತವಾಗಿ ಸ್ಥಳಾಂತರಗೊಂಡಿರುವುದು ಮತ್ತು 24,848 ಜನ ಮತದಾರರು ನಿಧನ ಹೊಂದಿರುವ ಬಗ್ಗೆ ಹಾಗೂ 7,492 ಮತದಾರರು ಈಗಾಗಲೆ ನೋಂದಣಿಯಾಗಿರುವ ಬಗ್ಗೆ ವರದಿಯಾಗಿದೆ.

ಕಲಬುರಗಿ ಉತ್ತರ ವಿಧಾನಸಭಾ ಕ್ಷೇತ್ರ ಹೊರತುಪಡಿಸಿ ಉಳಿದ 8 ವಿಧಾನಸಭಾ ಕ್ಷೇತ್ರದಲ್ಲಿ ಶೇ.100ರಷ್ಟು ಗಣತಿ ನಮೂನೆ ವಿತರಣೆಯಾಗಿದ್ದು, ಇದೀಗ ಡಿಜಿಟೈಸ್ ಕಾರ್ಯ ನಡೆಯುತ್ತಿದೆ.

## ಪ್ರಧಾನಿ ಮನೆ ಮುಂದೆ ರಾಹುಲ್ ಧರಣಿ

• ಮಲ್ಲಮ್ಮ ನುಡಿ ವಾರ್ತೆ ಹೊಸದಿಲ್ಲಿ

ನೀಟ್ ಪರೀಕ್ಷಾ ಅಕ್ರಮದ ನೈತಿಕ ಹೊಣೆಹೊತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಗೆ ಆಗ್ರಹಿಸಿ, ಕಾಕ್ರೋಚ್ ಜನತಾ ಪಾರ್ಟಿ (ಸಿಜೆಪಿ) ನಡೆಸುತ್ತಿರುವ ಪ್ರತಿಭಟನೆಗೆ, ಪ್ರತಿಪಕ್ಷ ಕಾಂಗ್ರೆಸ್ ಬೆಂಬಲ ಘೋಷಿಸಿದೆ. ಈ ಮಧ್ಯೆ ಕಾಂಗ್ರೆಸ್ ನಾಯಕರು ಪ್ರತ್ಯೇಕವಾಗಿ ಪ್ರತಿಭಟನಾ ಮೆರವಣಿಗೆ ಹಮ್ಮಿಕೊಂಡಿದ್ದು, ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಅವರು, ದೆಹಲಿಯಲ್ಲಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ ಮನೆ ಮುಂದೆ ಧರಣಿ ಕುಳಿತಿದ್ದಾರೆ.

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ಸಂಸದೆ ಪ್ರಿಯಾಂಕಾ ಗಾಂಧಿ, ನಾಯಕರಾದ ರಣದೀಪ್ ಸುರ್ಜೇವಾಲಾ, ಕೆಸಿ ವೇಣುಗೋಪಾಲ್ ಸೇರಿದಂತೆ ಹಲವರು, ರಾಹುಲ್ ಗಾಂಧಿ ನೇತೃತ್ವದಲ್ಲಿ ಪ್ರಧಾನಿ ಮೋದಿ ಅವರ ಮನೆ ಮುಂದೆ ಧರಣಿ ಕುಳಿತರು. ವಿಪಕ್ಷ ನಾಯಕರೊಂದಿಗೆ ಸಂವಾದ ನಡೆಸಲು, ಕೇಂದ್ರ ಸರ್ಕಾರ ಸಚಿವ ಜಿತೇಂದ್ರ ಸಿಂಗ್ ಅವರನ್ನು ಕಳುಹಿಸಿದ್ದು, ಅವರು ಈಗಾಗಲೇ ರಾಹುಲ್ ಗಾಂಧಿ ಅವರೊಂದಿಗೆ ಮಾತುಕತೆ ನಡೆಸಿದ್ದಾರೆ. ನಿನ್ನೆ ಕೇಂದ್ರ ಸಚಿವ ಜೆಪಿ ನಡ್ಡಾ ಸಿಜೆಪಿ ನಾಯಕರೊಂದಿಗೆ ಸಭೆ ನಡೆಸಿದ್ದನ್ನು ಇಲ್ಲಿ ನೆನೆಯಬಹುದು.



### ಸಿಜೆಪಿ ಕಾರ್ಯಕರ್ತರ ಮೇಲೆ ದೌರ್ಜನ್ಯ

ನೀಟ್ ಪರೀಕ್ಷಾ ಅಕ್ರಮದ ನಿಷ್ಪಕ್ಷಪಾತ ತನಿಖೆ, ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ಮತ್ತು ಸಿಜೆಪಿ ಕಾರ್ಯಕರ್ತರ ಮೇಲಿನ ಪೊಲೀಸ್ ದೌರ್ಜನ್ಯವನ್ನು ಖಂಡಿಸಿದ ರಾಹುಲ್, ಕಾಂಗ್ರೆಸ್ ನಾಯಕರು ದೆಹಲಿಯ ಲೋಕ ಕಲ್ಯಾಣ ಮಾರ್ಗದಲ್ಲಿರುವ ಪ್ರಧಾನಿ ಮೋದಿ ಅವರ ಮನೆವರೆಗೂ ಪ್ರತಿಭಟನಾ ಮೆರವಣಿಗೆ ನಡೆಸಿದ್ದಾರೆ.

## ಕಲ್ಯಾಣ ಕರ್ನಾಟಕಕ್ಕೆ ಖರ್ಗೆ ಕೊಡುಗೆ ಅಪಾರ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಅಭಿಷೇಕ ಪಾಟೀಲ್ ನೇತೃತ್ವದಲ್ಲಿ ನಗರದ ಮಾಜಿ ಸಚಿವ ರಾಜಶೇಖರ ಪಾಟೀಲ್ ಗೃಹ ಕಚೇರಿಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಅವರ 84ನೇ ಜನ್ಮದಿನ ಜನ್ಮದಿನ ಕಾರ್ಯಕ್ರಮ ಆಚರಿಸಲಾಯಿತು.

ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಅಭಿಷೇಕ ಪಾಟೀಲ್ ಮಾತನಾಡಿ, ಭಾರತೀಯ ರಾಜಕೀಯದಲ್ಲಿ ಅದರಲ್ಲೂ ವಿಶೇಷವಾಗಿ ಕರ್ನಾಟಕಕ್ಕೆ ಮಲ್ಲಿಕಾರ್ಜುನ್ ಖರ್ಗೆ ಅವರ ಕೊಡುಗೆ ಅಪಾರ. ಕಲ್ಯಾಣ ಕರ್ನಾಟಕ ಭಾಗದ ಸರ್ವತೋಮುಖ ಅಭಿವೃದ್ಧಿಗೆ 371(ಜೆ) ವಿಧಿಯನ್ನು ಸೇರಿಸುವಲ್ಲಿ ಖರ್ಗೆ ಅವರ ಪಾತ್ರ ಹಿರಿದು. ಇದರಿಂದಾಗಿ ಈ ಭಾಗದ ಹಿಂದುಳಿದ ವರ್ಗದ ಜನರಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಮೀಸಲಾತಿ ಸಿಗುವಂತಾಯಿತು ಎಂದು ಸ್ಮರಿಸಿದ್ದಾರೆ.

ರಾಜಕೀಯ ಜೀವನದಲ್ಲಿ ಸತತವಾಗಿ ಸಂಸದರು ಹಾಗೂ ಶಾಸಕರಾಗುವ ಮೂಲಕ ಅನೇಕ



ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಡಾ. ಮಲ್ಲಿಕಾರ್ಜುನ ಖರ್ಗೆ ಅವರಿಗೆ ಹುಟ್ಟು ಹಬ್ಬದ ಪ್ರಯುಕ್ತ ನವದೆಹಲಿಯಲ್ಲಿ ಮಾಜಿ ಸಚಿವ ರಾಜಶೇಖರ ಪಾಟೀಲರು ಶುಭ ಕೋರಿದ್ದಾರೆ.

ಇಲಾಖೆಗಳ ಸಚಿವರಾಗಿ ಸೇವೆ ಸಲ್ಲಿಸಿದ್ದಾರೆ. ಎಐಸಿಸಿ ಅಧ್ಯಕ್ಷರಾಗಿ ಪಕ್ಷವನ್ನು ಮುನ್ನಡೆಸುವುದರೊಂದಿಗೆ ವಿರೋಧ ಪಕ್ಷದ ನಾಯಕರಾಗಿ ಸಂಸತ್ತಿನಲ್ಲಿ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿಯುವಲ್ಲಿ ಶ್ರಮಿಸುತ್ತಿದ್ದಾರೆ ಎಂದು ಕೊಂಡಾಡಿದ್ದಾರೆ. ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಫ್ಸರಮಿಯ, ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಉಮೇಶ್ ಜಮಗಿ, ಮಲ್ಲಿಕಾರ್ಜುನ್ ಮಾಳಶಟ್ಟಿ, ಮಹೇಶ





ಅಗಡಿ, ಗಣೇಶ ಪಾಟೀಲ್, ಮುಕ್ರಮ ಜಾ, ಸೈಯದ್ ಬಾಷೀದ್, ಅಶೋಕಕುಮಾರ ಚಳಕಾಪೂರೆ, ವಿಜಯಕುಮಾರ ನಾತೆ, ಶ್ರೀನಾಥ ದೇವಣಿ, ಮಾರುತಿ ಕಂದಾರಿ, ಅವಿನಾಶ ಪೊಲದಾಸ್, ಲಖನ್ ಕೋಳಿವಾಡ, ಸುರೇಶ ಘಾಂಗ್ರೆ, ಶಿವಾನಂದ ಕಟ್ಟಿಮನಿ, ರಾಹುಲ್ ಉದ್ದಾ, ಶಿವಕುಮಾರ ಪರೀಟ್, ದೇವೇಂದ್ರ ಪೋಲಾ, ಸುಧಾಕರ ಸಂಗಮ್, ಸಂತೋಷ ಅತಿವಾಳ, ದತ್ತು ಲದ್ದೆ, ಲೋಕೇಶ ಮೇತ್ರೆ, ಸಚೀನ್ ಕಲ್ಲೂರ್, ವಿಜಯಕುಮಾರ ಬಾಸಪಳ್ಳಿ, ವೀರಪ್ಪ ಭೂತಾಳೆ, ಸೈಯದ್ ಯಾಸೀನ್, ವಿಜಯಕುಮಾರ ಪವಾರ, ಕಿರಣ ಹಮಿಲಪೂರಕರ್, ಮನೋಜ್ ಟಿಕೆಕರ್, ಸೈಯದ್ ಜಾಫರ್, ನರಸಪ್ಪ ಪರಸನೋರ್ ಸೇರಿ ಅನೇಕರಿದ್ದರು.

## ವಿದ್ಯಾರ್ಥಿಗಳ ಥಳಿಸುವುದು ಭಾರತೀಯ ಸಂಸ್ಕೃತಿಯಲ್ಲ: ಮೋದಿ, ಅಮಿತ್ ಶಾ ವಿರುದ್ಧ ರಾಹುಲ್ ಗಾಂಧಿ ಕಿಡಿ; ಕ್ಷಮೆಯಾಚಿಸುವಂತೆ ಆಗ್ರಹ..!

## ರೈತ ಮೋರ್ಚಾ ಜಿಲ್ಲಾ ಉಪಾಧ್ಯಕ್ಷರಾಗಿ ವಿಜಯಕುಮಾರ ಗದ್ದಿ ನೇಮಕ



**ಗಂಗಾವತಿ:** ಭಾರತೀಯ ಜನತಾ ಪಾರ್ಟಿ (ಬಿಜೆಪಿ) ಕೊಪ್ಪಳ ಜಿಲ್ಲಾ ರೈತ ಮೋರ್ಚಾದ ಜಿಲ್ಲಾ ಉಪಾಧ್ಯಕ್ಷರಾಗಿ ವಿಜಯಕುಮಾರ ಗದ್ದಿ ಅವರನ್ನು ನೇಮಕ ಮಾಡಲಾಗಿದೆ.

ನೇಮಕ ಹಿನ್ನೆಲೆಯಲ್ಲಿ ಮಾತನಾಡಿದ ವಿಜಯಕುಮಾರ ಗದ್ದಿ, ಪಕ್ಷದ ಹಿರಿಯ ಮುಖಂಡರು, ನಾಯಕರು ಹಾಗೂ ಕಾರ್ಯಕರ್ತರಿಗೆ ಹೃತ್ಪೂರ್ವಕ ಕೃತಜ್ಞತೆ ಸಲ್ಲಿಸಿದರು. ವಿಶೇಷವಾಗಿ ಮಾಜಿ ಸಚಿವರು ಹಾಗೂ ಗಂಗಾವತಿ ಕ್ಷೇತ್ರದ ಶಾಸಕರಾದ ಗಾಲಿ ಜನಾರ್ಧನ ರೆಡ್ಡಿ ಅವರಿಗೆ ಧನ್ಯವಾದ ಅರ್ಪಿಸಿದರು.

ಅಲ್ಲದೆ ಮಾಜಿ ಶಾಸಕರಾದ ಪರಣ್ಣ ಮುನವಳ್ಳಿ, ಬಿಜೆಪಿ ಕೊಪ್ಪಳ ಜಿಲ್ಲಾ ಅಧ್ಯಕ್ಷ ನವೀನ್ ಗುಳಗಣ್ಣನವರ್, ಮಾಜಿ ಸಂಸದ ಶಿವರಾಮಗೌಡ, ಮಾಜಿ ಜಿಲ್ಲಾ ಅಧ್ಯಕ್ಷ ವಿರುಪಾಕ್ಷಪ್ಪ ಸಿಂಗನಾಳ, ಮಾಜಿ ಕಾಡಾ ಅಧ್ಯಕ್ಷ ಹೆಚ್. ಗಿರೇಗೌಡ, ತಿಪ್ಪೇರುದ್ರಸ್ವಾಮಿ ವಕೀಲರು, ಜಿಲ್ಲಾ ಉಪಾಧ್ಯಕ್ಷ ಮನೋಹರಗೌಡ ಹೇರೂರು, ಜಿಲ್ಲಾ ರೈತ ಮೋರ್ಚಾ ಅಧ್ಯಕ್ಷ ಅಶೋಕ ಗುಳದಳ್ಳಿ, ಗಂಗಾವತಿ ನಗರ ಮಂಡಲ ಅಧ್ಯಕ್ಷ ಚಂದ್ರು ಹಿರೂರು, ಗ್ರಾಮೀಣ ಮಂಡಲ ಅಧ್ಯಕ್ಷ ದುರುಗಪ್ಪ ಆಗೋಲಿ ಸೇರಿದಂತೆ ಪಕ್ಷದ ಎಲ್ಲ ಹಿರಿಯ ಮುಖಂಡರು ಹಾಗೂ ಪದಾಧಿಕಾರಿಗಳಿಗೆ ಕೃತಜ್ಞತೆ ಸಲ್ಲಿಸಿದರು.

ಪಕ್ಷವು ವಹಿಸಿರುವ ಜವಾಬ್ದಾರಿಯನ್ನು ಪ್ರಾಮಾಣಿಕತೆ, ನಿಷ್ಠೆ ಮತ್ತು ಬದ್ಧತೆಯಿಂದ ನಿರ್ವಹಿಸುವುದಾಗಿ ಅವರು ಹೇಳಿದರು. ರೈತ ಸಮುದಾಯದ ಅಭಿವೃದ್ಧಿ, ಯುವಕರನ್ನು ಪಕ್ಷದತ್ತ ಸೆಳೆಯುವುದು, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಜನಪರ ಯೋಜನೆಗಳನ್ನು ಜನರಿಗೆ ತಲುಪಿಸುವುದು ಹಾಗೂ ಗ್ರಾಮ ಮಟ್ಟದಲ್ಲಿ ಪಕ್ಷದ ಸಂಘಟನೆಯನ್ನು ಇನ್ನಷ್ಟು ಬಲಪಡಿಸುವ ನಿಟ್ಟಿನಲ್ಲಿ ಶ್ರಮಿಸುವುದಾಗಿ ತಿಳಿಸಿದರು.

ಪಕ್ಷದ ಸಿದ್ಧಾಂತ ಮತ್ತು ನಾಯಕತ್ವದ ಮಾರ್ಗದರ್ಶನದಲ್ಲಿ ಕಾರ್ಯನಿರ್ವಹಿಸಿ, ಮುಂಬರುವ ದಿನಗಳಲ್ಲಿ ಪಕ್ಷವನ್ನು ಮತ್ತಷ್ಟು ಸದೃಢಗೊಳಿಸುವ ಜೊತೆಗೆ ಜನಸೇವೆಗೆ ಸದಾ ಬದ್ಧನಾಗಿರುವುದಾಗಿ ವಿಜಯಕುಮಾರ ಗದ್ದಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭೂಸ್ವಾಧೀನಕ್ಕೆ ಕೆಐಎಡಿಬಿ ನೋಟಿಸ್ ನೀಡಿರುವುದನ್ನು ವಿರೋಧಿಸಿ ಧರಣಿ



**ಚಿಕ್ಕಬಳ್ಳಾಪುರ:** ಜಿಲ್ಲೆಯ ಶಿಡ್ಲಘಟ್ಟ ತಾಲ್ಲೂಕಿನ ಜಂಗಮಕೋಟೆ ಹೋಬಳಿ ವ್ಯಾಪ್ತಿಯ 13 ಗ್ರಾಮಗಳ ಸುಮಾರು 2,390 ಎಕರೆ ಫಲವತ್ತಾದ ಕೃಷಿ ಭೂಮಿಯಲ್ಲಿ ಕೈಗಾರಿಕಾ ಪ್ರದೇಶ ಸ್ಥಾಪಿಸಲು ಸರ್ಕಾರ ಮುಂದಾಗಿದ್ದು, ಭೂಸ್ವಾಧೀನಕ್ಕೆ ಕೆಐಎಡಿಬಿ ನೋಟಿಸ್ ನೀಡಿರುವುದನ್ನು ವಿರೋಧಿಸಿ ರೈತ ಸಂಘ ಹಾಗೂ ಹಸಿರು ಸೇನೆ ಮತ್ತು ಭೂಸ್ವಾಧೀನ ವಿರೋಧಿ ಹೋರಾಟ ಸಮಿತಿ ವತಿಯಿಂದ ರೈತರು ನಡೆಸುತ್ತಿರುವ ಅನಿರ್ದಿಷ್ಟಾವಧಿ ಧರಣಿ ಮಂಗಳವಾರ 128ನೇ ದಿನಕ್ಕೆ ಕಾಲಿಟ್ಟಿತು.

ಮಂಗಳವಾರ ರೈತರ ಹುತಾತ್ಮ ದಿನಾಚರಣೆ ಅಂಗವಾಗಿ ಜಂಗಮಕೋಟೆ ಹೋಬಳಿ ವ್ಯಾಪ್ತಿಯ ರೈತರು ಭೂಸ್ವಾಧೀನ ವಿರೋಧಿ ದಿನ ಆಚರಿಸಿ, ಜಿಲ್ಲಾಡಳಿತ ಭವನದ ಎದುರಿನ ರಸ್ತೆಯಲ್ಲಿ ಸರ್ಕಾರದ ವಿರುದ್ಧ ವಿನೂತನವಾಗಿ ಪಿಂಡ ಪ್ರಧಾನ ಹಾಗೂ ಪೊರಕೆ ಪೂಜೆ ನಡೆಸಿ ಪ್ರತಿಭಟಿಸಿದರು. ನಮ್ಮ ಭೂಮಿ ನಮ್ಮ ಹಕ್ಕು, ಪ್ರಾಣ ಬೇಕಾದರೂ ಕೊಡುತ್ತೇವೆ, ಭೂಮಿ ಕೊಡುವುದಿಲ್ಲ' ಎಂಬ ಘೋಷಣೆಗಳನ್ನು ಕೂಗಿದ ರೈತರು, ಕಳೆದ 128 ದಿನಗಳಿಂದ ನಿರಂತರವಾಗಿ ಹೋರಾಟ ನಡೆಸುತ್ತಿದ್ದರೂ ಸರ್ಕಾರ ಸ್ಪಂದಿಸುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಜಂಗಮಕೋಟೆ ಹೋಬಳಿ ವ್ಯಾಪ್ತಿಯ 13 ಗ್ರಾಮಗಳ ರೈತರ ಫಲವತ್ತಾದ ಕೃಷಿ ಭೂಮಿಯನ್ನು ಯಾವುದೇ ಕಾರಣಕ್ಕೂ ಕೈಗಾರಿಕೆ ಸ್ಥಾಪನೆಗಾಗಿ ಸ್ವಾಧೀನಪಡಿಸಿಕೊಳ್ಳಬಾರದು. ಕೃಷಿಗೆ ಯೋಗ್ಯವಲ್ಲದ ಭೂಮಿಯಲ್ಲಿ ಕೈಗಾರಿಕೆ ಸ್ಥಾಪಿಸುವುದಕ್ಕೆ ನಮ್ಮ ವಿರೋಧವಿಲ್ಲ. ಆದರೆ ಫಲವತ್ತಾದ ಕೃಷಿ ಭೂಮಿಯನ್ನು ಭೂಸ್ವಾಧೀನ ಪ್ರಕ್ರಿಯೆಯಿಂದ ಕೈಬಿಡಬೇಕು ಎಂದು ರೈತರು ಆಗ್ರಹಿಸಿದರು. ರೈತ ಸಂಘದ ಜಿಲ್ಲಾಧ್ಯಕ್ಷ ರಾಮನಾಥ್ ರೆಡ್ಡಿ ಮಾತನಾಡಿ, ರೈತ ಸಂಘ ಹಾಗೂ ಹಸಿರು ಸೇನೆ ಮತ್ತು ಭೂಸ್ವಾಧೀನ ವಿರೋಧಿ ಹೋರಾಟ ಸಮಿತಿ ವತಿಯಿಂದ ಕಳೆದ 128 ದಿನಗಳಿಂದ ಅನಿರ್ದಿಷ್ಟಾವಧಿ ಧರಣಿ ನಡೆಸಲಾಗುತ್ತಿದೆ. ಆದರೆ ಜಿಲ್ಲೆಯ ಚುನಾಯಿತ ಪ್ರತಿನಿಧಿಗಳಾಗಲಿ, ಸರ್ಕಾರವಾಗಲಿ ರೈತರ ಬೇಡಿಕೆಗಳನ್ನು ಆಲಿಸಿ ಸ್ಪಂದಿಸುವ ಕೆಲಸ ಮಾಡಿಲ್ಲ. ಸರ್ಕಾರ ರೈತ ಪರವೋ ಅಥವಾ ಕಾರ್ಪೊರೇಟ್ ಪರವೋ ಎಂಬುದನ್ನು ಸ್ಪಷ್ಟಪಡಿಸಬೇಕು. ರಾಜ್ಯ ಸರ್ಕಾರ ರೈತ ವಿರೋಧಿ ನೀತಿ ಅನುಸರಿಸುತ್ತಿದ್ದು, ರೈತರ ಪಾಲಿಗೆ ಸರ್ಕಾರ ಸತ್ತುಹೋಗಿದೆ. ಈ ಹಿನ್ನೆಲೆಯಲ್ಲಿ ಪಿಂಡ ಪ್ರಧಾನ ನಡೆಸಲಾಗಿದೆ. ರೈತರ ಫಲವತ್ತಾದ ಭೂಮಿಯನ್ನು ಉಳಿಸುವವರೆಗೂ ಹೋರಾಟ ಮುಂದುವರಿಯಲಿದೆ ಎಂದು ಹೇಳಿದರು.

ಭೂಸ್ವಾಧೀನ ವಿರೋಧಿ ಹೋರಾಟ ಸಮಿತಿ ಅಧ್ಯಕ್ಷ ಹೀರೇಬಲ್ಲ ಕೃಷ್ಣಪ್ಪ ಮಾತನಾಡಿ, ಜಂಗಮಕೋಟೆ ಹೋಬಳಿ ವ್ಯಾಪ್ತಿಯ 13 ಗ್ರಾಮಗಳ ಸುಮಾರು 2,390 ಎಕರೆ ಫಲವತ್ತಾದ ಕೃಷಿ ಭೂಮಿಯನ್ನು ಕೈಗಾರಿಕೆಗಾಗಿ ಸ್ವಾಧೀನಪಡಿಸಿಕೊಳ್ಳಲು ಸರ್ಕಾರ ಏಕೆ ಮುಂದಾಗಿದೆ ಎಂಬುದು ಅರ್ಥವಾಗುತ್ತಿಲ್ಲ ಕೃಷಿಯೇತರ ಭೂಮಿಯನ್ನು ಕೈಗಾರಿಕೆ ಸ್ಥಾಪನೆಗೆ ಬಳಸಿಕೊಳ್ಳಲಿ. 128ಕ್ಕೂ ಹೆಚ್ಚು ದಿನಗಳಿಂದ ರೈತರು ಹೋರಾಟ ನಡೆಸುತ್ತಿದ್ದರೂ ಸರ್ಕಾರ ಮೌನ ವಹಿಸಿದೆ. ದೇಶದ ಬೆನ್ನೆಲುಬಾದ ರೈತರ ಪರ ಸರ್ಕಾರ ನಿಂತು ನಮ್ಮ ಹೋರಾಟಕ್ಕೆ ಸ್ಪಂದಿಸಬೇಕು ಎಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಮಾಜಿ ಶಾಸಕ ಎಂ.ರಾಜಣ್ಣ, ರೈತ ಸಂಘದ ಜಿಲ್ಲಾಧ್ಯಕ್ಷ ರಾಮನಾಥ್ ರೆಡ್ಡಿ, ಜಿಲ್ಲಾ ಕಾರ್ಯದರ್ಶಿ ಗೋಪಾಲ್, ಜಂಗಮಕೋಟೆ 13 ಹಳ್ಳಿಗಳ ಭೂಸ್ವಾಧೀನ ವಿರೋಧಿ ಹೋರಾಟ ಸಮಿತಿ ಅಧ್ಯಕ್ಷ ಹೀರೇಬಲ್ಲ ಕೃಷ್ಣಪ್ಪ, ಕಾರ್ಯಾಧ್ಯಕ್ಷ ಅಶ್ವತ್ಥನಾರಾಯಣ ಗೌಡ, ಉಪಾಧ್ಯಕ್ಷ ಅಜಿತ್ ಕುಮಾರ್, ತಾದೂರು ಮಂಜುನಾಥ್, ನಾರಾಯಣಸ್ವಾಮಿ, ಅಂಬಿಕಾ, ಗೌರಮ್ಮ, ಲಕ್ಷ್ಮಮ್ಮ, ರತ್ನಮ್ಮ ಹಾಗೂ ಹೋರಾಟ ಸಮಿತಿ ಸದಸ್ಯರು ಮತ್ತು ರೈತರು ಭಾಗವಹಿಸಿದ್ದರು.

# ಗ್ರಾಮೀಣ ವಿದ್ಯಾರ್ಥಿಗಳಿಂದ ನೀಟ್‌ನಲ್ಲಿ ಅದ್ಭುತ ಸಾಧನೆ




• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ಭಾಲ್ಕಿ ತಾಲೂಕಿನ ಡೈಮಂಡ್ ಸ್ವತಂತ್ರ ಪದವಿಪೂರ್ವ ಕಾಲೇಜು 2025–26ನೇ ಸಾಲಿನ ನೀಟ್ ಪರೀಕ್ಷೆಯಲ್ಲಿ ಮತ್ತೊಮ್ಮೆ ಗಮನಾರ್ಹ ಸಾಧನೆ ದಾಖಲಿಸಿದೆ. ಕಾಲೇಜಿನ 450ಕ್ಕೂ ಅಧಿಕ ವಿದ್ಯಾರ್ಥಿಗಳು ನೀಟ್ ಪರೀಕ್ಷೆಯಲ್ಲಿ ಅರ್ಹತೆ ಪಡೆದಿದ್ದು, ಅವರಲ್ಲಿ 50ಕ್ಕೂ ಹೆಚ್ಚು ವಿದ್ಯಾರ್ಥಿಗಳು ವೈದ್ಯಕೀಯ ಶಿಕ್ಷಣಕ್ಕೆ ಪ್ರವೇಶ ಪಡೆಯುವ ಅರ್ಹತೆ ಗಳಿಸಿದ್ದಾರೆ. ಈ ಮೂಲಕ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳ ಪ್ರತಿಭೆ ರಾಜ್ಯಮಟ್ಟದಲ್ಲಿ ಮತ್ತೊಮ್ಮೆ ಸದ್ದು ಮಾಡಿದೆ.

ಕನ್ನಡ, ಆಂಗ್ಲ, ಮರಾಠಿ ಹಾಗೂ ಉರ್ದು ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳು ಅತ್ಯುತ್ತಮ ಅಂಕಗಳೊಂದಿಗೆ ನೀಟ್ ಪರೀಕ್ಷೆಯಲ್ಲಿ ಯಶಸ್ಸು ಸಾಧಿಸಿರುವುದು ಕಾಲೇಜಿನ ಶೈಕ್ಷಣಿಕ ಗುಣಮಟ್ಟಕ್ಕೆ ಸಾಕ್ಷಿಯಾಗಿದೆ.

ಕಾಲೇಜಿನ ಅಲ್ಮಾಸ್ ಫಾತಿಮಾ 570 ಅಂಕ (98.70%) ಗಳಿಸಿ ಅಗ್ರಸ್ಥಾನ ಪಡೆದಿದ್ದಾರೆ. ಅಂಜಲಿ ವಿಠ್ಠಲ 560, ಸಿದ್ರಾ ಫಾತಿಮಾ 550, ಪೂಜಾ ಕಾಶಿನಾಥ 543, ಕಿರಣ ರಾಜಪ್ಪ 532, ಕೀರ್ತಿ ನಾಗನಾಥ 522, ಸ್ವಾತಿ ರಾಜಕುಮಾರ 519, ಬಾಹುದ್ದೀನ್ 500 ಅಂಕಗಳೊಂದಿಗೆ ಉತ್ತಮ ಸಾಧನೆ ಮಾಡಿದ್ದಾರೆ. ಅಲ್ಲದೆ, ಹಲವು ವಿದ್ಯಾರ್ಥಿಗಳು 400ಕ್ಕೂ ಅಧಿಕ ಅಂಕಗಳನ್ನು ಪಡೆದು ವೈದ್ಯಕೀಯ ಪ್ರವೇಶಕ್ಕೆ ಸ್ಪರ್ಧಾತ್ಮಕ ಸ್ಥಾನ ಗಳಿಸಿದ್ದಾರೆ. ಅಂಗವಿಕಲ ಕೋಟಾದಡಿ ಅನ್ನಪೂರ್ಣ 85.21% ಅಂಕಗಳೊಂದಿಗೆ 3958ನೇ ರ್‍ಯಾಂಕ್ ಪಡೆದು ವಿಶೇಷ ಸಾಧನೆ ಮಾಡಿದ್ದಾರೆ.

ಸಂಸ್ಥೆಯ ಅಧ್ಯಕ್ಷ ಎಸ್.ಕೆ.ಮಸ್ತಾನವಲಿ ಮಾತನಾಡಿ, "ವಿದ್ಯಾರ್ಥಿಗಳ ಪರಿಶ್ರಮ, ಪೋಷಕರ ಸಹಕಾರ ಮತ್ತು ಅನುಭವಿ ಬೋಧಕರ ಮಾರ್ಗದರ್ಶನವೇ ಈ ಯಶಸ್ಸಿನ ಮೂಲ ಕಾರಣ. ಈ ಬಾರಿ ಸುಮಾರು 50 ವಿದ್ಯಾರ್ಥಿಗಳು ವೈದ್ಯಕೀಯ ಶಿಕ್ಷಣಕ್ಕೆ ಅರ್ಹತೆ ಪಡೆದಿದ್ದಾರೆ. ಆಗಸ್ಟ್ 3ರಿಂದ ಆರಂಭವಾಗುವ ನೀಟ್ ಪುನರಾವರ್ತಿತ ಬ್ಯಾಚ್‌ಗೆ ವಿದ್ಯಾರ್ಥಿಗಳು ಸೇರ್ಪಡೆಗೊಂಡು ತಮ್ಮ ವೈದ್ಯರಾಗುವ ಕನಸನ್ನು ನನಸು ಮಾಡಿಕೊಳ್ಳಬೇಕು" ಎಂದು ಕರೆ ನೀಡಿದರು. ಸಂಸ್ಥೆಯ ಕಾರ್ಯದರ್ಶಿ ವೈ.ಮಾಧವರಾವ ಅವರು, "ಕಡಿಮೆ ಶುಲ್ಕದಲ್ಲಿ ಗುಣಮಟ್ಟದ ಶಿಕ್ಷಣ ನೀಡುವ ಮೂಲಕ ಗ್ರಾಮೀಣ ವಿದ್ಯಾರ್ಥಿಗಳನ್ನು ರಾಷ್ಟ್ರೀಯ ಮಟ್ಟದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಜ್ಜುಗೊಳಿಸುವುದು ನಮ್ಮ ಸಂಸ್ಥೆಯ ಧ್ಯೇಯವಾಗಿದೆ" ಎಂದು ಹೇಳಿದರು.

ಈ ಸಾಧನೆಗೆ ಟ್ರಸ್ಟ್ ಕಾರ್ಯದರ್ಶಿ ಶೇಖ್ ಗೌಸಿಯಾ, ಮುಖ್ಯಗುರು ಧನರಾಜ ನೀಲಂಗೆ, ಪ್ರಾಂಶುಪಾಲ ಶರಣು ಸಿರ್ಸೆ, ಮುಖ್ಯ ಆಡಳಿತಾಧಿಕಾರಿ ಅಶ್ವಿನ ಭೋಸ್ಲೆ, ಆಡಳಿತಾಧಿಕಾರಿಗಳು ಹಾಗೂ ಬೋಧಕ–ಬೋಧಕೇತರ ಸಿಬ್ಬಂದಿ ವಿದ್ಯಾರ್ಥಿಗಳನ್ನು ಅಭಿನಂದಿಸಿ ಶುಭ ಕೋರಿದರು.

## ವಿವಿಧ ಗ್ರಾ.ಪಂ.ಗಳಿಗೆ ಜಿಪಂ ಉಪ ಕಾರ್ಯದರ್ಶಿ ಶಶಿಕಾಂತ್ ಶಿವಪುರೆ ಭೇಟಿ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಕುರುಗೋಡು ತಾಲೂಕಿನ ಸೋಮಸಮುದ್ರ ಹಾಗೂ ದಮ್ಮೂರು ಗ್ರಾಮ ಪಂಚಾಯತಿಗಳಿಗೆ ಜಿಲ್ಲಾ ಪಂಚಾಯತಿಯ ಉಪ ಕಾರ್ಯದರ್ಶಿ ಶಶಿಕಾಂತ್ ಶಿವಪುರೆ ಅವರು ಸೋಮವಾರ ಭೇಟಿ ನೀಡಿ, ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳು ಹಾಗೂ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಿದರು.



ಈ ಸಂದರ್ಭದಲ್ಲಿ ವಿಬಿ–ಜಿ ರಾಮ್–ಜಿ ಯೋಜನೆಯಡಿ ಸಕ್ರಿಯವಾಗಿರುವ ಕೂಲಿಕಾರರಿಗೆ ಎನ್‌ಎಂಆರ್ ತೆಗೆದಿರುವುದರ ಕುರಿತು ಸಮಗ್ರ ಪರಿಶೀಲನೆ ನಡೆಸಿದರು. ನಂತರ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಹಾಗೂ ಕಾಮಗಾರಿ ಸ್ಥಳಗಳಿಗೆ ಭೇಟಿ ನೀಡಿ ಪ್ರಮುಖ ಸೂಚನೆಗಳನ್ನು ನೀಡಿದರು.

ಈ ವೇಳೆ ಮಾತನಾಡಿದ ಅವರು, ಈಗಾಗಲೇ ಎನ್‌ಎಮ್‌ಎಮ್‌ಎಸ್ ಹಾಜರಾತಿ ಹಾಕಿರುವ ಕೂಲಿಕಾರರ ಮಾಹಿತಿಯನ್ನು ಪಡೆದುಕೊಂಡು, ಪ್ರತಿಯೊಬ್ಬ ಕೂಲಿಕಾರರಿಗೂ ಕಡ್ಡಾಯವಾಗಿ ಡಿಜಿಟಲ್ ಹಾಜರಾತಿ ನಮೂದಿಸಬೇಕೆಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಗ್ರಾಮಸ್ಥರ ಬೇಡಿಕೆಗೆ ಅನುಗುಣವಾಗಿ ತಕ್ಷಣವೇ ಕೂಲಿಕಾರರಿಗೆ ಕೆಲಸ ಒದಗಿಸಬೇಕು. ವಿಬಿ–ಜಿ ರಾಮ್–ಜಿ ಯೋಜನೆಯಡಿಯ ವೈಯಕ್ತಿಕ ಕಾಮಗಾರಿಗಳಾದ ದನದ ಶೆಡ್, ಸೋಕ್ ಪಿಟ್, ಕುರಿ ಶೆಡ್ ಹಾಗೂ ಕೃಷಿ ಹೊಂಡ ಕಾಮಗಾರಿಗಳನ್ನು ತಕ್ಷಣವೇ ಆರಂಭಿಸಲು ಆಯಾ ಪಂಚಾಯತಿ ಸಿಬ್ಬಂದಿಗೆ ನಿರ್ದೇಶನ ನೀಡಿದರು. ಸ್ವಸಹಾಯ ಸಂಘಗಳ ಮಹಿಳೆಯರ ಮೂಲಕ ಮನೆ–ಮನೆಗೆ ಭೇಟಿ ನೀಡಿ, ವಿಬಿ–ಜಿ ರಾಮ್–ಜಿ ಯೋಜನೆಯಡಿ ಸಿಗುವ ವೈಯಕ್ತಿಕ ಕಾಮಗಾರಿಗಳ ಫಲಾನುಭವಿಗಳ ಪಟ್ಟಿಯನ್ನು ಸಿದ್ಧಪಡಿಸಲು ತಿಳಿಸಿದರು.

ನೇರವಾಗಿ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿದ ಉಪ ಕಾರ್ಯದರ್ಶಿಗಳು, ಅಲ್ಲಿದ್ದ ಕೂಲಿಕಾರರೊಂದಿಗೆ ಚರ್ಚಿಸಿ ಯೋಜನೆ ಕುರಿತು ಅರಿವು ಮೂಡಿಸಿದರು.

ಈ ಸಂದರ್ಭದಲ್ಲಿ ಕುರುಗೋಡು ತಾಪಂ ಗ್ರಾಮೀಣ ಉದ್ಯೋಗ ವಿಭಾಗದ ಸಹಾಯಕ ನಿರ್ದೇಶಕ ಶಿವರಾಮರೆಡ್ಡಿ, ದಮ್ಮೂರು ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ತಸ್ಲಿಮಾ ಭಾನು, ಸೋಮಸಮುದ್ರ ಗ್ರಾ.ಪಂ. ಕಾರ್ಯದರ್ಶಿ ಗೋವಿಂದಪ್ಪ, ಜಿಲ್ಲಾ ಐ.ಇ.ಸಿ ಸಂಯೋಜಕ ನಟರಾಜ, ತಾಂತ್ರಿಕ ಸಂಯೋಜಕರಾದ ಮಲ್ಲಿಕಾರ್ಜುನ, ಅರುಣಾ ಜ್ಯೋತಿ, ಬಿ.ಎಫ್.ಟಿ ಹೊನ್ನುರ ಸ್ವಾಮಿ, ಗ್ರಾಮ ಕಾಯಕ ಮಿತ್ರರಾದ ಲಕ್ಷ್ಮಿ, ಶಾಂತಮ್ಮ ಹಾಗೂ ಗ್ರಾಮ ಪಂಚಾಯತಿ ಸಿಬ್ಬಂದಿ, ಸಾರ್ವಜನಿಕರು ಉಪಸ್ಥಿತರಿದ್ದರು.

## ಆಧ್ಯಾತ್ಮದ ಜೊತೆಗೆ ಲೌಕಿಕ ವಿದ್ಯೆಯಲ್ಲೂ ಸಾಧನೆ: ವೀರಣ್ಣ ಅಣ್ಣೀಗೇರಿ

• **ಮಲ್ಲಮ್ಮ ನುಡಿ ವಾರ್ತೆ ಕುಕನೂರು**

ಪಟ್ಟಣದ ಅನ್ನದಾನೀಶ್ವರ ಮಠದ ಪೂಜ್ಯ ಮಹಾದೇವ ಮಹಾಸ್ವಾಮಿಗಳು ಆಧ್ಯಾತ್ಮದ ಜೊತೆಗೆ ಲೌಕಿಕ ವಿದ್ಯೆಯಲ್ಲೂ ಸಾಧನೆ ಮಾಡಿರುವುದು ನಮ್ಮೆಲ್ಲರಿಗೂ ಹೆಮ್ಮೆ. ಕಠಿಣವಾದ ಅಖಿಲ ಭಾರತ ವಕೀಲರ ಪರೀಕ್ಷೆಯನ್ನು ಅವರು ಪಾಸ್ ಮಾಡಿರುವುದು ಅವರ ಛಲ ಮತ್ತು ಪರಿಶ್ರಮಕ್ಕೆ ಸಾಕ್ಷಿ. ಅವರ ಈ ಕಾನೂನು ಜ್ಞಾನವು ಬಡವರಿಗೆ ನ್ಯಾಯ ಕೊಡಿಸುವ ಕೆಲಸಕ್ಕೆ ಬಳಕೆಯಾಗಲಿ ಎಂದು ಹಿರಿಯರಾದ ವೀರಣ್ಣ ಅಣ್ಣೀಗೇರಿ ಹೇಳಿದರು.



ಅವರು ಕುಕನೂರ ಪಟ್ಟಣದ ಅನ್ನದಾನೀಶ್ವರ ಮಠದಲ್ಲಿ ಅಖಿಲ ಭಾರತ ವಕೀಲರ ಪರೀಕ್ಷೆನಲ್ಲಿ ಉತ್ತೀರ್ಣರಾಗಿ ವಕೀಲ ವೃತ್ತಿಗೆ ಅರ್ಹತೆ ಪಡೆದ ಪೂಜ್ಯ ಮಹಾದೇವ ಮಹಾಸ್ವಾಮಿಗಳಿಗೆ ಭಕ್ತ ಮಂಡಳಿಯ ವತಿಯಿಂದ ಸನ್ಮಾನಿಸಿ ಮಾತನಾಡುತ್ತಾ "ಸಾಮಾನ್ಯವಾಗಿ ಸ್ವಾಮೀಜಿಗಳು ಧಾರ್ಮಿಕ ಕಾರ್ಯಕ್ಕೆ ಸೀಮಿತರಾಗಿರುತ್ತಾರೆ. ಆದರೆ ನಮ್ಮ ಪೂಜ್ಯರು ಸಮಾಜದಲ್ಲಿನ ಅನ್ಯಾಯದ ವಿರುದ್ಧ ಹೋರಾಡಲು ಕಾನೂನು ಅಸ್ತ್ರವನ್ನು ಪಡೆದಿದ್ದಾರೆ. ಇದು ಇಂದಿನ ಯುವ ಸನ್ಯಾಸಿಗಳಿಗೆ ಮಾದರಿಯಾಗಿದೆ" ಎಂದು ಶ್ಲಾಘಿಸಿದರು.

ನಂತರ ಎಮ್.ಎಸ್. ಹಿರೇಮಠ ಅವರು ಮಾತನಾಡಿ "ಅನ್ನದಾನೀಶ್ವರರ ಕೃಪೆಯಿಂದ ನಮ್ಮ ಮಠಕ್ಕೆ ಇಂತಹ ವಿದ್ಯಾವಂತ ಸ್ವಾಮೀಜಿ ದೊರೆತಿದ್ದಾರೆ. ವಕೀಲರಾಗಿ ಅವರು ಸಂವಿಧಾನದ ಅರಿವನ್ನು ಜನರಿಗೆ ಮೂಡಿಸುವ ಜೊತೆಗೆ ಸಮಾಜಮುಖಿ ಕಾರ್ಯಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಮಾಡುತ್ತಾರೆ ಎಂಬ ವಿಶ್ವಾಸವಿದೆ" ಎಂದು ಹೇಳಿದರು.

ಆರ್ ಪಿ ರಾಜೂರು ಮಾತನಾಡಿ ಪೂಜ್ಯರು ಕಲಿಯುವಿಕೆಗೆ ಅಂತ್ಯವಿಲ್ಲ ಎಂಬುದನ್ನು ಮತ್ತೊಮ್ಮೆ ಸಾಬೀತುಪಡಿಸಿದ್ದಾರೆ. ಸ್ವಾಮೀಜಿ ಸ್ಥಾನದಲ್ಲಿದ್ದರೂ, ನಾನು ಇನ್ನೂ ವಿದ್ಯಾರ್ಥಿ ಎಂಬ ಭಾವನೆಯಿಂದ ಅವರು ೦ಋಃಇ ನಂತಹ ಕಠಿಣ ಪರೀಕ್ಷೆಗೆ ತಯಾರಿ ನಡೆಸಿ ಜಯಗಳಿಸಿದ್ದಾರೆ. ಜ್ಞಾನಕ್ಕೆ ಯಾವುದೇ ಗಡಿಯಿಲ್ಲ, ವಯಸ್ಸಿನ ಮಿತಿಯಿಲ್ಲ ಎಂಬ ಸಂದೇಶವನ್ನು ಅವರು ಇಂದಿನ ಯುವ ಪೀಳಿಗೆಗೆ ನೀಡಿದ್ದಾರೆ ಎಂದರು.

ಇದೇ ವೇಳೆ ಪೂಜ್ಯ ಮಹಾದೇವ ಮಹಾಸ್ವಾಮಿಗಳು ಸನ್ಮಾನಕ್ಕೆ ಕೃತಜ್ಞತೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಪಟ್ಟಣದ ಹಿರಿಯರಾದ ಬಸಣ್ಣ ದಿವಟರ, ಬಸವನಗೌಡ ಮಾಲೀಪಾಟೀಲ, ಶರಣಪ್ಪ ಗುತ್ತಿ, ಶರಣಪ್ಪ ಕೊಪ್ಪದ, ಮಲ್ಲಣ್ಣ ಕರಮುಡಿ, ಗಂಗಾಧರ ಅವಟೇರ, ಅಶೋಕಯ್ಯ ಹರಿಶಂಕರಬಂಡಿ ಸೇರಿದಂತೆ ಭಕ್ತರು ಉಪಸ್ಥಿತರಿದ್ದರು.

# ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ವತಿಯಿಂದ ಅದ್ದೂರಿಯಾಗಿ ಜರುಗಿದ ಪತ್ರಿಕಾ ದಿನಾಚರಣೆ

• **ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ**

ಹಗರಿಬೊಮ್ಮನಹಳ್ಳಿಯಲ್ಲಿ ನಡೆದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ.ವತಿಯಿಂದ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ ಪ್ರಶಸ್ತಿ ಪ್ರಧಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು.



ದೀಪಬೆಳಗುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಪೂಜ್ಯರುಗಳಾದ ನಂದಿಪುರ ಮಠದ ಮಹೇಶ್ವರ ಸ್ವಾಮಿಗಳು, ಹಾಗೂ ಹಗರಿಬೊಮ್ಮನಹಳ್ಳಿಯ ಹಾಲಸಿದ್ದೇಶ್ವರ ಸ್ವಾಮೀಜಿಗಳು ಪತ್ರಕರ್ತರು ಇಂದಿನಗಳಲ್ಲಿ ಅವರು ಅನುಭವಿಸುತ್ತಿರುವ ನೋವುಗಳ ಕುರಿತು ಮಾತನಾಡಿದರು.

**ಪ್ರಶಸ್ತಿ ಪುರಸ್ಕೃತರು:** ಕ.ಕಾ.ಪ.ಧ್ವನಿ ನೀಡುತ್ತೀರುವ, ಪ್ರತಿಷ್ಠಿತ 'ಜಾನಪದ ರತ್ನ' ಪ್ರಶಸ್ತಿಗೆ ನಾಡಿನ ಹೆಸರಾಂತ ಜೋಗತಿ ನೃತ್ಯ ಕಲಾವಿದೆ ಹೊಸಪೇಟೆ ತಾಲೂಕಿನ ಗೊಲ್ಲರಹಳ್ಳಿಯ ರಾಮಕ್ಕ ಜೋಗತಿ, ಹಾಗೂ ಹಗರಿಬೊಮ್ಮನಹಳ್ಳಿ ತಾಲೂಕಿನ ಯಡ್ರಮ್ಮನಹಳ್ಳಿಯ ಖ್ಯಾತ ತೊಗಲುಗೊಂಬೆ ಕಲಾವಿದರಾದ ಕಿಳ್ಳಿಕ್ಯಾತರ ನಿಂಗಪ್ಪ ಅವರುಗಳು ಆಯ್ಕೆಗೊಂಡಿದ್ದಾರೆ.

ಉದ್ಯಮ ರತ್ನ ಪ್ರಶಸ್ತಿಗೆ ತಾಲೂಕಿನ ಉಪನಾಯಕನಹಳ್ಳಿಯ ಶ್ರೀ ಲಕ್ಷ್ಮೀ ಪೌಲ್ಟ್ರಿ ಫಾರಂ ನ ವಂಶಿ ಸುಬ್ಬಾರೆಡ್ಡಿ ,ಲೋಕಪ್ಪನ ಹೊಲದ ಎಸ್‌ಎಲ್‌ಆರ್ ಮೆಟಾಲಿಕ್ಸ್ ನ ರಾಜಕುಮಾರ ಗೋಯೆಲ್, ಹಂಪಾಪಟ್ಟಣ ಬಳಿಯ ಆರ್ ಬಿಎಸ್‌ಎಸ್‌ಎನ್‌ನ ಆಜಯ್ ಎಸ್ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಶಿಕ್ಷಣರತ್ನ ಪ್ರಶಸ್ತಿಗೆ ಕೂಡ್ಲಿಗಿ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಮೈಲೇಶ್ ಬೇವೂರ್, ಸಾಹಿತ್ಯ ರತ್ನ' ಪ್ರಶಸ್ತಿಗೆ ಜಿಲ್ಲೆಯ ಹಿರಿಯ ಸಾಹಿತಿ ಹಿ.ಮ. ಕೊಟ್ರಯ್ಯ, ನಾಟಿ ವೈದ್ಯಕೀಯ ರತ್ನ ಪ್ರಶಸ್ತಿಗೆ . ಹರಪನಹಳ್ಳಿ ತಾಲೂಕಿನ ಬಾಗಳಿಯ ಖ್ಯಾತ ನಾಟಿ ವೈದ್ಯರಾದ ಡಾ.ಬಿ.ಬಿ.ಹೊಸೂರಪ್ಪ ಅವರ ಮುಡಿಗೇರಿಸಿಕೊಂಡಿದ್ದಾರೆ.

ಇನ್ನೂ ಆರಕ್ಷಕ ರತ್ನ' ಪ್ರಶಸ್ತಿಗೆ ಹಗರಿಬೊಮ್ಮನಹಳ್ಳಿ ಪೊಲೀಸ್ ಇಲಾಖೆಯ ಮಲ್ಲೇಶ್ ನಾಯ್ಕ್, ದಶರಥ, ಹಾಗೂ ಮುಖ್ಯಮಂತ್ರಿ ಪದಕಕ್ಕೆ ಭಾಜನರಾಗಿರುವ ಕೂಡ್ಲಿಗಿಯ ಕೊಟ್ರೇಶ್ ರವರು ಭಾಜನರಾದರೆ ಸಾಹಿತ್ಯ ರತ್ನ ಪ್ರಶಸ್ತಿಗೆ ಕುಂ.ರವಿ ಭಾಜನರಾದರು

ಹಗರಿಬೊಮ್ಮನಹಳ್ಳಿ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯ ವೈದ್ಯರಾದ ಶ್ರೀ ಮತಿ ಡಾ.ಲಕ್ಷ್ಮೀದೇವಿ, ಶ್ರೀ ಡಾ.ವಿನಾಯಕ ಶ್ರೀ ಡಾ.ತಿಪ್ಪೇಸ್ವಾಮಿ ಹಾಗೂ ಶ್ರೀ ರಾಜೇಶ್ ನಾಯ್ಕ್ ರವರಿಗೆ ಆರೋಗ್ಯರತ್ನ ಪ್ರಶಸ್ತಿ ತಮ್ಮದಾಗಿಸಿಕೊಂಡಿದ್ದಾರೆ ಅಲ್ಲದೆ ಆರೋಗ್ಯ ಇಲಾಖೆ ಆಂಬುಲೆನ್ಸ್ ಡ್ರೈವರ್ ಮೊಹಮ್ಮದ್ ರಿಗೆ ಚಾಲಕರತ್ನ ಪ್ರಶಸ್ತಿ ದೊರೆತಿದೆ.

ಉಳಿದಂತೆ ಹಗರಿಬೊಮ್ಮನಹಳ್ಳಿ ಪಟ್ಟಣದ ಕನ್ನಡಪರ ಹೋರಾಟಗಾರ ಹಾಗು ಸಮಾಜಿಕ ಕಳಕಳಿ ಹೊಂದಿರುವ ವಿಶ್ವನಾಥ ರಿಗೆ ಹೆಮ್ಮೆಯ ಕನ್ನಡಿಗ ಪ್ರಶಸ್ತಿ ದೊರಕಿದೆ, ಕಂದಾಯ ಇಲಾಖೆಯ ಆಸಿಫ್ ಅಲಿಗೆ 'ಸೇವಾ ರತ್ನ ಪ್ರಶಸ್ತಿ, ಯುವ ರೈತ ಎ.ರೇವಪ್ಪಗೆ ರೈತ ಸೇವಾ ರತ್ನ ಪ್ರಶಸ್ತಿ, ರಮೇಶ ಹಂಚಿನಮನಿಗೆ ರಂಗಭೂಮಿ ಕಲಾ ರತ್ನ' ಪ್ರಶಸ್ತಿ ದೊರೆತಿದೆ.

ಹಗರಿಬೊಮ್ಮನಹಳ್ಳಿ ಪಟ್ಟಣದ ಮಹರ್ಷಿ ವಾಲ್ಮೀಕಿ ಕಲ್ಯಾಣ ಮಂಟಪದಲ್ಲಿ ಆಯೋಜಿಸಲಾದ ಪತ್ರಿಕಾ ದಿನಾಚರಣೆ ಸಮಯದಲ್ಲಿ ಕಲೆ,ಸಾಹಿತ್ಯ, ರಂಗಭೂಮಿ, ಉದ್ಯಮ, ಆರೋಗ್ಯ, ಸಂಗೀತ, ಸಾಹಿತ್ಯ ಹಾಗು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಸಾಧಕರಿಗೆ ಪ್ರಶಸ್ತಿಗಳನ್ನ ನೀಡಿ ಗೌರವಿಸಲಾಯಿತು .

ಇನ್ನು ಈ ಕಾರ್ಯಕ್ರಮದಲ್ಲಿ ಕ.ಕಾ.ನಿ.ಪ.ಧ್ವನಿ ರಾಜ್ಯಧ್ಯಕ್ಷ ಬಂಗ್ಲೆ ಮಲ್ಲಿಕಾರ್ಜುನ್, ಕ.ಕಾ.ನಿ.ಪ. ಧ್ವನಿ ತಾಲೂಕು ಅಧ್ಯಕ್ಷ ಜಿ. ಸೋಮನಾಥ್, ಮಾತನಾಡಿ ಮಾಜಿ ಪುರಸಭೆ ಅಧ್ಯಕ್ಷ ಮರಿ ರಾಮಪ್ಪ ಕಾಂಗ್ರೆಸ್ ಮುಖಂಡರಾದ ಹೆಗ್ಡಾಳ್ ರಾಮಣ್ಣ, ಮುಖಂಡರಾದ ದೇವೇಂದ್ರಪ್ಪ, ಜಿಲ್ಲಾ ಗ್ಯಾರೆಂಟಿ ಯೋಜನೆ ಅನುಷ್ಠಾನ ಸಮಿತಿ ಉಪಾಧ್ಯಕ್ಷರಾದ ಜಂದಿ ಸಾಬ್, ಹಗರಿಬೊಮ್ಮನಹಳ್ಳಿ ಗ್ಯಾರೆಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಸೊನ್ನದ ಗುರು ಬಸವರಾಜ್ ,ಹಗರಿಬೊಮ್ಮನಹಳ್ಳಿ ಗ್ಯಾರೆಂಟಿ ಯೋಜನೆ ಅನುಷ್ಠಾನ ಸಮಿತಿ ಉಪಾಧ್ಯಕ್ಷ ಪರಶುರಾಮ್, ತಾಲೂಕು ವಾಲ್ಮೀಕಿ ಮಹಾಸಭಾ ಮಾಜಿ ಉಪಾಧ್ಯಕ್ಷ ಡಿಶ್ ಮಂಜುನಾಥ್, ಮುಖಂಡರಾದ ಎಚ್ ಪ್ರಭಾಕರ್, ದೇವೇಂದ್ರಪ್ಪ ಅಂಬಳಿ, ಗುಂಡ್ರು ಹನುಮಂತಪ್ಪ, ಇನ್ನು ಮುಂತಾದವರು ಉಪಸ್ಥಿತಿಯಲ್ಲಿದ್ದರು.

# ಜನ್ಮದಾತಾದಿಂದ ಅನ್ನದಾತನಿಗೆ ಸನ್ಮಾನಿಸುತ್ತಿರುವುದು ಹೆಮ್ಮೆಯ ವಿಷಯ



• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಇಂದು ನಾವು ಒಬ್ಬ ಜನಪರ ಹೋರಾಟಗಾರರ, ದಣಿವರಿಯದ ನಾಯಕ ನ್ಯಾಯವಾದಿ ಹಣಮಂತರಾಯ ಅಟ್ಟೂರ ಅವರ ಜನ್ಮದಿನವನ್ನು ಅತ್ಯಂತ ಸರಳವಾಗಿ ಹಾಗೂ ಸಮಾಜಮುಖಿ ಚಿಂತನೆಯೊಂದಿಗೆ ಆಚರಿಸುತ್ತಿದ್ದೇವೆ ಎಂದು ಹಿರಿಯ ಸಾಹಿತಿಗಳಾದ ಪ್ರೋ. ವಾಸುದೇವ ಸೇಡಂ ಹೇಳಿದರು.ಇಂದು ಜನ್ಮದಾತಾ ವಿ ಎಸ್ ಅಟ್ಟೂರ ಸ್ಮಾರಕ

ಚಾರಿಟೇಬಲ ಟ್ರಸ್ಟ್ ವತಿಯಿಂದ ನಗರದ ಸರಕಾರಿ ಕಿವುಡ ಹಾಗೂ ಮೂಕ ಮಕ್ಕಳ ಶಾಲೆಯಲ್ಲಿ ನ್ಯಾಯವಾದಿ ಹಣಮಂತರಾಯ ಅಟ್ಟೂರ ಅವರ ಜನ್ಮ ದಿನದ ನಿಮಿತ್ಯ ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತ ಅಟ್ಟೂರ ಅವರು ಸುಮಾರು 29ವರ್ಷ ಸಾಮಾಜಿಕ, ಸಂಸ್ಕೃತಿಕ, ಹೋರಾಟ ಬದುಕು ಸಾಗಿಸಿ ಪರರ ಕಷ್ಟದಲ್ಲಿ ಜೀವನ ಸಾಗಿಸಿ, ಅವರ ಜೀವನ ಚರಿತ್ರೆಯ ಪುಸ್ತಕವೇ ನಾನೆ ಬರೆದಿರುವುದು ಅವರ ಸಮಾಜ ಮುಖಿ ಕಾರ್ಯಕ್ಕೆ ಅರ್ಥಪೂರ್ಣ, ಹಾಗೂ ನಾನು ಸನ್ಮಾನ ಮಾಡೋಕೋಳ್ಳದೆ ಮತ್ತೊಬ್ಬರಿಗೆ ಸನ್ಮಾನ ಮಾಡುವದರೊಂದಿಗೆ ತೃಪ್ತಿದಾಯಕ ಆಚರಣೆ ಮತ್ತೊಂದಿಲ್ಲ ಎಂದು ಭಾವಿಸಿದ್ದೇನೆ. ಈ ಶಾಲೆಯಲ್ಲಿ ಪ್ರತಿಯೊಬ್ಬರೂ ವಿಶಿಷ್ಟ ಪ್ರತಿಭೆಯನ್ನು ಹೊಂದಿದ್ದೀರಿ. ಕೇಳುವ ಅಥವಾ ಮಾತನಾಡುವ ಸಾಮರ್ಥ್ಯ ಮಾತ್ರವ್ಯಕ್ತಿಯ ಸಾಮರ್ಥ್ಯವನ್ನು ನಿರ್ಧರಿಸುವುದಿಲ್ಲ. ನಿಮ್ಮ ಆತ್ಮವಿಶ್ವಾಸ, ಪರಿಶ್ರಮ, ಶಿಸ್ತು ಮತ್ತು ಕನಸುಗಳೇ ನಿಮ್ಮ ಯಶಸ್ಸಿನ ನಿಜವಾದ ಶಕ್ತಿ. ನಿಮ್ಮ ಸಾಧನೆಗಳು ಸಮಾಜಕ್ಕೆ ಪ್ರೇರಣೆಯಾಗಲಿ ಎಂದು ಮಾರ್ಮಿಕವಾಗಿ ನುಡಿದರು. ವೇದಿಕೆಯ ಮೇಲೆ ಅಧಿಕ್ಷರಾದ ಡಾ. ಲೋಕೇಶ, ಪ್ರಕಾಶ ಭಜಂತ್ರಿ, ಶ್ರೀದೇವಿ ಅಟ್ಟೂರ ಉಪಸ್ಥಿತರಿದ್ದರು. ಇದೆ ಸಂಧರ್ಭದಲ್ಲಿ ಪ್ರಗತಿ ಪರ ರೈತರಾದ ಲಕ್ಷ್ಮಿಕಾಂತ ಟೆಂಗಳಿ, ಶಿಕ್ಷಕರಾದ ಜಯಶ್ರೀ, ಸಂತೋಷ, ಬಾಲಪ್ರತಿಭೆಗಳಾದ ಕು. ಹಣಮಂತ, ಸಿದ್ಧಲಿಂಗ ರೆಡ್ಡಿ ಅವರಿಗೆ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಶಿಕ್ಷಕರು, ಬಾಲಕರು ಸೇರಿದಂತೆ ಅನೇಕ ಜನರು ಭಾಗವಹಿಸಿದರು.

ಮಾದರಿಯಾದ ಮಹಾನ ವ್ಯಕ್ತಿಯಾಗಿ ಆಡಂಬರದ ಕಾರ್ಯಕ್ರಮಕ್ಕೆ ತಿಲಂಜಲಿ ಹೇಳಿದರು. ಕಾರ್ಯಕ್ರಮದಲ್ಲಿ ನ್ಯಾಯವಾದಿ ಹಣಮಂತರಾಯ ಅಟ್ಟೂರ ಮಾತನಾಡುತ್ತ

ಈ ವರ್ಷ ಮಳೆಯ ಕೊರತೆಯಿಂದ ನಮ್ಮ ರೈತರು ಅನೇಕ ಸಂಕಷ್ಟಗಳನ್ನು ಎದುರಿಸುತ್ತಿದ್ದಾರೆ. ಆದ್ದರಿಂದ ಶಾಲು, ಹಾರ, ಕೇಕ್ ಮುಂತಾದ ಆಡಂಬರಗಳಿಗೆ ಖರ್ಚು ಮಾಡುವ ಬದಲು, ಆ ದಿನವನ್ನು ರೈತರಿಗೆ ಸಮರ್ಪಿಸಿ, ಈ ವರ್ಷ ಪ್ರತಿಭಾವಂತ ಮಕ್ಕಳಿಗೆ ಗೌರವಿಸುವ ಮೂಲಕ ಆಚರಿಸುತ್ತಿದ್ದಾರೆ. ಇದಕ್ಕಿಂತ

# ಭಾರಿ ವಾಹನಗಳ ಸಂಚಾರದಿಂದ ನಲಗುತ್ತಿರುವ ಜೀರ್ಣಾವಸ್ಥೆಯಲ್ಲಿರುವ ಪೂಜಗೇರಿ ಸೇತುವೆ



• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಮಂಜಗುಣಿ–ಗಂಗಾವಳಿ ಸೇತುವೆ ನಿರ್ಮಾಣಗೊಂಡಿದ್ದರಿಂದ ಕಾರವಾರದಿಂದ ಗೋಕರ್ಣಕ್ಕೆ ತೆರಳುವ ಖಾಸಗಿ ಬಸ್, ಸಾರಿಗೆ ಸಂಸ್ಥೆಯ ಬಸ್ ಸೇರಿದಂತೆ ನೂರಾರು ಭಾರಿ ವಾಹನಗಳು ಪ್ರತಿನಿತ್ಯ ಈ ದಾರಿಯ ಮೂಲಕ ಸಂಚರಿಸುತ್ತವೆ. ಆದರೆ ಪೂಜಗೇರಿ ಸೇತುವೆ ಹಳೆಯದಾರಿವುದರಿಂದ ಯಾವ ಕ್ಷಣದಲ್ಲಾದರು ಅಪಾಯ ಎದುರಿಸುವ ಸಾಧ್ಯತೆಯಿದೆ.

ಸಂಜೆಯಾಗುತ್ತಿದ್ದಂತೆ ಒಂದರ ಹಿಂದೆ ಮತ್ತೊಂದರಂತೆ ಸಾಲುಗಟ್ಟಿ ವಾಹನಗಳು ಬರುತ್ತಲೇ ಇರುತ್ತವೆ. ಹಾಗೇ ಮುಂಜಾನೆಯೂ ಕೂಡ ಅಷ್ಟೇ ಪ್ರಮಾಣದಲ್ಲಿ ವಾಹನಗಳು ಸಂಚರಿಸುತ್ತವೆ. ಆದರೆ ಇಲ್ಲಿ ರಸ್ತೆ ನಿರ್ಮಾಣ ಮಾಡುವಾಗ ಸೇತುವೆ ನಿರ್ಮಾಣಕ್ಕೆ ಪ್ರತ್ಯೇಕವಾಗಿ ಟೆಂಡರ್ ಕರೆಯಲಾಗಿದ್ದು, ಇದುವರೆಗೂ ಪ್ರಕ್ರಿಯೆ ಚಾಲನೆಯಲ್ಲಿದೆ. ಆದರೆ ಭಾರಿ ವಾಹನಗಳ ಓಡಾಟದಿಂದಾಗಿ ಈ ಸೇತುವೆಗೆ ಹಾನಿ ಉಂಟಾಗುವ ಸಾಧ್ಯತೆಯಿದೆ.

ಹಾಗೇ ಅಷ್ಟೇ ಅಪಾಯಕಾರಿಯಾಗಿ ಈ ರಸ್ತೆ ಇರುವುದರಿಂದ ದಿನನಿತ್ಯ ಸಣ್ಣಪುಟ್ಟ ಅಪಘಾತಗಳು ನಡೆಯುತ್ತಲೇ ಇರುತ್ತವೆ. ಹಾಗೇ ಹಳೆಯದಾದ ಪೂಜಗೇರಿ ಸೇತುವೆ ಇಷ್ಟೊಂದು ಭಾರವನ್ನು ಹೊರಲು ಬಹಳ ತಿಂಗಳು ಸಹಿಸಿಕೊಳ್ಳುವುದು ಅನುಮಾನವಾಗಿದೆ. ಹೀಗಾಗಿ ಲೋಕೋಪಯೋಗಿ ಇಲಾಖೆಯವರು ಹಾಗೂ ಶಾಸಕರು ಇದನ್ನು ಗಂಭೀರವಾಗಿ ಪರಿಗಣಿಸಬೇಕಾಗಿದೆ.

> ಪೂಜಗೇರಿ ಸೇತುವೆ ತೀರಾ ಹಳೆಯದಾಗಿದ್ದು, ಅದನ್ನು ಹೊಸದಾಗಿ ನಿರ್ಮಿಸುವಂತೆ ಲೋಕೋಪಯೋಗಿ ಇಲಾಖೆಗೆ ಈ ಹಿಂದೆ ಮನವಿ ಸಲ್ಲಿಸಲಾಗಿತ್ತು. ಆದರೆ ಇದುವರೆಗೂ ಹೊಸ ಸೇತುವೆ ನಿರ್ಮಾಣ ಮಾಡಿಲ್ಲ. ಈ ಸೇತುವೆ ಮೂಲಕ ಸಾಕಷ್ಟು ಖಾಸಗಿ ವಾಹನಗಳು ಕೂಡ ಚಲಿಸುವುದರಿಂದ ಸೇತುವೆ ಇನ್ನಷ್ಟು ಶಕ್ತಿ ಕಳೆದುಕೊಳ್ಳುವಂತಾಗಿದೆ. ಇಲ್ಲಿ ದೊಡ್ಡ ಅಪಾಯ ಸಂಭವಿಸುವ ಪೂರ್ವದಲ್ಲಿಯೇ ಇಲಾಖೆ ಎಚ್ಚೆತ್ತುಕೊಳ್ಳಬೇಕು.
>
> **– ಸಂದೀಪ ಗಾಂವಕರ ಸ್ಥಳೀಯರು ಪೂಜಗೇರಿ.**


ಇಲ್ಲಿ ವೇಗವಾಗಿ ಬಂದ ವಾಹನವೊಂದು ಡಿಕ್ಕಿ ಹೊಡೆದ ಪರಿಣಾಮ ತಡೆಗೋಡೆಯು ಮುರಿದುಹೋಗಿದೆ. ಸ್ವಲ್ಪಹೆಚ್ಚುಕಡಿಮೆಯಾದರೂ ವಾಹನ ಹಳ್ಳಕ್ಕೆ ಬೀಳುವ ಸಾಧ್ಯತೆಯಿತ್ತು. ಹೀಗೆ ಸೇತುವೆ ಕೂಡ ಕಿರಿದಾಗಿದ್ದು ಒಂದು ವಾಹನ ಬಂದರೆ ಅದು ಪಾಸಾದ ನಂತರವು ಇನ್ನೊಂದು ವಾಹನ ಬರಬೇಕಾಗಿದೆ. ಅಷ್ಟೊಂದು ಸಮಸ್ಯೆಗಳು ಇದ್ದರೂ ಕೂಡ ಈ ಬಗ್ಗೆ ಇಲಾಖೆ ಹಾಗೂ ಆಡಳಿತ ವರ್ಗ ಮೌನವಾಗಿರುವುದು ಸ್ಥಳೀಯರ ಆಕ್ರೋಶಕ್ಕೆ ಕಾರಣವಾಗಿದೆ.

ಪ್ರತಿದಿನ ನೂರಾರು ವಾಹನಗಳ ಭಾರವನ್ನು ಹೊರಲಾಗದೇ ಸೇತುವೆ ನರಳುತ್ತಿದೆ ಎಂಬಂತೆ ಭಾಸವಾಗುತ್ತಿದೆ. ನೂತನ ಸೇತುವೆ ನಿರ್ಮಾಣಗೊಂಡ ನಂತರ ಖಾಸಗಿ ಬಸ್ ಹಾಗೂ ಭಾರಿ ವಾಹನಕ್ಕೆ ಅವಕಾಶ ನೀಡಬೇಕಾಗಿತ್ತು. ಆದರೆ ಸೇತುವೆಯ ಉದ್ಘಾಟನೆಗೊಂಡ ನಂತರ ವಾಹನ ಸಂಚಾರಕ್ಕೆ ಮುಕ್ತಗೊಂಡಿತ್ತು.

> ಈಗಿರುವ ಸೇತುವೆ ಹಳೆಯದಾಗಿದೆ. ಹಾಗೇ ನೂತನ ಸೇತುವೆಯ ಬಗ್ಗೆ ಈಗಾಗಲೇ ಇಲಾಖೆಯಲ್ಲಿ ಚಾಲ್ತಿಯಲ್ಲಿದೆ. ಇದನ್ನು ಪರಿಶೀಲಿಸಿ ಸಂಚಾರಕ್ಕೆ ಸೂಕ್ತವಲ್ಲ ಎನಿಸಿದರೆ ಖಾಸಗಿ ಬಸ್‌ನವರಿಗೆ ಈ ಮಾರ್ಗದಿಂದ ಸಂಚರಿಸದಂತೆ ನೋಟಿಸ್ ನೀಡಲಾಗುವುದು.
>
> **– ನಯನಾ ನಾಯ್ಕ ಇಂಜಿನೀಯರ್, ಲೋಕೋಪಯೋಗಿ ಇಲಾಖೆ**

ಹೀಗಾಗಿ ಇತರೆ ಯಾವುದೇ ಅಪಾಯಕಾರಿ ಸೇತುವೆ, ರಸ್ತೆ, ತಿರುವು ಇದರ ಬಗ್ಗೆ ತಿಳಿದುಕೊಳ್ಳದೇ ಎಲ್ಲ ಖಾಸಗಿ ಬೃಹತ್ ವಾಹನಗಳ ಸಂಚಾರ ಆರಂಭಿಸಿರುತ್ತವೆ. ಇದರಿಂದಾಗಿ ಬೆಳಗಿನ ಜಾವ ಮತ್ತು ರಾತ್ರಿವೇಳೆ ಖಾಸಗಿ ಬಾರಿ ವಾಹನಗಳದೇ ದರ್ಬಾರ ಎನ್ನುವಂತಾಗಿದೆ. ಪ್ರಯಾಣಿಕರನ್ನು ಹೊತ್ತು ಸಾಗುವ ಖಾಸಗಿ ವಾಹನದವರು ತಾವು ಚಲಿಸುವ ಸೇತುವೆ ಬಗ್ಗೆಯೂ ತಿಳಿದುಕೊಳ್ಳಬೇಕಾಗಿದೆ.

# ಶಿಕ್ಷಣ ವ್ಯವಸ್ಥೆ ಸುಧಾರಣೆಗೆ ಆಗ್ರಹಿಸಿ ತಹಶೀಲ್ದಾರ್‌ಗೆ ಮನವಿ



ಕಮಲನಗರ: ನೀಟ್ ಪರೀಕ್ಷಾ ಅಕ್ರಮ ಖಂಡಿಸಿ ಹಾಗೂ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರಪ್ರಧಾನ್ ಅವರ ರಾಜೀನಾಮೆಗೆ ಒತ್ತಾಯಿಸಿ ನವದೆಹಲಿಯಲ್ಲಿ ಸೋಮವಾರ ಶಾಂತಿಯುತವಾಗಿ ಪ್ರತಿಭಟನೆ ನಡೆಸುತ್ತಿದ್ದ ವಿದ್ಯಾರ್ಥಿಗಳ ಮೇಲೆ ಪೊಲೀಸರು ಅಶ್ರುವಾಯು ಪ್ರಯೋಗ ಮಾಡಿರುವುದನ್ನು 'ವ್ಯವಸ್ಥೆ ಪರಿವರ್ತನೆ ವೇದಿಕೆ'ಯ ತಾಲೂಕು ಘಟಕದ ಅಧ್ಯಕ್ಷ ವೈಜನಾಥ ವಡ್ಡೆ ತೀವ್ರವಾಗಿ ಖಂಡಿಸಿದ್ದಾರೆ. ಸೋಮವಾರ ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ಬರೆದ ಮನವಿ ಪತ್ರವನ್ನು ತಹಶೀಲ್ದಾರ್ ಅಮೀತಕುಮಾರ ಕುಲಕರ್ಣಿ ಅವರ ಮೂಲಕ ಸಲ್ಲಿಸಿ ಅವರು ಮಾತನಾಡಿದರು. "ವಿದ್ಯಾರ್ಥಿಗಳು ತಮ್ಮ ಭವಿಷ್ಯದ ಜೊತೆ ನಡೆಯುತ್ತಿರುವ ಚೆಲ್ಲಾಟದ ವಿರುದ್ಧ ಧ್ವನಿ ಎತ್ತಿದ್ದಾರೆ. ದೇಶದ ಭವಿಷ್ಯವಾಗಿರುವ ಯುವಜನತೆಯೊಂದಿಗೆ ಪೊಲೀಸರು ನಡೆದುಕೊಂಡ ಈ ರೀತಿ ತೀರ ಖಂಡನೀಯ," ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು. ಸೋನಮ್ ವಾಂಗ್ಚುಕ್ ಸತ್ಯಾಗ್ರಹಕ್ಕೆ ಬೆಂಬಲ: ದೇಶದ ಶಿಕ್ಷಣ ವ್ಯವಸ್ಥೆಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳುವುದು, ಪರೀಕ್ಷಾ ಅಕ್ರಮ ತಡೆಯುವುದು ಹಾಗೂ ಶಿಕ್ಷಣ ಸಚಿವರ ರಾಜೀನಾಮೆಗೆ ಆಗ್ರಹಿಸಿ ಖ್ಯಾತ ಪರಿಸರವಾದಿ ಸೋನಮ್ ವಾಂಗ್ಚುಕ್ ನಡೆಸುತ್ತಿರುವ ಉಪವಾಸ ಸತ್ಯಾಗ್ರಹಕ್ಕೆ ದೇಶಾದ್ಯಂತ ವ್ಯಾಪಕ ಬೆಂಬಲ ವ್ಯಕ್ತವಾಗಿದೆ. ಪ್ರಧಾನಿ ನರೇಂದ್ರ ಮೋದಿ ಅವರು ತಕ್ಷಣವೇ ಮಧ್ಯಪ್ರವೇಶಿಸಿ ಸೋನಮ್ ವಾಂಗ್ಚುಕ್ ಅವರ ಬೇಡಿಕೆಗಳನ್ನು ಈಡೇರಿಸಬೇಕು ಹಾಗೂ ಶಿಕ್ಷಣ ವ್ಯವಸ್ಥೆಯಲ್ಲಿ ವಿಶ್ವಾಸಾರ್ಹತೆ ಮರುಸ್ಥಾಪಿಸಲು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಪ್ರಮುಖರಾದ ಡಾ. ಎಸ್.ಎಸ್. ಮೈನಾಳೆ, ಇಲಾಹಿ ಬಾಗವಾನ್, ವಿಠ್ಠಲ ದೇಶಪಾಂಡೆ, ಭಾವುರಾವ.ಬಿ. ಹೆಡೆ, ಮಹಾದೇವ ಬಿರಾದಾರ, ಎಂ.ಎಸ್. ಹಿರೇಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**:CITATION:**

**IN THE COURT OF THE PRL. CIVIL JUDGE AND JMFC., AT HUMNABAD.**

**CRL. MISC. No.2585/2026.**

**Petitioners:**

Mahadevi W/o late Raju Halge,
Age: 33-yrs. Occu: House hold,
R/o Village Indira Nagar. Tq. Humnabad. Dist. Bidar.

**Respondent:**

**The Registrar of Birth and Death through The Chief Officer TMC Humnabad. Dist. Bidar.**

**Sub: Petition U/Sec. 13(3) of Birth and Death Registration Act-1969**

Whereas, the above mentioned petitioner has filed the petition under section 13(3) of Birth and Death Registration Act-1969 praying this Honorable Court to issue Death Certificate of Mother in law of petitioner by namely LATE. SUNDRAMMA W/O LAXMAN HALGE, she was died on 12.06.2001 at Village Indira Nagar. Tq. Humnabad, Dist. Bidar. The petitioner claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 20.08.2026 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 14-07-2026.

**//By order of the court//**

**Chief Ministerial Officer, Prl. Civil Judge & JMFC Court, Humnabad.**

# ಗಾಳಕ್ಕೆ ಸಿಕ್ಕ ಮೀನು



• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಆಳ ಮೀನುಗಾರಿಕೆಗೆ ನಿಷೇಧ ಇರುವುದರಿಂದ ಮೀನುಗಾರರು ಗಾಳ ಹಾಕಿ ಮೀನು ಶಿಕಾರಿ ಮಾಡುತ್ತಿದ್ದಾರೆ. ಅಪರೂಪಕ್ಕೆ ಅತಿ ರುಚಿಕಟ್ಟಾದ ಕೆಂಸ ಮೀನು ಸಿಗುತ್ತದೆ. ಇದಕ್ಕೆ ಉತ್ತಮ ಬೆಲೆ ನೀಡಿ ಖರೀದಿಸುತ್ತಾರೆ. ಮಂಜಗುಣಿ ಸೇತುವೆಯ ಮೇಲೆ ಮಂಗಳವಾರ ಗಾಳಕ್ಕೆ ಸಿಕ್ಕ ಕೆಂಸ ಮೀನು.

# ಇಂದು 324ನೇ ಶರಣ ಸಂಗಮ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಇಲ್ಲಿಯ ಚನ್ನಬಸವಾಶ್ರಮ ಪರಿಸರದಲ್ಲಿ ಬುಧವಾರ ಸಾಯಂಕಾಲ 5.30ಗಂಟೆಗೆ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಪೀಠಾಧಿಪತಿ ಗುರುಬಸವ ಪಟ್ಟದ್ದೇವರ ದಿವ್ಯ ಸಾನ್ನಿಧ್ಯದಲ್ಲಿ ಕುಂಬಾರ ಗುಂಡಯ್ಯ, ಕುರುಬಗೊಲ್ಲಾಳೇಶ್ವರ ಜಯಂತಿ ಮತ್ತು 324ನೆಯ ಶರಣ ಸಂಗಮ ಕಾರ್ಯಕ್ರಮ ಜರುಗಲಿದೆ. ತಾಲೂಕು ರೋಟರಿ ಸಂಸ್ಥೆಯ ಅಧ್ಯಕ್ಷೆ ಡಾ.ಶೈಲಜಾ ಡಾ.ಅನಿಲಕುಮಾರ ತಳವಾಡೆ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಕರ್ನಾಟಕ ಸಹಕಾರ ಉಣ್ಣೆ ಕೈಮಗ್ಗ ನೇಕಾರರ ಮಹಾಮಂಡಳಿ ನಿರ್ದೇಶಕ ಶಿವರಾಜ ಮಲ್ಲೇಶಿ ಅವರು ಬಸವ ಗುರುವಿನ ಪೂಜೆ ನೆರವೇರಿಸಲಿದ್ದಾರೆ. ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಪ್ರೋ.ಶಂಭುಲಿಂಗ ಕಾಮಣ್ಣ ಅನುಭಾವ ನೀಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ವಿಜಯಕುಮಾರ ಪಾಟೀಲ, ಮಲ್ಲಮ್ಮ ಆರ್.ಪಾಟೀಲ, ಜೈರಾಜ ಪಾತ್ರೆ, ಪ್ರೊ.ಅಶೋಕ ರಾಜೋಳೆ, ಸಂತೋಷ ಬಿ.ಜಿ.ಪಾಟೀಲ, ಅವಿನಾಶ ಮಲ್ಗೆ, ಜೈಪ್ರಕಾಶ ಕುಂಬಾರ ಭಾಗವಹಿಸಲಿದ್ದಾರೆ. ದೀಪಕ ಠಮಕೆ ನಿರೂಪಣೆ ಮಾಡಲಿದ್ದು, ಸಾಹಿತಿ ರಾಜು ಜುಬರೆ ವಚನ ಗಾಯನ ನಡೆಸಿ ಕೊಡಲಿದ್ದಾರೆ.

ಶ್ರಾವಣ ಮಾಸದ ನಿಮಿತ್ತ ಆ.12 ರಿಂದ ಬೆಳಿಗ್ಗೆ 8 ಗಂಟೆಗೆ ಶ್ರೀಮಠದಲ್ಲಿ ಇಷ್ಟಲಿಂಗಪೂಜೆ ನೆರವೇರಲಿದೆ. ಸಾಯಂಕಾಲ 5.30 ಗಂಟೆಗೆ ಚನ್ನಬಸವಾಶ್ರಮದಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಅವರಿಂದ ಬಸವ ದರ್ಶನ ಪ್ರವಚನ ಪ್ರಾರಂಭವಾಗಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

**:CITATION:**

**IN THE COURT OF SENOIR CIVIL JUDGE AND JMFC COURT AT HUMNABAD**

**Crl. Misc No. 117/2026**

1. Shamina Begum W/o Isamuddin
Age 61 years, occu: Household,
2. Mohammed Mastan S/o Isamuddin
Age 37 years, occu: Agril,
3. Mohammed Samad S/o Isamuddin
Age 41 years, occu: Agril,
4. Mohammed Fareed S/o Isamuddin
Age 29 years, occu: Agril,
5. Mohammed Farooq S/o Isamuddin
Age 33 years, occu: Agril,
6. Asma Jabeen D/o Isamuddin
Age 40 years, occu: Household,

Both R/o Bemalkheda, Tq, Chitaguppa Dist, Bidar.

**...Petitioner.**

**-- V/S --**

The Thasildar Chitaguppa.

**...Respondents.**

**Petition Under section 13(3) Birth & Death Registration Act-1969**

**PAPER PUBLICATION**

Whereas the above named petitioners has filed the petition under section 13(3) of Birth and Death Registration Act 1969 praying this Honorable court to issue Death certificate of Isamuddin S/o Kale Sab The petitioners are Wife/Sons/Daughter of deceased and his name shown as above. samuddin S/o Kale Sab was died on 01.10.1997. The petitioners are claiming the death certificate of their Wife for pension, Legal necessities and other official purpose and home record. Therefore it is hereby proclaimed that if any person or persons have got any objection in this regard she/they may approach to this Honorable court on 07-09-2026 at 11.00 AM in person or authorized pleader to answer such claim otherwise the matter will be heard and determined in your absence as per law.

Given under my hand seal of the Court on this 20/07/2026

**//By Order of the Court //**

**Chief Ministerial Officer, Senior Civil Judge & JMFC Court, Humnabad.**

# ಮಾಸಿಕ ಶಿವಾನುಭವ ಗೋಷ್ಠಿ



• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ಬಸವಕಲ್ಯಾಣದ ಅನುಭವ ಮಂಟಪದ ವತಿಯಿಂದ ಕೊಡಂಬಲ ಬಸವ ಕೇಂದ್ರದಲ್ಲಿ ಮಾಸಿಕ ಶಿವಾನುಭವ ಗೋಷ್ಠಿ ಕಾರ್ಯಕ್ರಮ ಜರುಗಿತು. ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಸಾಹಿತಿಗಳು ಹಾಗೂ ಪ್ರವಚನಕಾರ ಶಿವಸ್ವಾಮಿ ಚೀನಕೇರಾ ರವರು ಮಾತನಾಡಿ 12ನೇ ಶತಮಾನದಲ್ಲಿ ಬಸವಾದಿ ಶಿವಶರಣರು, ಸಾಮಾಜಿಕ, ಧಾರ್ಮಿಕ, ಆರ್ಥಿಕ, ಶೈಕ್ಷಣಿಕ ಹಾಗೂ ಆಧ್ಯಾತ್ಮಿಕ ಕ್ಷೇತ್ರದಲ್ಲಿ ತಮ್ಮ ನಡೆನುಡಿಯಿಂದ ಮಹತ್ತರವಾದ ಬದಲಾವಣೆಗೆ ನಾಂದಿ ಹಾಡಿದರು. ಜೀವ ಶಿವನಾಗುವ ಮಾರ್ಗ ತೋರಿಸಿಕೊಟ್ಟರು ಸತ್ಯ ಶುದ್ಧ ಕಾಯಕ ನಿತ್ಯ ಲಿಂಗಾರ್ಚನೆ ಜಂಗಮದಾಸೋಹ ಇವು ಶರಣರು ನಮಗೆ ನೀಡಿದ ಅಮೂಲ್ಯ ತತ್ವಗಳು ನಾವೆಲ್ಲ ಜಡ ವಸ್ತುಗಳ ದಾಸರಾಗದೆ ಜೀವಪರ ಕಾಳಜಿ ಹೊಂದಬೇಕು ಅನುಭವ ಮಂಟಪ ಶರಣರು ಈ ಪ್ರಪಂಚಕ್ಕೆ ನೀಡಿದ ಅದ್ಭುತ ಕೊಡುಗೆ ಅಲ್ಲಿ ಲಿಂಗ, ಜಾತಿ, ವರ್ಗ,ವರ್ಣ ಭೇದವಿಲ್ಲದೆ ಎಲ್ಲರೂ ಸಮಾನಾಗಿ ತಮ್ಮ ಅನುಭವಗಳನ್ನು ಹಂಚಿಕೊಳ್ಳಲು ಅವಕಾಶ ನೀಡಿದರು. ಶರಣರ ಮಾರ್ಗದಲ್ಲಿ ನಾವೆಲ್ಲ ನಡೆದು ನಮ್ಮ ಬದುಕು ಹಸನ ಮಾಡಿಕೊಳ್ಳಬೇಕೆಂದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ ಸಂಗ್ರಾಮ ಉಚ್ಚೇದ ಶಿಕ್ಷಕರು ಮಾತನಾಡಿ ಅನೇಕ ಗ್ರಾಮಗಳಲ್ಲಿ ಅನುಭವ ಮಂಟಪದ ವತಿಯಿಂದ ಆಯೋಜನೆ ಮಾಡುತ್ತಿರುವ ಶಿವಾನುಭವ ಗೋಷ್ಠಿ ಕಾರ್ಯಕ್ರಮ ಬಹಳಷ್ಟು ಪರಿಣಾಮಕಾರಿಯಾಗುತ್ತಿದೆ. ನಾವೆಲ್ಲ ಶರಣರ ವಿಚಾರಗಳನ್ನು ಮೈಗೂಡಿಸಿಕೊಂಡರೆ ನಮ್ಮ ಬದುಕು ಹಸನಾಗುತ್ತದೆ. ಲಿಂಗಾಯತ ಎಂದರೆ ಒಂದು ಜಾತಿಯಲ್ಲ ಅದು ಅನೇಕ ಕಾಯಕ ಜೀವಿಗಳನ್ನು ಒಳಗೊಂಡ ಒಂದು ಧರ್ಮ ಬಸವಣ್ಣ ನಮ್ಮ ಗುರು ವಚನ ಸಾಹಿತ್ಯ ನಮ್ಮ ಧರ್ಮ ಗ್ರಂಥ ಬಸವಕಲ್ಯಾಣ ನಮ್ಮ ಧರ್ಮ ಕ್ಷೇತ್ರ ಲಿಂಗಾಯಿತರು ಇದನ್ನು ಅರ್ಥ ಮಾಡಿಕೊಳ್ಳಬೇಕು. ವಚನಗಳೇ ನಮಗೆ ದಾರಿದೀಪ ನಾವೆಲ್ಲರೂ ಆ ಬೆಳಕಿನಲ್ಲಿ ಮುನ್ನಡೆಯಬೇಕು ಎಂದರು. ಶಿಕ್ಷಕರಾದ ರಮೇಶ ಸಲಗರ ರವರು ಪ್ರಾಸ್ತವಿಕವಾಗಿ ಮಾತನಾಡುತ್ತಾ ಈ ಮೊದಲು 29 ವರ್ಷಗಳ ಹಿಂದೆ ಕೊಡಂಬಲ ಗ್ರಾಮದಲ್ಲಿ ಮಾಸಿಕ ಶಿವಾನುಭವ ಗೋಷ್ಠಿ ಕಾರ್ಯಕ್ರಮ ಆಯೋಜಿಸಲಾಗಿತ್ತು ಅಷ್ಟಾವರಣ ಕುರಿತು ಒಂದು ವಾರದವರೆಗೆ ಪ್ರವಚನ ಜರುಗಿತ್ತು ಸಾಕಷ್ಟು ಜನರಿಗೆ ಲಿಂಗ ದೀಕ್ಷೆ ನೀಡಲಾಗಿತ್ತು. ಶರಣರ ವಿಚಾರಧಾರೆಯನ್ನು ಜನಮಾನಸಕ್ಕೆ ಮುಟ್ಟಿಸುವುದೇ ಈ ಕಾರ್ಯಕ್ರಮದ ಮುಖ್ಯ ಆಶಯವಾಗಿದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಸವ ಕೇಂದ್ರದ ಅಧ್ಯಕ್ಷರಾದ ಅಭಿಲಾಷ ಗಿರಗಿರೆ ವಹಿಸಿಕೊಂಡಿದ್ದರು. ಮಲ್ಲಿಕಾರ್ಜುನ ರಟಕಲ ಕಾರ್ಯಕ್ರಮವನ್ನು ನಿರೂಪಿಸಿದರು. ಕಾರ್ಯಕ್ರಮದಲ್ಲಿ ಬಸವ ಕೇಂದ್ರದ ಪದಾಧಿಕಾರಿಗಳು ಮಹಿಳೆಯರು ಗ್ರಾಮಸ್ಥರು ಬಸವಾಭಿಮಾನಿಗಳು ಭಾಗವಹಿಸಿದ್ದರು.

# ಹೋರಾಟಗಾರರು ವಿದ್ಯಾರ್ಥಿಗಳ ಮೇಲೆ ಹಲ್ಲೆ ಖಂಡನಿಯ:ಐರೆಡ್ಡಿ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಕೇಂದ್ರ ಸರ್ಕಾರದ ನೀಟ್ ಪರೀಕ್ಷಾ ಹಗರಣ ವಿರುದ್ಧ ದೆಹಲಿಯಲ್ಲಿ ಶಾಂತಿಯುತ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ಪರಿಸರ ಹಾಗೂ ಸಾಮಾಜಿಕ ಹೋರಾಟಗಾರ ಸೋನಂ ವಾಂಗ್ ಚುಕ್ ಹಾಗೂ ಇನ್ನಿತರ ಹೋರಾಟಗಾರರು ವಿದ್ಯಾರ್ಥಿಗಳ ಮೇಲೆ ಪೊಲೀಸರು ಹಲ್ಲೇ ನಡೆಸಿ ಬಂಧಿಸಿರುವುದನ್ನು ಕಾಂಗ್ರೆಸ್ ಯುವ ಮುಖಂಡ ಸಂಜೀವ್.ಎಸ್. ಐರೆಡ್ಡಿ ಬೆಂಡೆಬೆಂಬಳಿ ಖಂಡಿಸಿದ್ದಾರೆ.ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ದೇಶದ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯ ಹಾಳಾಗಿದೆ ಮತ್ತು ನೀಟ್ ಪರೀಕ್ಷೆ ವಿಷಯಕ್ಕೆ ಸಂಬಂಧಿಸಿದಂತೆ ದೇಶಾದ್ಯಂತ ಸುಮಾರು 23 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.ಇಷ್ಟಾದರೂ ಕೂಡಾ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ ರವರು ಬೇಜವಾಬ್ದಾರಿತನ ತೋರಿಸುತ್ತಿರುವುದು ಸರಿ ಅಲ್ಲ ಎಂದು ಅವರ ವಿರುದ್ಧ ಕಿಡಿಕಾರಿದ್ದಾರೆ.ನೀಟ್ ಪರೀ–ಕ್ಷೆ ವಿಷಯಕ್ಕೆ ಸಂಬಂಧಿಸಿದಂತೆ ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿಗಳ ಕುಟುಂಬಕ್ಕೆ ತಲಾ1 ಕೋಟಿ ಪರಿಹಾರ ನೀಡಬೇಕು ಎಂದಿದ್ದಾರೆ.ದೇಶದಲ್ಲಿ ಈ ಹಿಂದಿನಿಂದಲೂ ಯಾವುದೇ ಸರ್ಕಾರಗಳು ಇರಲಿ ತಪ್ಪು ನಡೆದಾಗ ಸಾರ್ವಜನಿಕರು ವಿದ್ಯಾರ್ಥಿಗಳು ಹೋರಾಟ ಮಾಡುತ್ತಾ ಬಂದಿದ್ದಾರೆ ಆದರೆ ಕೇಂದ್ರ ಸರ್ಕಾರ ಹೋರಾಟಗಾರರ ಮೇಲೆ ಹಲ್ಲೆ ನಡೆಸಿ ಸ್ವಾತಂತ್ರ ಕುಸಿದುಕೊಳ್ಳುವ ಪ್ರಯತ್ನ ಮಾಡಿ ಅವರ ಹೋರಾಟವನ್ನು ಹತ್ತಿಕುವ ಕೆಲಸ ಮಾಡುತ್ತಿದೆ ಎಂದು ಆರೋಪಿಸಿದ್ದಾರೆ.ಪ್ರಧಾನಿ ನರೇಂದ್ರ ಮೋದಿ ನೇತೃತ್ವ ಸರ್ಕಾರ ದೇಶದ ಜನರಿಗೆ ಕೊಟ್ಟ ಭರವಸೆಯನ್ನು ಈಡೇರಿಸುವಲ್ಲಿ ವಿಫಲವಾಗಿದೆ ದೇಶದ ಯುವಕರಿಗೆ ಪ್ರತಿ ವರ್ಷ 2 ಕೋಟಿ ಉದ್ಯೋಗದ ಭರವಸೆ ನೀಡಿದ್ದರು.ಆದರೆ ನುಡಿದಂತೆ ನಡೆಯದೆ ಯುವಕರನ್ನು ನಿರುದ್ಯೋಗಿಗಳನ್ನಾಗಿ ಮಾಡಿದ್ದಾರೆ ಎಂದು ಕೇಂದ್ರದ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.ಮೊದಲು ಪ್ರಧಾನಿ ನರೇಂದ್ರ ಮೋದಿ ಅವರು ದೇಶದ ಜನತೆಯ ಬೇಡಿಕೆಗಳನ್ನು ಈಡೇರಿಸಿ ಪರೀಕ್ಷಾ ಅಕ್ರಮಗಳನ್ನು ತಡೆಗಟ್ಟಿ ದೇಶದ ಯುವಕರಿಗೆ ಉದ್ಯೋಗ ನೀಡಲು ಕ್ರಮ ಕೈಗೊಳ್ಳಬೇಕು ಹೋರಾಟಗಾರ ಸೋನಮ್ ವಾಂಗ ಚುಕ್ ಅವರನ್ನು ಬಿಡುಗಡೆ ಮಾಡಿ ಅವರ ಮುಕ್ತ ಹೋರಾಟಕ್ಕೆ ಬೆಂಬಲಿಸಿ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ ರವರನ್ನು ವಜಾಗೊಳಿಸುವಂತೆ ಕಾಂಗ್ರೆಸ್ ಯುವ ಮುಖಂಡ ಸಂಜೀವ್.ಎಸ್.ಐರೆಡ್ಡಿ ಬೆಂಡೆಬೆಂಬಳಿ ಪ್ರಧಾನಿ ನರೇಂದ್ರ ಮೋದಿ ರವರಿಗೆ ಒತ್ತಾಯಿಸಿದ್ದಾರೆ.

# ಇಂದು ಡಾ. ವೀರಬಸವಂತರೆಡ್ಡಿ ಮುದ್ನಾಳ ಅವರ 2ನೇ ಪುಣ್ಯಸ್ಮರಣೆ, ಗ್ರಂಥ ಬಿಡುಗಡೆ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಯಾದಗಿರಿ ಮತಕ್ಷೇತ್ರದ ಮಾಜಿ ಶಾಸಕ ಹಾಗೂ ವೈದ್ಯರಾಗಿದ್ದ ಡಾ. ವೀರಬಸವಂತರೆಡ್ಡಿ ಮುದ್ನಾಳ ಅವರ 2ನೇ ಪುಣ್ಯಸ್ಮರಣೆ ಮತ್ತು ಸ್ಮರಣ ಗ್ರಂಥ ಬಿಡುಗಡೆ ಸಮಾರಂಭ ಇಂದು ಬುಧವಾರ ಬೆಳಿಗ್ಗೆ 10.30ಕ್ಕೆ ಪಾಟೀಲ ಕನ್ವೆನ್ಷನ್ ಹಾಲ್‌ನಲ್ಲಿ ನಡೆಯಲಿದೆ.

ರೋಗಿಗಳ ಸೇವೆಯ ಮೂಲಕ "ಬಡವರ ಬಂಧು" ಎಂದೇ ಹೆಸರಾಗಿದ್ದ ಡಾ. ಮುದ್ನಾಳ ಅವರು ಶಾಸಕರಾಗಿ ಜನಪರ ಕಾರ್ಯಗಳಿಗೆ ಒತ್ತು ನೀಡಿದ್ದರು. ಅವರ ಬದುಕು ಮತ್ತು ಸಾಧನೆ ಕುರಿತು ಸರ್ಕಾರಿ ಪದವಿ ಕಾಲೇಜಿನ ಪ್ರಾಂಶುಪಾಲ ಡಾ. ಸುಭಾಷ್ ಚಂದ್ರ ಕೌಲಗಿ ರಚಿಸಿರುವ ಗ್ರಂಥವನ್ನು ಈ ಸಂದರ್ಭದಲ್ಲಿ ಬಿಡುಗಡೆ ಮಾಡಲಾಗುವುದು.

ಅಬ್ಬೆತುಮಕೂರು ಶ್ರೀ ಗಂಗಾಧರ ಶಿವಾಚಾರ್ಯ ಸ್ವಾಮೀಜಿ ದಿವ್ಯಸಾನಿಧ್ಯವಹಿಸಲಿದ್ದಾರೆ. ಹೆಡಗಿಮದ್ರಾ ಶ್ರೀ ಶಾಂತಮಲ್ಲಿಕಾರ್ಜುನ ಸ್ವಾಮೀಜಿ, ದಾಸಬಾಳ ಮಠದ ಶ್ರೀ ವೀರೇಶ್ವರ ಸ್ವಾಮೀಜಿ,ಗುರುಮಠಕಲ್ ಖಾಸಾಮಠದ ಶ್ರೀ ಶಾಂತವೀರ ಸ್ವಾಮೀಜಿ ಹಾಗೂ ದಂಡಗುಂಡ ಹಿರೇಮಠದ ಶ್ರೀ ಸಂಗನಬಸವ ಸ್ವಾಮೀಜಿ ಸಾನಿಧ್ಯ ನೀಡಲಿದ್ದಾರೆ.

ಸಚಿವರಾದ ಎಂ.ಬಿ ಪಾಟೀಲ್, ಡಾ. ಶರಣಪ್ರಕಾಶ ಪಾಟೀಲ್, ಸಂಸದ ರಾಧಾಕೃಷ್ಣ ದೊಡ್ಡಮನಿ, ಮಾಜಿ ಸಚಿವ ಶರಣಬಸಪ್ಪಗೌಡ ದರ್ಶನಾಪೂರ, ಶಾಸಕರಾದ ಚನ್ನಾರೆಡ್ಡಿ ಪಾಟೀಲ್ ತುನ್ನೂರು ಮತ್ತು ಶರಣಗೌಡ ಕಂದಕೂರ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಡಾ. ಮುದ್ನಾಳ ಅವರ ಆದರ್ಶಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಉದ್ದೇಶದಿಂದ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಆಯೋಜಕರು ತಿಳಿಸಿದ್ದಾರೆ.

# ಖರ್ಗೆ ಜನ್ಮದಿನದಂಗವಾಗಿ ಸಸಿ ವಿತರಿಸಿ ಪರಿಸರ ಜಾಗೃತಿ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ತಾಲೂಕಿನ ವರವಟ್ಟಿ (ಬಿ) ಗ್ರಾಮದ ಹೆಮ್ಮೆಯ ಸುಪುತ್ರ ದೇಶದ ಹಿರಿಯ ಮುತ್ಸದಿ ನಾಯಕ ರಾಜ್ಯಸಭೆ ಪ್ರತಿ ಪಕ್ಷದ ನಾಯಕರಾದ ಮಲ್ಲಿಕಾರ್ಜುನ್ ಖರ್ಗೆಯವರ 84ನೇ ಜನ್ಮ ದಿನಾಚರಣೆ ಅವರ ಹುಟ್ಟುರಾದ ಹೊರವಟ್ಟಿ (ಬಿ)ನಲ್ಲಿ ಆಚರಿಸಲಾಯಿತು. ಹುಟ್ಟು ಹಬ್ಬದ ಅಂಗವಾಗಿ ವಿದ್ಯಾರ್ಥಿಗಳಿಗೆ ಸಸಿ ವಿತರಿಸಿ ಪರಿಸರ ಜಾಗೃತಿ ಮಾಡಲಾಯಿತು. ರಾಜ್ಯದ ಶಿಕ್ಷಣ, ಸಹಕಾರ, ಸಚಿವರಾಗಿ ಆದರ್ಶ ಆಡಳಿತ ನೀಡಿದ ಮಲ್ಲಿಕಾರ್ಜುನ ಖರ್ಗೆ ಅವರು ಅಪಾರ ಕೊಡಿಗೆ ನೀಡಿದ್ದಾರೆ ಎಂದರು. ಕೇಂದ್ರ ಕಾರ್ಮಿಕ ಸಚಿವರಾಗಿ ಅತ್ಯುತ್ತಮ ಸೇವೆ ಸಲ್ಲಿಸಿ ಕಾರ್ಮಿಕರ ಸೇವೃದ್ದಿಗಾಗಿ ಹಲವಾರು ಕಾರ್ಯಕ್ರಮಗಳು ಜಾರಿಗೊಳಿಸಿದಂತ ಕೀರ್ತಿ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಸಲ್ಲುತ್ತದೆ ಎಂದರು. ಹೊರಗಟ್ಟಿ ಗ್ರಾಮದ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಶಾಲೆಗಳು ದತ್ತು ತೆಗೆದುಕೊಂಡು ಶ್ರಮಿಸುವುದಾಗಿ ಪರಿಸರವಾದಿ ಶೈಲೇಂದ್ರ ಕಾವಡಿ ಅವರು ಖರ್ಗೆಯವರ 84ನೇ ಜನ್ಮ ದಿನಾಚರಣೆ ಅಂಗವಾಗಿ ಘೋಷಿಸಿದರು. ವಿದ್ಯಾರ್ಥಿಗಳಿಗೆ ಅವರ 84ನೇ ದಿನಾಚರಣೆ ಅಂಗವಾಗಿ ಸಸ್ಯ ನಡೆಸಿ ಸಸಿ ವಿತರಿಸಲಾಯಿತು.



# ಮಠದ ಜಮೀನಿನಲ್ಲಿ ಶಾಲೆ ನಿರ್ಮಾಣಕ್ಕೆ ವಿರೋಧ



• ಮಲ್ಲಮ್ಮ ನುಡಿ ವಾರ್ತೆ ಇಂಡಿ

ತಾಲೂಕಿನ ತೆಗ್ಗಿಹಳ್ಳಿ ಗ್ರಾಮದಲ್ಲಿ ವಸತಿ ಶಾಲೆ ನಿರ್ಮಾಣಕ್ಕಾಗಿ ಮಠದ ಜಮೀನು ನೀಡಿರುವುದನ್ನು ವಿರೋಧಿಸಿ ಗ್ರಾಮಸ್ಥರು ಹಾಗೂ ಶ್ರೀ ಮಠದ ಆಡಳಿತ ಮಂಡಳಿಯವರು ಶ್ರೀಮಠದ ಅಭಿನವ ಮುರುಘೇಂದ್ರ ಶಿವಾಚಾರ್ಯರ ನೇತೃತ್ವದಲ್ಲಿ ಸರ್ಕಾರದ ವಿರುದ್ಧ ತೀವ್ರ ಆಕ್ಷೇಪ ವ್ಯಕ್ತಪಡಿಸಿ ಕ್ಷೇತ್ರ ಶಿಕ್ಷಣಾಧಿಕಾರಿ ಮೋಹನ್‌ಕುಮಾರ್ ಪಿ. ಅವರಿಗೆ ಮನವಿ ಸಲ್ಲಿಸಿದರು.

ಮಠದ ಹಿಂದಿನ ಉತ್ತರಾಧಿಕಾರಿಗಳು ಅಧಿಕಾರ ದುರುಪಯೋಗಪಡಿಸಿಕೊಂಡು ಜಮೀನು ಬಿಟ್ಟು–ಕೊಟ್ಟಿದ್ದಾರೆ ಎಂದು ಆರೋಪಿಸಲಾಗಿದೆ.

ತೆಗ್ಗಿಹಳ್ಳಿ ಗ್ರಾಮದ ಸರ್ವೆ ನಂಬರ್ 89/1ರಲ್ಲಿರುವ ಶ್ರೀ ಶಿವಾನಂದ ಸ್ವಾಮಿಗಳ ದೇವಸ್ಥಾನದ ಮಠಕ್ಕೆ ಸೇರಿದ 5 ಎಕರೆ ಜಮೀನನ್ನು ಈ ಹಿಂದೆ ವಸತಿ ಶಾಲೆ ಸ್ಥಾಪನೆಗಾಗಿ ದಾನಪತ್ರದ ಮೂಲಕ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹೆಸರಿಗೆ ಮಾಡಿಕೊಡಲಾಗಿತ್ತು. ಆದರೆ, ಹಿಂದಿನ ಮಠದ ಮುಖ್ಯಸ್ಥರಾದ ವಿಜಯ ಮಹಾಂತೇಶ ಪ್ರಭಯ್ಯ ಕೆರಿಮಠ ಅವರು ಗ್ರಾಮಸ್ಥರ ಹಾಗೂ ಮಠದ ಆಡಳಿತ ಮಂಡಳಿಯ ಒಪ್ಪಿಗೆ ಪಡೆಯದೇ, ಯಾವುದೇ ಕರಾರು ದಾಖಲೆಗಳಿಲ್ಲದೆ ಈ ಜಮೀನನ್ನು ಸರ್ಕಾರಕ್ಕೆ ಹಸ್ತಾಂತರಿಸಿದ್ದಾರೆ ಎಂದು ಗ್ರಾಮಸ್ಥರು ದೂರಿದ್ದಾರೆ.

ಮಠದ ಒಪ್ಪಿಗೆಯಿಲ್ಲದೆ ನೀಡಿರುವ ಸರ್ವೆ ನಂಬರ್ 89/1ರ ಜಮೀನಿನಲ್ಲಿ ಯಾವುದೇ ಸರ್ಕಾರಿ ಕಟ್ಟಡಗಳನ್ನು ನಿರ್ಮಿಸಬಾರದು ಎಂದು ಒತ್ತಾಯಿಸಿದ್ದಾರೆ.

ಇದಕ್ಕೆ ಪರ್ಯಾಯವಾಗಿ, ತೆಗ್ಗಿಹಳ್ಳಿ ಗ್ರಾಮದಲ್ಲೇ ಸರ್ಕಾರಕ್ಕೆ ಸೇರಿದ ಮತ್ತೊಂದು ಜಮೀನು (ಸರ್ವೆ ನಂಬರ್ 77) ಲಭ್ಯವಿದ್ದು, ವಸತಿ ಶಾಲೆಯನ್ನು ಅಲ್ಲಿಯೇ ನಿರ್ಮಿಸಬೇಕು ಎಂದು ಅಧಿಕಾರಿಗಳಿಗೆ ಆಗ್ರಹಿಸಿದ್ದಾರೆ.

ಈ ಕುರಿತು ತಹಸೀಲ್ದಾರ ನಾಗೇಂದ್ರ ಕೋಳಶೆಟ್ಟಿ ಅವರಿಗೂ ಮನವಿ ಸಲ್ಲಿಸಲಾಗಿದೆ.

ಗ್ರಾಮಸ್ಥರು ಮಹತ್ವದ ದಾಖಲೆಗಳನ್ನು ಶಿಕ್ಷಣ ಇಲಾಖೆಗೆ ಒಪ್ಪಿಸಿದ್ದಾರೆ. 1994 ರಿಂದ 2004ರ ವರೆಗಿನ ಇ.ಸಿ ಪ್ರತಿಗಳು.ಎಮ್.ಆರ್ ನಂಬರ್ 1480ರ ದಾಖಲೆಗಳು.ಗ್ರಾಮಸ್ಥರು ಸಹಿ ಮಾಡಿದ ಬೃಹತ್ ಮನವಿ ಪತ್ರದ ನಕಲನ್ನು ಲಗತ್ತಿಸಲಾಗಿದೆ.

ಸಂಜಯ ಪಾಟೀಲ, ಶ್ರೀಶೈಲ ಕುಂಬಾರ, ದಾದಾಗೌಡ ಬಿರಾದಾರ, ಸಂದೀಪ ಬಿರಾದಾರ, ಕೆ.ಆರ್. ಹಿರೇಪೂಜಾರಿ, ಶೇಖರ ಹೊಸಮನಿ, ಸಿ.ಎಸ್. ಬೇವಿನಕಟ್ಟಿ, ಶೇಖರ್ ಕಡಣಿ, ಬಾಬು ಹಿರೇಪೂಜಾರಿ, ರವಿ ಜಮಾದಾರ, ಸೈಯದ್ ಮಂದೇವಾಲಿ, ರಾಮಶೇಕ್ ತಳವಾರ ಮತ್ತಿತರಿದ್ದರು.

# ವೈದ್ಯರು ಪ್ರತಿಯೊಬ್ಬರ ಜೀವನ ರಕ್ಷಕರು



ವಿಜಯಪುರ ಜು 21 : ನಗರದ ಪ್ರತಿಷ್ಠಿತ ರೋಟರಿ ಸಂಸ್ಥೆ ಹಾಗೂ ಆರ್ ಕೆ ಎಂ ಸಮೂಹ ಸಂಸ್ಥೆಗಳ ಸಹಯೋಗದೊಂದಿಗೆ, ಆಯುರ್ವೇದ ಮಹಾವಿದ್ಯಾಲಯದಲ್ಲಿ ವೈದ್ಯರ ದಿನಾಚರಣೆ ಸಮಾರಂಭವನ್ನು ಏರ್ಪಡಿಸಲಾಗಿತ್ತು. ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ರೋಟರಿ ಸಂಸ್ಥೆಯ ಅಧ್ಯಕ್ಷ ರಾಕೇಶ್ ಜೋಶಿ , ವೈದ್ಯರನ್ನು ದೇವರೆಂದೆ ಭಾವಿಸಲಾಗುತ್ತಿದೆ. ಏಕೆಂದರೆ ಪ್ರತಿಯೊಬ್ಬರ ಜೀವ ಕಾಪಾಡುವ ಶಕ್ತಿ ಅವರಲ್ಲಿದೆ. ಅಂತಹ ವೈದ್ಯರನ್ನು ಇಂದು ರೋಟರಿ ಸಂಸ್ಥೆಯು ಗುರುತಿಸಿ ಸನ್ಮಾನಿಸುತ್ತಿರುವುದು ನಿಜಕ್ಕೂ ಮಹತ್ಕಾರ್ಯ ಎಂದು ಭಾವಿಸಿರುವದಾಗಿ ತಿಳಿಸಿದರು. ಪ್ರಾಂಶುಪಾಲ ಡಾ. ಎನ್. ಎಂ. ರುದ್ರಗೌಡರ ಮಾತನಾಡಿ, ಇಂದು ವೈದ್ಯಕೀಯ ಕ್ಷೇತ್ರವು, ಅದರಲ್ಲೂ ಆಯುರ್ವೇದ ಚಿಕಿತ್ಸೆ ತುಂಬಾ ಆಧುನಿಕತೆಯಿಂದ ಕೂಡಿದ್ದು, ಇದರ ಸದುಪಯೋಗವನ್ನು ಪ್ರತಿಯೊಬ್ಬರು ಪಡೆದುಕೊಳ್ಳಬೇಕು. ರೋಟರಿ ಸಂಸ್ಥೆಯವರು ಮುಂಬರುವ ದಿನಗಳಲ್ಲಿ ಕೈಗೊಳ್ಳುವ ಸಾಮಾಜಿಕ ಕಾರ್ಯದಲ್ಲಿ ತಮ್ಮ ಮಹಾವಿದ್ಯಾಲಯ ಸದಾ ತೊಡಗಿಸಿಕೊಳ್ಳುತ್ತದೆ ಎಂದರು. ರೋಟರಿ ಸಂಸ್ಥೆಯ ಕಾರ್ಯಕ್ರಮ ಸಮಿತಿ ಅಧ್ಯಕ್ಷ ಡಾ.ಎಸ್.ಎಸ್.ನಾಗಠಾಣ ಮಾತನಾಡಿ, ಆರೋಗ್ಯವೇ ಭಾಗ್ಯ ಎಂಬಂತೆ, ವೈದ್ಯರು ಪ್ರತಿಯೊಬ್ಬರ ಆರೋಗ್ಯ ಕಾಪಾಡಲು ಹಗಲಿರುಳು ಎನ್ನದೆ ಶ್ರಮಿಸುತ್ತಿದ್ದಾರೆ. ಅಂತವರ ಸೇವೆಯನ್ನು ಗುರುತಿಸಿ ರೋಟರಿ ಸಂಸ್ಥೆಯಿಂದ ಸನ್ಮಾನಿಸಲಾಗುತ್ತದೆ ಎಂದರು. ಆರ್ ಕೆ ಎಂ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಶಂಭುಲಿಂಗಯ್ಯ ಕರ್ಪೂರಮಠ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಇದೆ ಸಂದರ್ಭದಲ್ಲಿ ವೈದ್ಯರಾದ ಡಾ. ಮೃಣಾಲ್ ರುದ್ರಗೌಡರ, ಡಾ. ಎಂ. ಎಸ್. ಯಲಗೋಡ, ಡಾ. ಸೌಭಾಗ್ಯ ಸೇರಿದಂತೆ 14 ಜನ ವೈದ್ಯರನ್ನು ರೋಟರಿ ಸಂಸ್ಥೆ ವತಿಯಿಂದ ಪ್ರಶಸ್ತಿ ಪತ್ರದೊಂದಿಗೆ ಸನ್ಮಾನಿಸಲಾಯಿತು. ರೋಟರಿ ಸಂಸ್ಥೆ ಪದಾಧಿಕಾರಿಗಳಾದ ಗೋಪಾಲ ಕುಲಕರ್ಣಿ, ಇಮಾಮಸಾಬ ಹುಲ್ಲೂರ್, ಪ್ರಕಾಶ ಮಠ, ಡಾ. ರವೀಂದ್ರ ಬೆಳ್ಳಿ ಇವರು ವೈದ್ಯರ ದಿನಾಚರಣೆ ಆಚರಿಸಲು ಮೂಲ ಕಾರಣಕರ್ತರಾದ ಡಾಕ್ಟರ ಬಿ. ಸಿ. ರಾಯ್ ಅವರ ಜನ್ಮ ದಿನವನ್ನು ಪ್ರತಿ ವರ್ಷ ಜುಲೈನಲ್ಲಿ ಆಚರಿಸಲಾಗುತ್ತಿದೆ. ಅವರು ಮನುಕುಲಕ್ಕೆ ಮಾಡಿದ ಮಹಾನ್ ಕಾರ್ಯಗಳನ್ನು ನೆನಪಿಸುವ ಸಲುವಾಗಿ ವೈದ್ಯರ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗುತ್ತಿದೆ. ಇದಕ್ಕಾಗಿ ರೋಟರಿ ಸಂಸ್ಥೆ ಪ್ರತಿ ವರ್ಷ ಒಂದು ಸಂಸ್ಥೆಯನ್ನು ಆಯ್ಕೆ ಮಾಡಿ, ವೈದ್ಯರನ್ನು ನೆನೆಯುವ ಕಾರ್ಯವನ್ನು ಮಾಡುತ್ತಿದೆ ಎಂದರು. ಕಾರ್ಯಕ್ರಮದಲ್ಲಿ ಪ್ರಜಾಪಿತ ಬ್ರಹ್ಮಕುಮಾರಿ ರಾಜಯೋಗಿನಿ ಸುವರ್ಣ ಅಕ್ಕನವರು, ಬೆಂಡಿಗೇರಿ, ಚಂದ್ರಶೇಖರ ಸಿಂಧೂರ, ನೀರಜ ರುಣವಾಲ, ಭೋಗಶೆಟ್ಟಿ, ಪ್ರಕಾಶ ಮಠ, ಕಲ್ಲಪ್ಪ ಮೇತ್ರಿ, ಶಿಬಿರದಲ್ಲಿ ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಆರ್ ಕೆ ಎಂ ಆಯುರ್ವೇದ ಕಾಲೇಜಿನ ಸಿಬ್ಬಂದಿಗಳು ವಿದ್ಯಾರ್ಥಿಗಳು ವಿದ್ಯಾರ್ಥಿನಿಯರು ರೋಟರಿ ಸಂಸ್ಥೆಯ ಸದಸ್ಯರು ಪಾಲ್ಗೊಂಡಿದ್ದರು.

# ತೀವ್ರ ಬರಗಾಲವಿದ್ದು ರೈತರ ಹಿತದೃಷ್ಟಿಯಿಂದ ಸರ್ಕಾರವೇ ರೈತರ ಬೆಳೆ ವಿಮೆ ತುಂಬಲಿ



• ಮಲ್ಲಮ್ಮ ನುಡಿ ವಾರ್ತೆಕುರುಗೋಡು

ರಾಜ್ಯಾದ್ಯಂತ ಉತ್ತಮ ಮಳೆ ಕೊರತೆಯಿಂದ ಬೀಕರ ಬರಗಾಲ ಇದೆ ಜಲಾಶಯಗಳು ಖಾಲಿಯಾಗಿ ಕುಡಿಯುವ ನೀರಿಗೂ ಹಾಹಾಕಾರ ಉಂಟಾಗಿದೆ ಈ ಸಂದರ್ಭದಲ್ಲಿ ರೈತರಿಗೆ ನೆರವು ನೀಡಬೇಕದ ಸರ್ಕಾರ ಅಧಿಕಾರಿಗಳ ಮುಖಾಂತರ ಮಾಹಿತಿ ಪಡೆದು ಈ ಬಾರಿ ವಿಮೆಯನ್ನು ಅಧಿಕಾರಿಗಳ ಮುಖಾಂತರ ಮಾಹಿತಿ ಸಂಗ್ರಹಿಸಿ ಉಚಿತವಾಗಿ ಬೆಳೆ ವಿಮೆ ಮಾಡಿಸಿ ಸಾಕಷ್ಟು ರೈತರಿಗೆ ಇದರಿಂದ ಅನುಕೂಲ ಆಗಲಿದೆ ಈ ಸಂದರ್ಭದಲ್ಲಿ ಮೀನಮೇಷ ಮಾಡಬೇಡಿ ಮಳೆ ಇಲ್ಲದೆ ಸಂಕಷ್ಟದಲ್ಲಿ ಇರುವ ರೈತಾಪಿ ವರ್ಗಕ್ಕೆ ವಿಮೆ ತುಂಬುವುದು ಕಷ್ಟ ಇದೆ ಎಂದು ರೈತರೊಬ್ಬರು ಕೃಷಿ ಅಧಿಕಾರಿಗಳಿಗೆ ಒತ್ತಾಯ ಮಾಡಿದರು.ಪಟ್ಟಣದ ತಾಲೂಕು ಕಚೇರಿ ಆವರಣದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ತಾಲೂಕು ಆಡಳಿತ ಹಾಗೂ ಕೃಷಿ ಇಲಾಖೆ ಸಂಯುಕ್ತಾಶ್ರಯದಲ್ಲಿ ನಡೆದ ಬರಗಾಲ ನಿವಾರಣೆಗೆ ಕ್ರಮ ಕುರಿತು ನಡೆದ ಸಭೆಯಲ್ಲಿ ರೈತರು ಮಾಹಿತಿ ನೀಡಿದ ಅಧಿಕಾರಿಗಳಿಗೆ ಮನವಿ ಮಾಡಿದರು ಈ ವೇಳೆ ರೈತರ ಮಾಹಿತಿ ಪಡೆದ ಕೃಷಿ ಇಲಾಖೆ ಅಧಿಕಾರಿಗಳು ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ನಿಮ್ಮ ಮಾತನ್ನು ಸರ್ಕಾರದ ಗಮನಕ್ಕೆ ತರುತ್ತೇವೆ ಎಂದು ಉತ್ತರಿಸಿದರು.

ಈ ವೇಳೆ ತಾಲೂಕು ಆಡಳಿತ ಅಧಿಕಾರಿಗಳು ಹಾಗೂ ಕೃಷಿ ವಿಜ್ಞಾನಿಗಳು ಮತ್ತು ಕೃಷಿ ಅಧಿಕಾರಿಗಳು ರೈತರು ಇದ್ದರು.

# ಜು.22 ರಂದು ವಿಶ್ವ ಮೆದುಳು ದಿನಾಚರಣೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಮೆದುಳಿನ ಆರೋಗ್ಯ ಉಪಕ್ರಮ ಕಾರ್ಯಕ್ರಮ, ಜಿಲ್ಲಾ ಆಸ್ಪತ್ರೆಯ ಬಳ್ಳಾರಿ ಇವರ ಸಂಯುಕ್ತಾಶ್ರಯದಲ್ಲಿ ಜು.22 ರಂದು ಬೆಳಿಗ್ಗೆ 11.30 ಗಂಟೆಗೆ ನಗರದ ಜಿಲ್ಲಾ ಆಸ್ಪತ್ರೆಯ ಮೆದುಳಿನ ಆರೋಗ್ಯ ಚಿಕಿತ್ಸಾ ಕೇಂದ್ರದ ಮುಂಭಾಗದ ಆವರಣದಲ್ಲಿ ವಿಶ್ವಮೆದುಳಿನ ದಿನಾಚರಣೆ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಅಲಕನಂದಾ ಡಿ.ಮಳಗಿ ಅವರು ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅನುಷ್ಠಾನ ಅಧಿಕಾರಿ ಹಾಗೂ ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವೀರೇಂದ್ರ ಕುಮಾರ್ ಕೆ.ಜಿ ಅವರು ಪ್ರಾಸ್ತಾವಿಕವಾಗಿ ಮಾತನಾಡುವರು.

ಜಿಲ್ಲಾ ಯೋಜನಾ ಅಭಿವೃದ್ಧಿ ಅಧಿಕಾರಿ ಡಾ.ಆರ್.ಅಬ್ದುಲ್ಲಾ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ., ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ.ವಿ., ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಜಿಲ್ಲಾ ಆಸ್ಪತ್ರೆಯ ಸ್ಥಾನಿಕ ವೈದ್ಯಾಧಿಕಾರಿ ಡಾ.ಮಲ್ಲಿಕಾರ್ಜುನ್, ಜಿಲ್ಲಾ ಆಸ್ಪತ್ರೆಯ ತಜ್ಞ ವೈದ್ಯರು ಹಾಗೂ ಮುಖ್ಯಸ್ಥರು ಮೆಡಿಸಿನ್ ವಿಭಾಗ ಡಾ.ಶ್ರೀಧರ್ ಎಮ್., ಮೆದುಳಿನ ಆರೋಗ್ಯ ಚಿಕಿತ್ಸಾ ಕೇಂದ್ರದ ನರರೋಗ ತಜ್ಞ ವೈದ್ಯ ಡಾ.ಕಮಲ್ ಕುಮಾರ್ ಜೈನ್, ಮೆದುಳಿನ ಆರೋಗ್ಯ ಚಿಕಿತ್ಸಾ ಕೇಂದ್ರದ ನೋಡಲ್ ಅಧಿಕಾರಿ ಹಾಗೂ ತಜ್ಞ ವೈದ್ಯ ಡಾ.ರಾಕೇಶ್, ಜಿಲ್ಲಾ ಆಸ್ಪತ್ರೆಯ ಮೆದುಳಿನ ಆರೋಗ್ಯ ಚಿಕತ್ಸಾ ಕೇಂದ್ರ ವೈಧಿಕಾರಿಗಳಾದ ಡಾ.ಪ್ರಿಯಾಂಕ ಪ್ರಸಾದ್ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಕರ್ನಾಟಕ ಮೆದುಳಿನ ಆರೋಗ್ಯ ಉಪಕ್ರಮ ಕಾರ್ಯಕ್ರಮದ ಜಿಲ್ಲಾ ಕಾರ್ಯಕ್ರಮ ಸಂಯೋಜಕ ಸಣ್ಣಕೇಶವ ಸ್ವಾಗತಿಸುವರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ.ವಿ.ಪಿ ಕಾರ್ಯಕ್ರಮ ನಿರೂಪಿಸುವರು.ಮೆದುಳಿನ ಆರೋಗ್ಯ ಚಿಕಿತ್ಸಾ ಕೇಂದ್ರದ ಸಿಬ್ಬಂದಿ ವರ್ಗ ಸೇರಿದಂತೆ ಸಾರ್ವಜನಿಕರು ಹಾಗೂ ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ಗೃಹಲಕ್ಷ್ಮಿ ಯೋಜನೆಗೆ 3 ವರ್ಷ ಪೂರ್ಣ, ಸಸಿ ನೆಟ್ಟು ಆಚರಣೆ



• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ಕರ್ನಾಟಕ ಸರ್ಕಾರದ ಮಹತ್ವಾಕಾಂಕ್ಷೆಯ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಗೃಹಲಕ್ಷ್ಮಿ ಯೋಜನೆಯು ಜಾರಿಯಾಗಿ ಮೂರು ವರ್ಷಗಳು ಪೂರ್ಣಗೊಂಡ, ಪ್ರಯುಕ್ತ ತಾಲೂಕಿನ ನಿರ್ಣಾ ಗ್ರಾಮ ಪಂಚಾಯತ್ ಆವರಣದಲ್ಲಿ ಫಲಾನುಭವಿಗಳೊಂದಿಗೆ ಸಸಿಗಳನ್ನು ನೆಟ್ಟು ಯೋಜನೆ ಸಾಧನೆಯನ್ನು ಸಂಭ್ರಮಿಸಲಾಯಿತು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಬಸವರಾಜ ಗುಗ್ಗರಿ, ಕಾರ್ಯದರ್ಶಿ ಆಕಾಶ ಕುಂಬಾರ್, ಮಾಜಿ ಅಧ್ಯಕ್ಷ ಸಂಜೀವಕುಮಾರ್‌ಕಿರಣ, ಪತ್ರಕರ್ತ ರಾಜಕುಮಾರ ಆರ್. ಹಡಪದ, ಪ್ರಮುಖರಾದ ಮುಜೋಬೋದ್ದಿನ ಲಶ್ಕೇರಿ, ಅಶೋಕ, ಶಾಂತಮ್ಮ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ನೆಲೋಗಿ: ಕನ್ನಡ ಭಾಷಾ ಅತಿಥಿ ಶಿಕ್ಷಕರ ಹುದ್ದೆಗೆ ಅರ್ಜಿ ಆಹ್ವಾನ

ಕಲಬುರಗಿ,ಜು.21–ಜೇವರ್ಗಿ ತಾಲೂಕಿನ ನೆಲೋಗಿ (321) ಮೊರಾರ್ಜಿ ದೇಸಾಯಿ ವಸತಿ ಶಾಲೆ (ಪ.ಜಾತಿ) ಯಲ್ಲಿ ಕನ್ನಡ ಭಾಷಾ ಅತಿಥಿ ಶಿಕ್ಷಕರ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ನೆಲೋಗಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಂಶುಪಾಲರು ತಿಳಿಸಿದ್ದಾರೆ. ಕನ್ನಡ ಭಾಷಾ ವಿಷಯವನ್ನು ಬೋಧಿಸಲು ಕಡ್ಡಾಯವಾಗಿ ಟಿ.ಇ.ಟಿ ಉತ್ತೀರ್ಣ ಹೊಂದಿರುವ ಅನುಭವಿ ಶಿಕ್ಷಕರು/ಶಿಕ್ಷಕಿಯರು 2026ರ ಜುಲೈ 27ರ ಸಂಜೆ 5 ಗಂಟೆಯೊಳಗಾಗಿ ನೆಲೋಗಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಅರ್ಜಿ ಸಲ್ಲಿಸಬೇಕು.

# ಅತಿಥಿ ಶಿಕ್ಷಕರ ಹುದ್ದೆಗೆ: ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದ ಹಿರಿಯಾಳ್ ಕುಡಂ ಈದ್ಗಾ ರಸ್ತೆಯ ಕುರುಗೋಡು ತಾಲೂಕು ಪಶ್ಚಿಮ ವಲಯ ವ್ಯಾಪ್ತಿಯ ಸರ್ಕಾರಿ ಆದರ್ಶ ವಿದ್ಯಾಲಯದಲ್ಲಿ 2026–27ನೇ ಸಾಲಿನ ಶೈಕ್ಷಣಿಕ ವರ್ಷದ ಅತಿಥಿ ಶಿಕ್ಷಕರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ.

ಶಾಲೆಯಲ್ಲಿ ಹೊಸ ವಿಷಯವಾದ ಎಐ ತಂತ್ರಾಂಶ ಆಧಾರಿತ ಬೋಧನೆ ಮಾಡಲು ಕಂಪ್ಯೂಟರ್ ಅತಿಥಿ ಶಿಕ್ಷಕರ ಹುದ್ದೆಗೆ ನೇಮಕಾತಿ ಮಾಡಿಕೊಳ್ಳಲಾಗುತ್ತಿದ್ದು, ಕಂಪ್ಯೂಟರ್‌ನಲ್ಲಿ ಡಿಪ್ಲೋಮಾ, ಬಿ.ಸಿ.ಎ., ಬಿ.ಎಸ್.ಸಿ ಕಂಪ್ಯೂಟರ್ ಸೈನ್ಸ್ ಹಾಗೂ ಕಂಪ್ಯೂಟರ್ ವಿಷಯದಲ್ಲಿ ಪಿ.ಜಿ ಹಾಗೂ ಡಿಪ್ಲೋಮಾ ತತ್ಸಮಾನ ಕಂಪ್ಯೂಟರ್ ಸರ್ಟಿಫಿಕೇಟ್ ಕೋರ್ಸ್ ವಿದ್ಯಾರ್ಹತೆ ಹೊಂದಿದವರು ಅರ್ಜಿ ಸಲ್ಲಿಸಬಹುದಾಗಿದೆ.ಜು.23 ರಂದು ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದ್ದು, ಖುದ್ದಾಗಿ ಶಾಲಾ ಮುಖೋಪಾಧ್ಯಯರ ಕಚೇರಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ಮಲ್ಲಿಕಾರ್ಜುನ (ಮೊ.7892989253) ಅಥವಾ ಶಾಲೆಯ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಶಾಲೆಯ ಮುಖೋಪಾಧ್ಯಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವೈದ್ಯರು-ಪತ್ರಕರ್ತರು ಸಮಾಜದ ಎರಡು ಕಣ್ಣುಗಳು



• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ತ್ಯಾಗ ಮತ್ತು ಸೇವಾ ಮನೋಭಾವನೆಯಿಂದಕಾರ್ಯನಿರ್ವಹಿಸುತ್ತಿರುವ ವೈದ್ಯರು ಮತ್ತು ಪತ್ರಕರ್ತರು ಸಮಾಜದ ಎರಡು ಕಣ್ಣುಗಳಾಗಿವೆ ಎಂದು ಹಿರಿಯ ಪತ್ರಕರ್ತ ಸದಾನಂದ ಜೋಷಿ ಅಭಿಪ್ರಾಯಪಟ್ಟರು.ನಗರದಭಾಲ್ಕಿಡಾಕ್ಟರ್ಸ್ಆಸೋಶಿಯೇಷನ( ಬಿಡಿಎ) ಹಾಲ್‌ನಲ್ಲಿ ರೋಟರಿ ಕ್ಲಬ್ ಆಫ್ ಭಾಲ್ಕಿ ಫೋರ್ಟ್ ಮತ್ತು ಬಿಡಿಎ ಸಹಯೋಗದಲ್ಲಿ ಹಮ್ಮಿಕೊಂಡ ವೈದ್ಯರ ಮತ್ತು ಪತ್ರಿಕಾ ದಿನಾಚರಣೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು. ಮನುಷ್ಯನ ಆರೋಗ್ಯವನ್ನು ಕಾಪಾಡುವ ವೈದ್ಯರು ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಉಳಿಸುವ ಪತ್ರಕರ್ತರು ನಿಯತ್ತಿನಿಂದ ತಮ್ಮ ಜವಾಬ್ದಾರಿ ನಿಭಾಯಿಸಬೇಕಾಗಿದೆ.ವೈದ್ಯರುತಮ್ಮ ಜ್ಞಾನ,ಕೌಶಲ್ಯ ಹಾಗೂ ಮಾನವೀಯ ಸೇವಾ ಮನೋಭಾವದಿಂದ ಅಸಂಖ್ಯಾತ ಜೀವಗಳನ್ನು ಬದುಕಿಸುವ ಕಾರ್ಯದಲ್ಲಿ ತೊಡಗಿದರೆ ಇನ್ನೊಂದೆಡೆ ಪತ್ರಕರ್ತರು ಜನರ ಸಂಕಟಗಳನ್ನು ಸರ್ಕಾರದಗಮನಕ್ಕೆತಂದು ಪರಿಹಾರ ಒದಗಿಸುವ ಕಾರ್ಯದಲ್ಲಿ ತೊಡಗಿಸಿಕೊಂಡಿರುತ್ತಾರೆ. ಆದರೆ ಇತ್ತೀಚೆಗೆ ಎರಡು ಕ್ಷೇತ್ರಗಳಲ್ಲಿ ಸೇವಾಗುಣ ಮರೆತು ಸ್ವಾರ್ಥ ಸಾಧನೆಗಾಗಿ ವಾಣಿಜ್ಯಕರಣ ನೀತಿ ಅನುಸರಿಸುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ ಎಂದು ಅಸಮಾಧಾನ ಹೊರಹಾಕಿದರು. ಅಧ್ಯಕ್ಷತೆ ವಹಿಸಿದ ತಾಲೂಕು ರೋಟರಿ ಕ್ಲಬ್ ಅಧ್ಯಕ್ಷ ಡಾ.ಶೈಲಜಾ ತಳವಾಡೆ ಮಾತನಾಡಿ,ವೈದ್ಯರ,ಪತ್ರಕರ್ತರ ಸೇವೆ ಕೇವಲ ವೃತ್ತಿಗೆ ಸಿಮೀತವಾಗಿಲ್ಲ.ಸಮಾಜದಲ್ಲಿ ಆರೋಗ್ಯ,ಜಾಗೃತಿ,ಹೊಣೆಗಾರಿಕೆಮೂಡಿಸುವುದರೊಂದಿಗೆ ದೇಶ ಮುನ್ನೆಡಿಸುವ ಕೆಲಸ ಆಗಬೇಕಾಗಿದೆಆದರೆ ಕೆಲವು ಪತ್ರಕರ್ತರು,ವೈದ್ಯರು ಹಣದಾಸೆಗಾಗಿ ತಮ್ಮ ವೃತ್ತಿ ಜೀವನಕ್ಕೆ ಕಪ್ಪು ಚುಕ್ಕೆ ತರುತ್ತಿರುವುದು ಯೋಗ್ಯವಲ್ಲ ಎಂದು ವಿಷಾದ ವ್ಯಕ್ತಪಡಿಸಿದರು.ಹಿರಿಯ ಮಕ್ಕಳತಜ್ಞ ಡಾ.ಆರ್‌ಎನ್.ಜಾಧವ ಮಾತನಾಡಿಕಾಲ ಬದಲಾದಂತೆ ಪ್ರತಿಯೊಬ್ಬರ ವೃತ್ತಿ ಬದಲಾಗುವುದು ಸಹಜ.ಆದರೆ ಪ್ರಾಮಾಣಿಕತೆಯಿಂದ ಸೇವೆ ಸಲ್ಲಿಸುವವರಿಗೆ ವಿಶ್ವದಾದ್ಯಂತ ಮನ್ನಣೆ ದೊರೆಯುತ್ತದೆ ಎಂದರು.ಸನ್ಮಾನ: ಇದೇ ಸಂದರ್ಭದಲ್ಲಿಹಿರಿಯ ವೈದ್ಯರಾದ ಡಾ.ಸುಜಯ್ಯ ವೈಜಿನಾಥ ಡೊಣಗಾಪುರೆ,ಡಾ.ವಿದ್ಯಾಸಾಗರ ಕಾಡಾದಿ ದಂಪತಿಗಳೊಂದಿಗೆ ತಾಲೂಕಿನ ಎಲ್ಲ ವೈದ್ಯರನ್ನ ಮತ್ತು ಪತ್ರಕರ್ತರನ್ನುಗೌರವಿಸಲಾಯಿತು.ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜೈರಾಜ ಪಾತ್ರೆ ಸೇರಿದಂತೆ ವೈದ್ಯರು,ಪತ್ರಕರ್ತರು ಉಪಸ್ಥಿತರಿದ್ದರು. ಡಾ.ಅನೀಲ ಸುಕಾಳೆ ಸ್ವಾಗತಿಸಿದರು.ನ್ಯಾಯವಾದಿ ಉಮಾಕಾಂತ ವಾರದ ನಿರೂಪಿಸಿದರು.ರೋಟರಿ ಕಾರ್ಯದರ್ಶಿ ಅಶೋಕ ರಾಜೋಳೆ ವಂದಿಸಿದರು.

> 'ವೈದ್ಯರ–ಪತ್ರಕರ್ತರವೃತ್ತಿಬೇರೆಬೇರೆಯಿದ್ದರೂ ಇಬ್ಬರ ಗುರಿ ಒಂದೇಯಾಗಿದೆ.ಇವರಿಬ್ಬರ ಸೇವೆಯಿಂದ ಸ್ವಾಸ್ಥ,ಸಮೃದ್ಧ,ಶಾಂತಿ,ನೆಮ್ಮದಿಯ ಸಮಾಜ ನಿರ್ಮಾಣ ಮಾಡಲು ಸಾಧ್ಯ.'
> **–ಸದಾನಂದ ಜೋಷಿ ಹಿರಿಯ ಪತ್ರಕರ್ತರು ಬೀದರ.**

# ನರ್ಾಟಕ ಮಾದರ ಮಹಾಸಭಾದ ಕೊಟ್ಟೂರು ತಾಲೂಕು ಅಧ್ಯಕ್ಷರಾಗಿ ಕನ್ನಾಕಟ್ಟಿ ಶಿವರಾಜ್ ನೇಮಕ



• **ಮಲ್ಲಮ್ಮ ನುಡಿ ವಾರ್ತೆಕೊಟ್ಟೂರು**

ಕರ್ನಾಟಕ ಮಾದರ ಮಹಾ ಸಭಾ ಈ ಒಂದು ಸಂಘಟನೆಯು ಸಮಾಜದ ಹಿತದೃಷ್ಟಿಯನ್ನು ಇಟ್ಟುಕೊಂಡು, ಸಮಾಜದ ಏಳಿಗೆಗಾಗಿ, ಯುವ ಪೀಳಿಗೆಯ ಶ್ರೇಯಸ್ಸಿಗಾಗಿ, ಸಮಾಜದ ಅಭಿವೃದ್ಧಿಗಾಗಿ ಶ್ರಮಿಸುವ ಸಂಘಟನೆ, ಸಮಾಜದ ವಿರುದ್ಧ ನಡೆಯುವ ಕುತಂತ್ರಗಳನ್ನು ತಡೆಯುವ, ಸಮಾಜದ ಸರ್ವತೋಮುಖ ಏಳಿಗೆಯ ದೇಯೋದ್ದೇಶಗಳನ್ನು ಇಟ್ಟುಕೊಂಡು ಸಂಘಟಿತವಾದದ್ದೆಂದು ಹೇಳಬಹುದು,

ಬೆಂಗಳೂರು ನಗರದಲ್ಲಿ 16–07–2026 ನೇ ಗುರುವಾರದಂದು ಆಹಾರ ಮತ್ತು ನಾಗರಿಕ ಸಚಿವರಾದ ಕೆ. ಹೆಚ್. ಮುನಿಯಪ್ಪ ರವರನ್ನು ಕರ್ನಾಟಕ ಮಾದರ ಮಹಾಸಭಾ ( ರಿ) ದ ರಾಜ್ಯಾದ್ಯಕ್ಷರು, ಮಹಾ ಸಭಾದ ಆದೇಶ ಪತ್ರವನ್ನು ಕರ್ನಾಟಕ ರಾಜ್ಯ ಕಛೇರಿ ಬೆಂಗಳೂರಿನಲ್ಲಿ ವಿಜಯನಗರ ಜಿಲ್ಲೆ ಕೊಟ್ಟೂರು ಪಟ್ಟಣದ ಕನ್ನಾಕಟ್ಟಿ ಶಿವರಾಜ್ ಇವರನ್ನು ತಾಲೂಕು ಅಧ್ಯಕ್ಷರನ್ನಾಗಿ ನೇಮಕ ಮಾಡಿದರು. ಹಾಗೂ

ತಾಲೂಕು ಪದಾಧಿಕಾರಿಗಳ ಆಯ್ಕೆಯ ಪಟ್ಟಿಯನ್ನು ನೀಡಿದರು, ಈ ಸಂದರ್ಭದಲ್ಲಿ ಮಾಜಿ ಸಚಿವರಾದ ಹೆಚ್.ಆಂಜನೇಯ ಕರ್ನಾಟಕ ಮಾದರ ಮಹಾ ಸಭಾದ ರಾಜ್ಯ ಕಾರ್ಯಧರ್ಶಿಗಳು ಹಾಗೂ ಸದ್ರಿ ಸಂಘಟನೆಯ ವಿಜಯನಗರ ಜಿಲ್ಲಾದ್ಯಕ್ಷರಾಗಿ ನಿಂಬಗಲ್ ರಾಮಕೃಷ್ಣ ಮತ್ತು ಜಿಲ್ಲಾ ಕಾರ್ಯದರ್ಶಿಗಳಾಗಿ ಬದ್ದಿ ಮರಿಸ್ವಾಮಿಯವರು ಹಾಗೂ ಸಂಘಟನೆಯ ಎಲ್ಲಾ ಜಿಲ್ಲಾ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ವಿದ್ಯುತ್ ಕಣ್ಣಾಮುಚ್ಚಾಲೆ
## ಅಧಿಕಾರಿಗಳ ವಿರುದ್ಧ ರೈತರ ಆಕ್ರೋಶ



• **ಮಲ್ಲಮ್ಮ ನುಡಿ ವಾರ್ತೆಕೊಟ್ಟೂರು**

ತಾಲೂಕಿನ ಸುತ್ತ ಮುತ್ತಲಿನ ಗ್ರಾಮಗಳಿಗೆ ಜೆಸ್ಕಾಂ ಇಲಾಖೆ ಸರಿಯಾದ ರೀತಿಯಲ್ಲಿ ವಿದ್ಯುತ್ ಸರಬರಾಜು ನೀಡುತ್ತಿಲ್ಲಾ 1/2 ಗಂಟೆ ವಿದ್ಯುತ್ ಕೊಟ್ರೆ 1 ತಾಸು ವಿದ್ಯುತ್ ತೆಗೆಯುತ್ತೀರಿ ಸಂಜೆ ವಿದ್ಯುತ್ ತಗೆಯುವದರಿಂದ ವಿದ್ಯಾರ್ಥಿಗಳಿಗೆ ಓದಲು ಬರೆಯಲು ಬಹಳ ತೊಂದರೆಯಾಗುತ್ತದೆ. ಅದಕಾರಣ ವಿದ್ಯುತ್ ನ್ನು ತೆಗೆಯಬಾರದೆಂದು. ಜೆಸ್ಕಾಂ ಕಚೇರಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ರಿ)ರವರ ಕಚೇರಿ ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿ ಕಾರ್ಯ ಮತ್ತು ಪಾಲನಾ ಉಪ ವಿಭಾಗ ಕೊಟ್ಟೂರು ರವರಿಗೆ ಅಖಿಲ ಭಾರತ ಗ್ರಾಮೀಣ ಕೃಷಿ ಕಾರ್ಮಿಕರ ಸಂಘಟನೆ ಪಧಾದಿಕಾರಿಗಳು ಸದಸ್ಯರು ಜೆಸ್ಕಾಂ ಕಚೇರಿ ಮುಂಭಾಗದಲ್ಲಿ ಮನವಿ ಪತ್ರ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯದರ್ಶಿ ಎಚ್ ಪರುಸಪ್ಪ ಮಾತನಾಡಿ ನಾಲ್ಕು ತಿಂಗಳ ಹಿಂದೆ ಬೆಳಿಗ್ಗೆ 4 ಗಂಟೆಯಿಂದ ಮುಂಜಾನೆ 11ಗಂಟೆಯವರಿಗೆ ಮತ್ತು ಬೆಳಿಗ್ಗೆ 11ಗಂಟೆಯಿಂದ ಸಂಜೆ 6 ರವರಿಗೆ ರೈತರಿಗೆ ಹಿಂದಿನ ದಿನಗಳಲ್ಲಿ ರೈತರ ಪಂಪ್ ಸೆಟ್ ಗಳಿಗೆ ಜೆಸ್ಕಾಂ ಇಲಾಖೆ ವಿದ್ಯುತ್ ಸರಬರಾಜು ನೀಡುತ್ತಾ ಬಂದಿದೆ ಮುಂದಿನ ದಿನಗಳಲ್ಲಿ ಇದೇ ರೀತಿಯಾಗಿ ವಿದ್ಯುತ್ ಸರಬರಾಜು ಮಂದುವರಿಸಬೇಕು ಹಾಗೂ ಕೆಲವು ತಿಂಗಳ ಹಿಂದೆ ಟಿ.ಸಿ ಸುಟ್ಟು ಹೋಗಿದ್ದು ಆ ಟಿ.ಸಿ.ಯನ್ನು ಉಚಿತವಾಗಿ ಸುತ್ತಿಕೊಡಬೇಕು ಇವಾಗ ಕೊಡತಕ್ಕಂತಹ ವಿದ್ಯುತ್ ಸರಬರಾಜನ್ನು ಹಿಂದಿನಂತೆ ಅನು ಸೇರಿಸಬೇಕು ಇಲ್ಲದಿದ್ದರೆ ಮಂದಿನ ದಿನಗಳಲ್ಲಿ ಕೊಟ್ಟೂರು ಪಟ್ಟಣದ ಜೆಸ್ಕಾಂ ಕಚೇರಿ ಮುಂಭಾಗದಲ್ಲಿ ತಾಲೂಕಿನ ರೈತರು ಧರಣಿ ಕುಳಿತು ಕೊಳ್ಳುತ್ತೇವೆ ಎಂದು ಅಗ್ರಹಿಸಿದರು.ಈ ಸಂದರ್ಭದಲ್ಲಿ ಬಾಲಗಂಗಾಧರ ಕಾಮ್ರೇಟ್ ಬಳಿಗನೂರು. ಎಮ್ ಬಿ ಯು ಪಾಲಯ್ಯ. ರಾಮನಗೌಡ್ರುಬೋರನಹಳ್ಳಿ. ಬಣಕಾರ ಮಂಜಣ್ಣ. ಪಾಲಕ್ಷಣ್ಣ. ಕೆ ದೇವಪ್ಪ ಹಾಗೂ ತಾಲೂಕಿನ ರೈತರು ಉಪಸ್ತಿತರಿದ್ದರು

# ಒಂಟಿ ಮಹಿಳೆಯರಿಗೆ ಸೌಲಭ್ಯಗಳನ್ನು ಕಲ್ಪಿಸಲು ಆಗ್ರಹ



• **ಮಲ್ಲಮ್ಮ ನುಡಿ ವಾರ್ತೆಕೊಟ್ಟೂರು**

ವಿಜಯನಗರ ಜಿಲ್ಲೆ ಕೊಟ್ಟೂರು ಪಟ್ಟಣದ ಬನಶಂಕರಿ ಕಲ್ಯಾಣ ಮಂಟಪದಲ್ಲಿ ಸೋಮವಾರ ನಡೆದ ಒಂಟಿ ಮಹಿಳೆಯರ ತಾಲ್ಲೂಕು ಸಮಾವೇಶ ಉದ್ಘಾಟಿಸಿ, ಕರ್ನಾಟಕ ರಾಜ್ಯ ಒಂಟಿ ಮಹಿಳೆಯರ ಸಂರಕ್ಷಣೆ ಸಂಘದ ರಾಜ್ಯ ಅಧ್ಯಕ್ಷರಾದ ಡಿ ಮಾಳಮ್ಮನವರು ಒಂಟಿ ಮಹಿಳೆ ಸ್ವಾವಲಂಬಿ ಜೀವಿ ಎಂಬುದನ್ನು ಮನವರಿಕೆ ಮಾಡಿಕೊಟ್ಟರೂ ಸಹ ಆಯಾ ಕಾಲಘಟ್ಟಗಳಲ್ಲಿ ಹೊಸಕಿ ಹಾಕುವ ಪ್ರಯತ್ನಗಳು ವ್ಯವಸ್ಥಿತವಾಗಿ ನಡೆಯುತ್ತಿರುವುದು ಶೋಚನೀಯ ಸಂಗತಿಯಾಗಿದೆ ಎಂದು ಅಸಮಧಾನ ವ್ಯಕ್ತಪಡಿಸಿದರು.

ವಸತಿ ರಹಿತ ಒಂಟಿ ಮಹಿಳೆಯರನ್ನು ಗುರುತಿಸಿ ವಸತಿ ಸೌಕರ್ಯ, ಪಿಂಚಣಿ, ಪಡಿತರ ಚೀಟಿ ಹಾಗೂ ಅವರ ಮಕ್ಕಳಿಗೆ ಉಚಿತ ಶಿಕ್ಷಣ ಮುಂತಾದ ಮೂಲ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರ ಮುಂಬರುವ ಬಜೆಟ್ ನಲ್ಲಿ ವಿಶೇಷ ಅನುದಾನ ಮೀಸಲಿಡಬೇಕು ಎಂಬುದು ನಮ್ಮ ಬೇಡಿಕೆಗಳಾಗಿದ್ದು ದಿನಾಂಕ 24 ಜುಲೈ 2024 ರಂದು ಹೊಸಪೇಟೆ ಮಹಿಳಾ ಮತ್ತು ಮಕ್ಕಳ ಇಲಾಖೆ ಮುಂದೆ ಧರಣಿಯನ್ನು ನಡೆಸಲಾಗುವುದು ಇವುಗಳ ಬಗ್ಗೆ ಸರ್ಕಾರದ ಗಮನ ಸೆಳೆಯಲು ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಶೀಘ್ರದಲ್ಲಿಯೇ ಹೋರಾಟವನ್ನು ಕೈಗೊಳ್ಳುತ್ತೇವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಂಘದ ವಿವಿಧ ಪದಾಧಿಕಾರಿಗಳಾದ ಹೆಚ್ ದುರ್ಗಮ್ಮ ಬಳ್ಳಾರಿ ಜಿಲ್ಲೆಯ ಅಧ್ಯಕ್ಷರು ಜಿಲ್ಲಾ ಉಪಾಧ್ಯಕ್ಷರು ಗುರು ಶಾಂತಮ್ಮ ಜಿಲ್ಲಾ ಕಾರ್ಯದರ್ಶಿ ಜಿ.ಕೆ.ವಿ. ಭಾಗ್ಯಮ್ಮ ಚಾಂದ್ ಬಿ ಕೊಟ್ಟೂರು ನೂತನ ತಾಲೂಕು ಪದಾಧಿಕಾರಿಗಳು ಭಾಗ್ಯಮ್ಮ ಮಲ್ಲನಾಯಕನಹಳ್ಳಿ ದುರ್ಗಮ್ಮ ಗಾಯತ್ರಿ ಶೆಟ್ಟೀಮ್ಮ ಸಿದ್ದಮ್ಮ ಸುಶೀಲಮ್ಮ ತಿಮ್ಮಕ್ಕ ಕಮಲಮ್ಮ ಕೊಟ್ರಮ್ಮ ಲಕ್ಷ್ಮಮ್ಮ ಕೊಟ್ರಮ್ಮ ಪಾಲ್ಗೊಂಡಿದ್ದರು.

# ಅಗ್ನಿವೀರ ಬಸವರಾಜ್ ಗೋನಾಳ್‌ಗೆ ಸನ್ಮಾನ

• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**

: ಮಾದಿನೂರಿನ ಯುವಕ ಬಸವರೆಡ್ಡಿ ಎಂ. ಗೋನಾಳ್ ಇವರು ಅಗ್ನಿವೀರ ನೇಮಕಾತಿ ಪಡೆದುಕೊಂಡಿದ್ದು ಇತ್ತೀಚಿಗೆ ಬೆಂಗಳೂರಿನಲ್ಲಿ ತರಬೇತಿಯನ್ನು ಪಡೆದು ಈಗ ಭಾರತೀಯ ಸೇನೆಯಲ್ಲಿ ಸೇವೆಗಾಗಿ ಭೂಪಾಲಗೆ ತೆರಳಲಿದ್ದು ಅವರನ್ನು ಗ್ರಾಮದ ಹಿರಿಯರು ಯುವಕರು ಸೇರಿಕೊಂಡು ಸನ್ಮಾನಿಸಿ ಬಿಳ್ಕೊಟ್ಟರು,

ಈ ಸಂದರ್ಭದಲ್ಲಿ ಅಪ್ಪಣ್ಣ ಆಚಾರ್ ಪೂಜಾರ್ ರವರು ಮಾತನಾಡಿ, ಬಸವರಾಜ್ ಗೋನಾಳ ಅವರು ದೇಶ ಸೇವೆಗಾಗಿ ಹೊರಡಲಿದ್ದು ಅವರ ದೇಶ ಸೇವೆಯು ಸಾರ್ಥಕ ಮತ್ತು ಅತ್ಯಮೂಲ್ಯವಾದದ್ದು ಅದಕ್ಕೆ ಅವರಿಗೆ ಭಗವಂತನು ಮತ್ತು ಭಾರತ ಮಾತೆಯ ಶ್ರೀರಕ್ಷೆ ಅವರಿಗೆ ಇರಲಿ ಎಂದು ಆಶಿಸಿ ಶುಭ ಕೋರಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಬಸವರಾಜ್‌ರೆಡ್ಡಿ ಗೋನಾಳ್ 'ಗ್ರಾಮದ ಜನರ ಆಶೀರ್ವಾದ ಹಾರೈಕೆ ಸನ್ಮಾನಕ್ಕೆ ನಾನೆಂದಿಗೂ ಚಿರಋಣಿ ನಿಮ್ಮ ಹಾರೈಕೆ ಸದಾ ನನ್ನ ಮೇಲೆ ಇರಲಿ, ದೇಶ ಸೇವೆಗಾಗಿ ನಾನು ಹಗಲಿರಳು ಶ್ರಮಿಸುತ್ತೇನೆ ಹೆತ್ತ ತಂದೆ ತಾಯಿಗೆ ಜನ್ಮಕೊಟ್ಟ ಭೂಮಿ ತಾಯಿಗೆ ಸೇವೆಯನ್ನು ಮಾಡುವ ಸೌಭಾಗ್ಯ ನನಗೆ ಒದಗಿ ಬಂದಿದ್ದು ಒಳ್ಳೆಯ ಹೆಸರು ಮತ್ತು ಕೀರ್ತಿಯನ್ನು ಮಾದಿನೂರು ಗ್ರಾಮಕ್ಕೆ ತರುತ್ತೇನೆ'. ಎಂದರು.

ಗ್ರಾಮದ ಯುವಕರು ಭಾರತ್ ಮಾತಾ ಕಿ ಜೈ ಎಂಬ ಜೈಕಾರವನ್ನು ಹೇಳುತ್ತಾ ಬಸವರಾಜ್ ರೆಡ್ಡಿ ಗೋನಾಳ್ ಅವರನ್ನು ಅಭಿಮಾನದಿಂದ ಬೀಳ್ಕೊಟ್ಟರು.

ಈ ಸಂದರ್ಭದಲ್ಲಿ ಮಾದಿನೂರು ಗ್ರಾಮದ ಗಣ್ಯರಾದ ಅಪ್ಪಣ್ಣ ಆಚಾರ ಪೂಜಾರ.



ಸಂತೋಷ್ ಪಾಟೀಲ್, ಮುತ್ತಣ್ಣ ತಳಕಲ, ಹನುಮರೆಡ್ಡಿ ಆಡೂರು, ಮಹಾಂತೇಶ ಗೋನಾಳ, ಬಸವರಾಜ ಗೋನಾಳ, ನಾಗರಾಜ್ ಬ್ರಂಗಿ, ಭರತೇಶ ತುಂಬಳ, ಹರ್ಷ ಪಾಟೀಲ್, ಶಿವು ನಂದಾಪುರು, ರಾಜು ಪಾಟೀಲ್, ಮಂಜುನಾಥ್ ಪಾಟೀಲ್, ಶಿವು ಬ್ರಂಗಿ, ಸಾಗರ ತುಂಬಳ, ನಾಗರೆಡ್ಡಿ ನರಸಿಮ್ಮನವರ, ಮನು ಶಿವಶಿಂಪರ, ಅಯ್ಯಪ್ಪ ಗೋನಾಳ ಇತರರು ಉಪಸ್ಥಿತರಿದ್ದರು.

# ಪ್ರಜ್ವಲ್ ಕಲ್ಲಳ್ಳಿಗೆ ಜಿಲ್ಲಾ ಪೊಲೀಸ್ ವತಿಯಿಂದ ಪ್ರತಿಭಾ ಪುರಸ್ಕಾರ

• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**

ನಗರದ ಪೊಲೀಸ್ ಪಿ.ಟಿ.ಎಸ್ ಗ್ರೌಂಡ್‌ನಲ್ಲಿಆಯೋಜಿಸಲಾದಪೊಲೀಸ್ ಕುಟುಂಬದ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಮೋರನಹಳ್ಳಿ ಗ್ರಾಮದ ನಿವಾಸಿ ಹಾಗೂ ಪೊಲೀಸ್ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ರಾಮಪ್ಪ ಕಲ್ಲಳ್ಳಿ ಅವರ ಪುತ್ರ ಪ್ರಜ್ವಲ್ ಕಲ್ಲಳ್ಳಿ ಅವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.



ಪ್ರಜ್ವಲ್ ಅವರು 2025–26ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ 93 ಶೇಕಡಾ ಅಂಕಗಳನ್ನು ಗಳಿಸಿ ಉತ್ತಮ ಶೈಕ್ಷಣಿಕ ಸಾಧನೆ ಮಾಡಿರುವ ಹಿನ್ನೆಲೆಯಲ್ಲಿ ಕೊಪ್ಪಳ ಜಿಲ್ಲಾ ಪೊಲೀಸ್ ವತಿಯಿಂದ ಅಭಿನಂದಿಸಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಬಳ್ಳಾರಿ ವಲಯದ ಪೊಲೀಸ್ ಮಹಾ ನಿರೀಕ್ಷಕರಾದ ಡಾ. ಪಿ.ಎಸ್.ಹರ್ಷ (ಐಪಿಎಸ್), ಕೊಪ್ಪಳ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ. ರಾಮ್ ಎಲ್. ಅರಸಿದ್ದಿ (ಐಪಿಎಸ್) ಸೇರಿದಂತೆ ಪೊಲೀಸ್ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ, ಪಾಲಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದು, ಪ್ರಜ್ವಲ್ ಅವರ ಮುಂದಿನ ಶೈಕ್ಷಣಿಕ ಜೀವನಕ್ಕೆ ಶುಭ ಹಾರೈಸಿದರು.

# ಶ್ರೀಗುದ್ನೇಶ್ವರ ಮಠದ ಜಾಗದಲ್ಲಿ ಪ್ರಜಾಸೌಧ ನಿರ್ಮಾಣಕ್ಕೆ ಬಿಜೆಪಿ ವಿರೋಧ :ನಿರ್ಧಾರ ಹಿಂಪಡೆಯದಿದ್ದರೆ ಉಗ್ರ ಹೋರಾಟದ ಎಚ್ಚರಿಕೆ

• **ಮಲ್ಲಮ್ಮ ನುಡಿ ವಾರ್ತೆ ಕುಕನೂರು**

ತಾಲೂಕಿನ ಗುದ್ನೇಪ್ಪನಮಠ ಗ್ರಾಮದ ಐತಿಹಾಸಿಕ ಶ್ರೀಗುದ್ನೇಶ್ವರ ದೇವಸ್ಥಾನ ಹಾಗೂ ಮಠಕ್ಕೆ ಸೇರಿದ ಭೂಮಿಯಲ್ಲಿ ರಾಜ್ಯ ಸರ್ಕಾರ ಪ್ರಜಾಸೌಧ ನಿರ್ಮಿಸಲು ಮುಂದಾಗಿರುವ ಕ್ರಮವನ್ನು ಬಿಜೆಪಿ ಜಿಲ್ಲಾ ಘಟಕ ತೀವ್ರವಾಗಿ ಖಂಡಿಸಿದೆ.



ಈ ಕುರಿತು ಪ್ರಕಟಣೆ ನೀಡಿರುವ ಬಿಜೆಪಿ ಜಿಲ್ಲಾಧ್ಯಕ್ಷ ನವೀನಕುಮಾರ್ ಗುಳಗಣ್ಣವರ ಅವರು, ಧಾರ್ಮಿಕ ದತ್ತಿಗೆ ಸೇರಿದ ಪವಿತ್ರ ಜಾಗದಲ್ಲಿ ಸರ್ಕಾರಿ ಕಟ್ಟಡ ನಿರ್ಮಿಸಲು ಮುಂದಾಗಿರುವುದು ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರುವ ಕ್ರಮವಾಗಿದೆ ಎಂದು ಕಿಡಿಕಾರಿದ್ದಾರೆ.

ಪ್ರಜಾಸೌಧ ನಿರ್ಮಾಣಕ್ಕೆ ಸರ್ಕಾರದ ಸ್ವಂತ ಜಾಗಗಳು ಲಭ್ಯವಿದ್ದರೂ ಉದ್ದೇಶಪೂರ್ವಕವಾಗಿ ಮಠದ ಭೂಮಿಯನ್ನೇ ಆಯ್ಕೆ ಮಾಡಿರುವುದು ಸರಿಯಲ್ಲ.

ಪ್ರಕರಣ ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿರುವ ಹಾಗೂ ಮೇಲ್ಮನವಿ ಪ್ರಕ್ರಿಯೆ ನಡೆಯುತ್ತಿರುವ ಸಂದರ್ಭದಲ್ಲಿಯೇ ಭೂಮಿ ಪೂಜೆ ನಡೆಸಿರುವುದು ಕಾನೂನು ಮತ್ತು ನ್ಯಾಯಾಂಗ ವ್ಯವಸ್ಥೆಗೆ ಅಪಚಾರವಾಗಿದೆ.

ಸ್ಥಳೀಯ ರೈತರು ಹಾಗೂ ಸೇವಾದಾರರಿಗೆ ಅನ್ಯಾಯವಾಗುವಂತೆ ಹೊಸ ನಕ್ಷೆಗಳನ್ನು ಸೃಷ್ಟಿಸಿ ದೌರ್ಜನ್ಯ ನಡೆಸಲಾಗುತ್ತಿದೆ.

ಧಾರ್ಮಿಕ ದತ್ತಿ ಇಲಾಖೆಯ ನಿಯಮಗಳ ಪ್ರಕಾರ ದೇವಸ್ಥಾನದ ಜಾಗವನ್ನು ಧಾರ್ಮಿಕ ಉದ್ದೇಶಗಳಿಗೆ ಮಾತ್ರ ಬಳಸಬೇಕು. ಆದ್ದರಿಂದ ಮಠದ ಭೂಮಿಯನ್ನು ಅದರ ಮೂಲ ಸ್ವರೂಪದಲ್ಲೇ ಉಳಿಸಿ, ಪ್ರಜಾಸೌಧ ನಿರ್ಮಾಣದ ನಿರ್ಧಾರವನ್ನು ಸರ್ಕಾರ ತಕ್ಷಣ ಹಿಂಪಡೆಯಬೇಕು ಎಂದು ಆಗ್ರಹಿಸಿದರು.

ಇಲ್ಲದಿದ್ದರೆ ಮಠದ ಪೂಜ್ಯರು, ಶರಣರು, ಭಕ್ತರು ಹಾಗೂ ಸಾರ್ವಜನಿಕರನ್ನು ಒಗ್ಗೂಡಿಸಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ನವೀನಕುಮಾರ್ ಗುಳಗಣ್ಣವರ ಎಚ್ಚರಿಕೆ ನೀಡಿದ್ದಾರೆ.

# ಮಕ್ಕಳ ನಗುವಿನಲ್ಲಿ ಅರಳಿದ ಕರ್ನಾಟಕ ಸೇನೆ ಜಿಲ್ಲಾ ಅಧ್ಯಕ್ಷರ ಹುಟ್ಟುಹಬ್ಬ

• **ಮಲ್ಲಮ್ಮ ನುಡಿ ವಾರ್ತೆ ಬೀದರ**

ಸಂಭ್ರಮಕ್ಕಿಂತ ಸೇವೆಗೆ ಆದ್ಯತೆ ನೀಡುವ ಉದ್ದೇಶದಿಂದ ಕರ್ನಾಟಕ ಸೇನೆ ಜಿಲ್ಲಾ ಅಧ್ಯಕ್ಷರ ಜನ್ಮದಿನವನ್ನು ಅಮಲಾಪುರದ ಮಹಾಪ್ರಜಾಪತಿ ಬುದ್ಧಿಮಾಂದ್ಯ ಹಾಗೂ ಅಂಗವಿಕಲರ ಶಾಲೆಯಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಯಿತು. ಶಾಲೆಯ ಮಕ್ಕಳೊಂದಿಗೆ ಕೇಕ್ ಕತ್ತರಿಸಿ, ಸಿಹಿ ವಿತರಿಸುವ ಮೂಲಕ ಅವರ ಮುಖದಲ್ಲಿ ನಗು ಮೂಡಿಸಿದ ಈ ಕಾರ್ಯಕ್ರಮ ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು.ಕಾರ್ಯಕ್ರಮದಲ್ಲಿ ಶಾಲೆಯ ಮಕ್ಕಳು ಮತ್ತು ಸಿಬ್ಬಂದಿ ವರ್ಗ ಜಿಲ್ಲಾ ಅಧ್ಯಕ್ಷರನ್ನು ಆತ್ಮೀಯವಾಗಿ ಸನ್ಮಾನಿಸಿ ಶುಭಾಶಯ ಕೋರಿದರು. ಸಮಾಜದ ವಿಶೇಷ ಚೇತನ ಮಕ್ಕಳೊಂದಿಗೆ ಜನ್ಮದಿನ ಆಚರಿಸುವ ಮೂಲಕ ಮಾನವೀಯತೆ, ಸಾಮಾಜಿಕ ಕಾಳಜಿ ಮತ್ತು ಸೇವಾಭಾವವನ್ನು ಸಾರಿದ ಈ ಆಚರಣೆ ವಿಶೇಷವಾಗಿತ್ತು.ಈ ಸಂದರ್ಭದಲ್ಲಿ ಕರ್ನಾಟಕ ಸೇನೆ ಜಿಲ್ಲಾ ಉಪಾಧ್ಯಕ್ಷ ರಾಜಕುಮಾರ ಪಾಟೀಲ ಖಾನಾಪೂರ ಸೇರಿದಂತೆ ಜಿಲ್ಲಾ ಪದಾಧಿಕಾರಿಗಳಾದ ಸಂಜು ಯಾದವ, ಸುಧಾಕರ್ ರಾಠೋಡ, ಶಶಿಕುಮಾರ್ ಅಟೂರೆ, ಗಿರೀಶ್ ಬಿರಾದರ್, ಮಹಾರುದ್ರ ಅಬಿಲಪಡೆ ಹಾಗೂ ಸಂತೋಷ ಪಾಟೀಲ ಉಪಸ್ಥಿತರಿದ್ದರು.




ತಾಲೂಕು ಅಧ್ಯಕ್ಷರಾದ ಬೀದರ ದಕ್ಷಿಣದ ಆದಿತ್ಯ ರೆಡ್ಡಿ, ಬೀದರ ಉತ್ತರದ ಅನಿಲ್ ರಾಜಗಿರೆ, ಭಾಲ್ಕಿ ತಾಲೂಕಿನ ಬಸವರಾಜ ಕಾರಬಾರಿ ಹಾಗೂ ರಾಜು ಕುಂಬಾರ (ಹಲಬರ್ಗಾ), ಸಂಗಮೇಶ ಬಿರಾದಾರ, ವಿಕಾಸ್ ಮಂಡಪತಿ ಮತ್ತು ಅನಿಲ್ ರೆಡ್ಡಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಜನ್ಮದಿನದ ಶುಭಾಶಯಗಳನ್ನು ತಿಳಿಸಿದರು.ಅಂತಿಮವಾಗಿ ಶಾಲೆಯ ಆಡಳಿತ ಮಂಡಳಿ, ಸಿಬ್ಬಂದಿ ಹಾಗೂ ಮಕ್ಕಳು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದ್ದು, ವಿಶೇಷ ಚೇತನ ಮಕ್ಕಳೊಂದಿಗೆ ಸಂತಸ ಹಂಚಿಕೊಂಡ ಈ ಜನ್ಮದಿನಾಚರಣೆ ಸಮಾಜಕ್ಕೆ ಮಾದರಿಯಾಯಿತು.

# ಜಿಲ್ಲೆಯಲ್ಲಿ ಮುಂಗಾರು ಕ್ಷೀಣ: ರೈತರ ನೆರವಿಗೆ ಜಿಲ್ಲಾಡಳಿತ ಸದಾ ಸಿದ್ಧ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಜಿಲ್ಲೆಯಲ್ಲಿ ಈ ಬಾರಿಯ ಮುಂಗಾರು ಮಳೆ ತೀವ್ರ ಕ್ಷೀಣಿಸಿದ್ದು, ರೈತರು ಎದುರಿಸುತ್ತಿರುವ ಸಮಸ್ಯೆಗಳನ್ನು ಆಲಿಸಿ ಹಾಗೂ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲು ಜಿಲ್ಲಾಡಳಿತವು ರೈತರೊಂದಿಗೆ ಸದಾ ಸಿದ್ಧವಿದೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್. ಕೆ ಅವರು ಹೇಳಿದರು.

ನಗರದ ನೂತನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಮಳೆ ಕೊರತೆ ಹಿನ್ನಲೆ ಕುಡಿಯುವ ನೀರು ಹಾಗೂ ಇತರೆ ಸಮಸ್ಯೆಗಳ ಕುರಿತು ರೈತರೊಂದಿಗೆ ಚರ್ಚಿಸಲು ಮಂಗಳವಾರ ಏರ್ಪಡಿಸಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸೂಪರ್ ಎಲ್ ನಿನೋ ಪ್ರಭಾವದಿಂದಾಗಿ ನೈರುತ್ಯ ಮುಂಗಾರು ಮಳೆಯ ಅಭಾವ ಉಂಟಾಗಿದ್ದು, ಇಡೀ ರಾಜ್ಯದಲ್ಲಿ ಮಳೆ ಕೊರತೆ ಎದ್ದು ಕಾಣುತ್ತಿದೆ. ಮಳೆ ಅಭಾವದ ನೇರ ಪರಿಣಾಮ ಜಲಾಶಯಗಳ ಮೇಲಾಗಿದ್ದು, ತುಂಗಭದ್ರಾ ಜಲಾಶಯದಲ್ಲಿ ನೀರಿನ ಮಟ್ಟ ಗಣನೀಯವಾಗಿ ಕುಸಿದಿದೆ. ಕಳೆದ ವರ್ಷ ಇದೇ ವೇಳೆಗೆ 72 ಟಿ.ಎಂ.ಸಿ ನೀರಿತ್ತು. ಪ್ರಸ್ತುತ ಜಲಾಶಯದಲ್ಲಿ ಕೇವಲ 26 ಟಿ.ಎಂ.ಸಿ ನೀರು ಮಾತ್ರ ಸಂಗ್ರಹವಾಗಿದೆ. ಮಲೆನಾಡು ಅಚ್ಚು-ಕಟ್ಟು ಪ್ರದೇಶದಲ್ಲಿ ಸ್ವಲ್ಪ ಮಳೆಯಾಗಿದ್ದರಿಂದ ದಿನಕ್ಕೆ ಸುಮಾರು 3,500 ಕ್ಯೂಸೆಕ್ ಒಳಹರಿವು ದಾಖಲಾಗುತ್ತಿದೆ. ಮುಂದಿನ ದಿನಗಳಲ್ಲಿ ಒಳಹರಿವು 15 ರಿಂದ 20 ಸಾವಿರ ಕ್ಯೂಸೆಕ್‌ಗೆ ಏರಿಕೆಯಾಗಿ ಸತತವಾಗಿ ಹರಿದುಬಂದರೆ ಮಾತ್ರ ಪರಿಸ್ಥಿತಿ ಸುಧಾರಿಸಲಿದೆ ಎಂದು ತಿಳಿಸಿದರು.

*ಕೃಷಿ ಇಲಾಖೆಯಿಂದ ಪರ್ಯಾಯ ಬೆಳೆ ಸಲಹೆ:*ನೀರಿನ ಅಭಾವ ಹಿನ್ನೆಲೆಯಲ್ಲಿ ಕೃಷಿ ಇಲಾಖೆಯು ರೈತರಿಗೆ ವಿಶೇಷ ಮಾರ್ಗದರ್ಶಿ ಬಿಡುಗಡೆ ಮಾಡಿದೆ. ಆಗಸ್ಟ್ ತಿಂಗಳವರೆಗೆ ಕಡಿಮೆ ತೇವಾಂಶದಲ್ಲಿ ಬೆಳೆಯಬಹುದಾದ ಪರ್ಯಾಯ ಬೆಳೆಗಳ ಪಟ್ಟಿಯನ್ನು ಸಿದ್ಧಪಡಿಸಲಾಗಿದೆ. ಸಾಂಪ್ರದಾಯಿಕ ಬೆಳೆಗಳನ್ನೇ ನೆಚ್ಚಿಕೊಳ್ಳದೆ, ಪ್ರಸ್ತುತ ಹವಾಮಾನಕ್ಕೆ ಸೂಕ್ತವಾದ ಬೆಳೆಗಳನ್ನು ಬೆಳೆಯಬೇಕು ಎಂದು ರೈತರಲ್ಲಿ ಮನವಿ ಮಾಡಿದರು.*ರೈತರ ಜಮೀನಿಗೆ ನೇರ ಭೇಟಿ: ಸರ್ಕಾರದ ಸೂಚನೆ*

ಮುಖ್ಯಮಂತ್ರಿಗಳು ಹಾಗೂ ಉಪಮುಖ್ಯಮಂತ್ರಿಗಳು ಸಭೆ ನಡೆಸಿ ನೀಡಿರುವ ನಿರ್ದೇಶನದಂತೆ ಜಿಲ್ಲಾಡಳಿತ ಮುಂದಿನ ಒಂದು ವಾರದಲ್ಲಿ ನೇರವಾಗಿ ರೈತರ ಜಮೀನುಗಳಿಗೆ ಭೇಟಿ ನೀಡಲಿದೆ. ರೈತರ ನೈಜ ಕಷ್ಟ-ನಷ್ಟಗಳನ್ನು ಪರಿಶೀಲಿಸಿ, ಸಮಗ್ರ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುತ್ತದೆ. ಜಮೀನುಗಳಿಗೆ ಭೇಟಿ ನೀಡುವಾಗ ಯಾವ ರೀತಿ ಪರಿಶೀಲನೆ ನಡೆಸಬೇಕು ಎಂಬ ಕುರಿತು ಅಧಿಕಾರಿಗಳಿಗೆ ಈಗಾಗಲೇ ವಿಶೇಷ ಕಾರ್ಯಾಗಾರ ನಡೆಸಿ ತರಬೇತಿ ನೀಡಲಾಗಿದೆ ಎಂದರು.

*ಜಿಲ್ಲಾಡಳಿತದ ಅಭಯ:*ರೈತರ ಕಷ್ಟ-ನಷ್ಟಗಳನ್ನು ಆಲಿಸಿ, ಸೂಕ್ತ ಪರಿಹಾರ ಕಂಡುಕೊಳ್ಳುವುದೇ ಜಿಲ್ಲಾಡಳಿತದ ಮುಖ್ಯ ಆದ್ಯತೆ. ರೈತರ ಅಹವಾಲು ಮತ್ತು ಸಲಹೆಗಳನ್ನು ಆಲಿಸಿ ತಕ್ಷಣದ ಕ್ರಮ ಕೈಗೊಳ್ಳಲಾಗುವುದು. ಸರ್ಕಾರ ಹಾಗೂ ಜಿಲ್ಲಾಡಳಿತವು ಈ ಬರವನ್ನ ಎದುರಿಸಲು ಸಂಪೂರ್ಣ ಸಿದ್ಧವಾಗಿದ್ದು, ರೈತರೊಂದಿಗೆ ಸದಾ ಇರಲಿದೆ ಎಂದು ಅಭಯ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಜಿಲ್ಲೆಯಲ್ಲಿ ಎದುರಾಗಿರುವ ಬರ ಪರಿಸ್ಥಿತಿ ಮತ್ತು ಕುಡಿಯುವ ನೀರಿನ ಅಭಾವವನ್ನು ಎದುರಿಸಲು ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಕುಡಿಯುವ ನೀರಿನ ಪೂರೈಕೆಗೆ ಮೊದಲ ಆದ್ಯತೆ ನೀಡಲಾಗುವುದು ಹಾಗೂ ಈ ವಿಷಯದಲ್ಲಿ ಯಾವುದೇ ರಾಜಿ ಇಲ್ಲ ಎಂದು ಸ್ಪಷ್ಟಪಡಿಸಿದರು.

ಆರ್‌ಡಿಪಿಆರ್ ವತಿಯಿಂದ ತುರ್ತು ಕುಡಿಯುವ ನೀರಿನ ಕಾಮಗಾರಿಗಳು, ಪೈಪ್‌ಲೈನ್ ರಿಪೇರಿ, ಫ್ಲಷಿಂಗ್ ಹಾಗೂ ರೀ-ಡ್ರಿಲ್ಲಿಂಗ್‌ಗಾಗಿ ಅಗತ್ಯ ಹಣ ಬಿಡುಗಡೆಯಾಗಿದೆ. ಅನುದಾನದ ಕೊರತೆ ಇಲ್ಲ. ಗ್ರಾಮೀಣ ಭಾಗದಲ್ಲಿ ಎದುರಾಗುವ ನೀರಿನ ಸಮಸ್ಯೆಗಳ ಕುರಿತು ಆರ್‌ಡಬ್ಲ್ಯೂಎಸ್ ಮತ್ತು ಪಿಡಿಒ ಅಧಿಕಾರಿಗಳು ತಕ್ಷಣ ಸ್ಪಂದಿಸಬೇಕು. ಸಾರ್ವಜನಿಕರು ಕರೆ ಮಾಡಿದರೆ ತಕ್ಷಣ ಸ್ಪಂದಿಸಿ ಸಮಸ್ಯೆ ಬಗೆಹರಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.ಗ್ರಾಮೀಣ ಭಾಗದಲ್ಲಿ ನೀರಿನ ಸಮಸ್ಯೆ ಎದುರಾದರೆ ಸಾರ್ವಜನಿಕರು ಹಾಗೂ ರೈತ ಮುಖಂಡರು ನೇರವಾಗಿ ಆರ್‌ಡಬ್ಲ್ಯೂಎಸ್ ಅಥವಾ ಜಿಲ್ಲಾ ಪಂಚಾಯತ್ ಅಧಿಕಾರಿಗಳನ್ನು ಸಂಪರ್ಕಿಸಬಹುದು. ಸಮಸ್ಯೆ ಇರುವಲ್ಲಿ ತಕ್ಷಣವೇ ಅಧಿಕಾರಿಗಳ ತಂಡ ಭೇಟಿ ನೀಡಿ ಪರಿಹರಿಸಲಿದೆ ಎಂದು ತಿಳಿಸಿದರು.ಜಂಟಿ ಕೃಷಿ ನಿರ್ದೇಶಕ ಸೋಮಸುಂದರ್ ಅವರು ಮಾತನಾಡಿ, ಮಳೆ ಅಭಾವ ಹಾಗೂ ಜಲಾಶಯಗಳಲ್ಲಿ ನೀರಿನ ಸಂಗ್ರಹ ಕಡಿಮೆ ಇರುವ ಹಿನ್ನೆಲೆಯಲ್ಲಿ, ಹೆಚ್ಚಿನ ನೀರು ಬೇಡುವ ಭತ್ತ ಮತ್ತು ಕಬ್ಬಿನ ಬದಲು ಸಜ್ಜೆ, ನವಣೆ, ಅರ್ಕ ಹಾಗೂ ಶೇಂಗಾದಂತಹ ಪರ್ಯಾಯ ಬೆಳೆಗಳನ್ನು ಬೆಳೆಯಬೇಕು. ರೈತರು ಕಡ್ಡಾಯವಾಗಿ 'ಬೆಳೆ ವಿಮೆ' ಮಾಡಿಸಿಕೊಳ್ಳಬೇಕು. ವಿಮೆ ನೋಂದಣಿಯ ಸದುಪಯೋಗ ಪಡೆದುಕೊಳ್ಳಬೇಕೆಂದು ತಿಳಿಸಿದರು.

ತೋಟಗಾರಿಕೆ ಜಂಟಿ ನಿರ್ದೇಶಕ ಶಶಿಕಾಂತ್ ಕೋಟಿಮನಿ ಅವರು ಮಾತನಾಡಿ, ಈಗಾಗಲೇ ಮೆಣಸಿಕಾಯಿ ಬೆಳೆ ಹಾಕಿರುವ ರೈತರು ಕೂಡಲೇ ಹನಿ ನೀರಾವರಿ ಪದ್ಧತಿ ಅಳವಡಿಸಿಕೊಳ್ಳಬೇಕು. ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆ ಅಡಿಯಲ್ಲಿ ಹೊಸದಾಗಿ ಬೆಳೆ ವಿಸ್ತರಣೆ ಮಾಡುವ ಅಥವಾ ಹನಿ ನೀರಾವರಿ ಅಳವಡಿಸಿಕೊಳ್ಳುವ ರೈತರಿಗೆ ಶೇಕಡಾ 90 ರಷ್ಟು ಸಹಾಯಧನ ನೀಡಲಾಗುತ್ತಿದೆ ಎಂದು ತಿಳಿಸಿದರು.

ಮುಂದಿನ ದಿನಗಳಲ್ಲಿ ಒಣ ಹುಲ್ಲಿನ ಅಭಾವ ಉಂಟಾಗುವ ಸಾಧ್ಯತೆಯಿದೆ. ಜಾನುವಾರುಗಳ ಹಿತದೃಷ್ಟಿಯಿಂದ ರೈತರು ತಮ್ಮ ಜಮೀನಿನಲ್ಲಿ ಹಸಿರು ಮೇವು ಬೆಳೆದುಕೊಳ್ಳುವುದು ಅಗತ್ಯ. ಪಶುಸಂಗೋಪನೆ ಮತ್ತು ಪಶುಆಸ್ಪತ್ರೆ ಇಲಾಖೆಯಿಂದ ಅಗತ್ಯವಿರುವ ಬೀಜದ ಕಿಟ್‌ಗಳನ್ನು ಪೂರೈಸಲಾಗುವುದು. ರೈತರು ಪಶುಸಖಿಯರನ್ನು ಸಂಪರ್ಕಿಸಿ ನೋಂದಣಿ ಮಾಡಿಕೊಳ್ಳಬೇಕು ಎಂದು ಡಿಸಿ ನಾಗೇಂದ್ರ ಪ್ರಸಾದ್.ಕೆ ಹೇಳಿದರು.

ಹಿಂದಿನ ನರೇಗಾ ಖಾತ್ರಿ ಯೋಜನೆಯನ್ನು 'ವಿಬಿ ಜಿ ರಾಮ್ ಜಿ' ಎಂಬ ಹೊಸ ಹೆಸರಿನಲ್ಲಿ ಜಾರಿಗೆ ತರಲಾಗಿದ್ದು, ಮುಂಬರುವ ದಿನಗಳಲ್ಲಿ ಬರಪರಿಸ್ಥಿತಿ ಎದುರಾಗುವ ಸಾಧ್ಯತೆ ಇರುವುದರಿಂದ, ಗ್ರಾಮೀಣ ಭಾಗದ ಬಡವರು ಹಾಗೂ ಉದ್ಯೋಗವಿಲ್ಲದವರು ಗುಳೆ ಹೋಗದಂತೆ ಕ್ರಮವಹಿಸಲಾಗುವುದು ಎಂದು ಜಿಪಂ ಸಿಇಒ ಮಹಮ್ಮದ್ ಹಾರೀಸ್ ಸುಮೇರ್ ಅವರು ತಿಳಿಸಿದರು.

ಇದೇ ವೇಳೆ ರೈತರು ತಮ್ಮ ಸಮಸ್ಯೆಗಳನ್ನು ಪ್ರಸ್ತಾಪಿಸಿದರು ಹಾಗೂ ಮನವಿ ಸಲ್ಲಿಸಿದರು. ರೈತರೊಂದಿಗೆ ಜಿಲ್ಲಾಡಳಿತ ಸದಾ ಸಿದ್ಧವಿದೆ ಎಂದು ಮನವರಿಕೆ ಮಾಡಿಕೊಡಲಾಯಿತು. ಸಭೆಯಲ್ಲಿ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ರೈತರು ಉಪಸ್ಥಿತರಿದ್ದರು.

## ಗವಿಶ್ರೀ ಟ್ರೋಫಿ -2026 ವಿತರಿಸಿದ ಡಾ. ಕೆ.ಎಂ.ಸೈಯದ್



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ತಾಲೂಕಿನ ಬಂಡಿ ಹರ್ಲಾಪುರ ಜಿಲ್ಲಾ ಪಂಚಾಯಿತಿ ಕ್ಷೇತ್ರದ ವ್ಯಾಪ್ತಿಯ ಬಸಾಪುರ. ಬಿ ಗ್ರಾಮದಲ್ಲಿ ನಡೆದ ಗವಿಶ್ರೀ ಟ್ರೋಫಿ 2026 ರ ಅಂತಿಮ ಪಂದ್ಯಾವಳಿ ಜರುಗಿತು.

ಕೆಪಿಸಿಸಿ ಸಂಯೋಜಕ ಹಾಗೂ ಸಮಾಜ ಸೇವಕ ಡಾ.ಕೆ. ಎಂ.ಸೈಯದ್ ವಿಜೇತ ತಂಡಗಳಿಗೆ ಪ್ರಥಮ ಮತ್ತು ದ್ವಿತೀಯ ಬಹುಮಾನ ವಿತರಿಸಿದರು

ಈ ಸಂಧರ್ಭದಲ್ಲಿ ಮುಖಂಡರಾದ ಖಲಂದರ್ ಬಾಬಾ ಮುಬಾರಕ್, ಸದ್ದಾಂ, ಇಮಾಮ್ ಹುಸೇನ್, ಆಯೋಜಕರಾದ ಶಕೀಲ್, ಉಸ್ಮಾನ್, ಹುಲಿಗೇಶ್, ನಿಜಾಮ್, ಯುವಕರಾದ ರಾಜು, ಮೌಲಾ ಹುಸೇನ್, ಸೈಯದ್ ಅಲೀಂ, ಕ್ರೀಡಾಪಟುಗಳು ಉಪಸ್ಥಿತರಿದ್ದರು

## ಪ್ಲಾಸ್ಟಿಕ್ ನಿಷೇಧ ಜಾಗೃತಿ ಕಾರ್ಯಕ್ರಮ



• ಮಲ್ಲಮ್ಮ ನುಡಿ ವಾರ್ತೆ ಕುಕನೂರು

ಸಾರ್ವಜನಿಕರು ಪ್ಲಾಸ್ಟಿಕ್ ಬಳಕೆ ನಿಷೇಧವನ್ನು ಪಾಲನೆ ಮಾಡಬೇಕು. ನಿಷೇಧಿತ ಬದಲು ಮರುಬಳಕೆಯ ಪ್ಲಾಸ್ಟಿಕ್ ಉಪಯೋಗಿಸಬೇಕು' ಎಂದು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರಮೇಶ್ ತಿಮ್ಮಾರಡ್ಡಿ ಹೇಳಿದರು.ತಾಲ್ಲೂಕಿನ ಭಾನಾಪುರ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಮಂಗಳವಾರ ಜಿಲ್ಲಾ ಪಂಚಾಯಿತಿ, ತಾಲ್ಲೂಕ ಪಂಚಾಯಿತಿ, ಗ್ರಾಮ ಪಂಚಾಯಿತಿ ಹಾಗೂ ಮಾನಸ ಸಮಗ್ರ ಗ್ರಾಮೀಣಾಭಿವೃದ್ಧಿ ಸಂಸ್ಥೆ ಸಯೋಗದಲ್ಲಿ ಹಮ್ಮಿಕೊಂಡಿದ್ದ ಪ್ಲಾಸ್ಟಿಕ್ ಮುಕ್ತ ಗ್ರಾಮ ಎಂಬ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.ಸರ್ಕಾರ ಈಗಾಗಲೇ ಏಕ ಬಳಕೆಯ ಪ್ಲಾಸ್ಟಿಕ್ ಅನ್ನು ನಿಷೇಧಿಸಿದೆ. ಇದನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಬೇಕು. ಇದರ ಜೊತೆಗೆ ಪ್ರತಿಯೊಬ್ಬರೂ ಪರ್ಯಾಯ ಮಾರ್ಗಗಳನ್ನು ಅಳವಡಿಸಿಕೊಳ್ಳುವುದು ಅವಶ್ಯಕ. ಪ್ಲಾಸ್ಟಿಕ್ ಚೀಲಗಳ ಬದಲಾಗಿ ಬಟ್ಟೆ ಅಥವಾ ಸೆಣಬಿನ ಚೀಲಗಳನ್ನು ಬಳಸಬೇಕು. ಮರ, ಬಿದಿರು ಅಥವಾ ಮಣ್ಣಿನಿಂದ ತಯಾರಿಸಿದ ಉತ್ಪನ್ನಗಳಿಗೆ ಆದ್ಯತೆ ನೀಡಬೇಕು ಎಂದರು.ಶಿಕ್ಷಕಿ ಲಕ್ಷ್ಮಿ ತಮ್ಮನ ಗೌಡರ ಮಾತನಾಡಿ, ಪ್ಲಾಸ್ಟಿಕ್ ಅತಿಯಾದ ಬಳಕೆಯಿಂದ ಪರಿಸರ ಮತ್ತು ಜೀವಿಗಳಿಗೆ ಉಂಟಾಗುತ್ತಿರುವ ಹಾನಿಯನ್ನು ತಡೆಗಟ್ಟಲು ಪ್ಲಾಸ್ಟಿಕ್ ಬಳಕೆ ನಿಷೇಧ ಅತ್ಯಂತ ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಜಾಗೃತರಾಗಬೇಕಿದೆ ಎಂದರು.ನಿಷೇಧದ ನಿಯಮಗಳು ಕೇವಲ ಕಾಗದದ ಮೇಲೆ ಉಳಿಯಬಾರದು. ಪ್ರತಿಯೊಬ್ಬ ನಾಗರಿಕನು ಪ್ಲಾಸ್ಟಿಕ್ ಹಾನಿಯ ಬಗ್ಗೆ ಅರಿತು, ಜವಾಬ್ದಾರಿಯುತವಾಗಿ ನಡೆದುಕೊಳ್ಳಬೇಕು. ವಿದ್ಯಾರ್ಥಿಗಳು ಮತ್ತು ಯುವಜನರು ಈ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಬೇಕು. ಭವಿಷ್ಯದ ಪೀಳಿಗೆಗೆ ಸ್ವಚ್ಛ ಮತ್ತು ಸುರಕ್ಷಿತ ಭೂಮಿಯನ್ನು ಬಿಟ್ಟುಕೊಡುವುದು ನಮ್ಮೆಲ್ಲರ ಕರ್ತವ್ಯ. ಪ್ಲಾಸ್ಟಿಕ್ ಮುಕ್ತ ಸಮಾಜ ನಿರ್ಮಾಣವೇ ದೇಶದ ಪ್ರಗತಿ ಮತ್ತು ಆರೋಗ್ಯಕ್ಕೆ ದಾರಿಯಾಗಿದೆ. ನಾವೆಲ್ಲರೂ ಕೈಜೋಡಿಸಿ ಪ್ಲಾಸ್ಟಿಕ್‌ಗೆ 'ನೋ' ಎನ್ನೋಣ, ಪರಿಸರವನ್ನು ರಕ್ಷಿಸೋಣ ಎಂದು ತಿಳಿಸಿದರು.

ಮುಖ್ಯ ಶಿಕ್ಷಕ ನಾಗಪ್ಪ ಅಗಸಿಮುಂದಿನ್, ಸಂಸ್ಥೆಯ ಅಧ್ಯಕ್ಷ ಮಂಜುನಾಥ್ ಅಂಗಡಿ, ವೀಣಾ ಕುಲಕರ್ಣಿ, ಆನಂದ್ ಕುಮಾರ್ ಕನ್ನಾರಿ, ಉದಯಕುಮಾರ್ ತಳವಾರ್, ಶಿವಕುಮಾರ್ ಹೊಸಮನಿ, ಸತೀಶ್ ಕಟ್ಟಿಮನಿ ಇದ್ದರು.

## ಗುತ್ತಿಗೆ ಆಧಾರದ ಮೇಲೆ ತಜ್ಞ ವೈದ್ಯರು ಹಾಗೂ ವೈದ್ಯಾಧಿಕಾರಿಗಳ ನೇಮಕಾತಿಗಾಗಿ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜು 21 : ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕರ್ಯಾಲಯ ಯಾದಗಿರಿ ಅಧೀನದಲ್ಲಿರುವ ವಿವಿಧ ಆರೋಗ್ಯ ಸಂಸ್ಥೆಗಳಲ್ಲಿ ಖಾಲಿ ಇರುವ ತಜ್ಞ ವೈದ್ಯರು ಹಾಗೂ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ರ್ತಿ ಮಾಡಲು ವಾಕ್-ಇನ್-ಇಂಟರ್‌ವ್ಯೂ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಖಾಲಿ ಇರುವ ಹುದ್ದೆಗಳ ವಿವರ: ಮಕ್ಕಳ ತಜ್ಞರು (04), ಅರವಳಿಕೆ ತಜ್ಞರು (09), ಪ್ರಸೂತಿ ತಜ್ಞರು (06), ರ್ಮ ರೋಡ ತಜ್ಞರು (02), ಹಿರಿಯ ವೈದ್ಯಾಧಿಕಾರಿಳು-ಎಂಬಿಬಿಎಸ್ (02), ಸಾಮಾನ್ಯ ರ್ತವ್ಯ ವೈದ್ಯರು/ಸಿಎಂಓ (03), ಕಿವಿ, ಮೂಗು ಮತ್ತು ಗಂಟಲು ತಜ್ಞರು (01).

ವೇತನ ಶ್ರೇಣಿ ವಿವರ: ತಜ್ಞ ವೈದ್ಯರಿಗೆ ಮಾಸಿಕ ರೂ. 1,00,000 ಹಾಗೂ ವೈದ್ಯಾಧಿಕಾರಿಗಳಿಗೆ ಮಾಸಿಕ ರೂ.60,000 ನಿಗದಿಪಡಿಸಲಾಗಿರುತ್ತದೆ.

ಸದರಿ ಹುದ್ದೆಗಳು ರ್ತಿಯಾಗುವವರೆಗೆ ಪ್ರತಿ ಗುರುವಾರ ವಾಕ್-ಇನ್-ಇಂಟರ್‌ವ್ಯೂ ಮೂಲಕ ನೇಮಕಾತಿ ಮಾಡಿಕೊಳ್ಳಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 9449843067 / 9008281552 ಗಳನ್ನು ಸಂರ್ಕಿಸಬಹುದು:

ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿರುವವರೆಗೆ ಈ ಖಾಲಿ ಇರುವ ಹುದ್ದೆಗಳಲ್ಲಿ (ನಿವೃತ್ತಿ ಅಥವಾ ಇನ್ನಿತರ ಕಾರಣಗಳಿಂದ) ಹೆಚ್ಚಿಗೆ ಬೇಕಾದರೂ ಆಗಬಹುದು ಅಥವ ಖಾಯಂ ನೇಮಕಾತಿಯಿಂದ ಕಡಿಮೆಯೂ ಸಹ ಆಗಬಹುದು ಎಂದು ಅವರು ತಿಳಿಸಿದ್ದಾರೆ.

## ಪ್ರಾಣಿಜನ್ಯ ರೋಗಗಳ ತಡೆಗೆ ಜಾಗೃತಿ ಅಗತ್ಯ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಪ್ರಾಣಿಜನ್ಯರೋಗಗಳ ತಡೆಗೆ ಜಾಗೃತಿ ಅಗತ್ಯವಾಗಿದ್ದು, ಪ್ರಾಣಿಗಳಿಂದ ಮನುಷ್ಯರಿಗೆ ಹರಡುವ ರೋಗಗಳ (ಝೂನೋಟಿಕ್ ಕಾಯಿಲೆಗಳು) ನಿಯಂತ್ರಣದ ಬಗ್ಗೆ ಅರಿವು ಮೂಡಿಸುವುದು ಈ ದಿನಾಚರಣೆಯ ಪ್ರಮುಖ ಉದ್ದೇಶವಾಗಿದೆ ಜಿಲ್ಲಾ ಸರ್ವೇಕ್ಷಣಾ ಘಟಕದ ಸಾಂಕ್ರಾಮಿಕ ರೋಗ ತಜ್ಞೆಡಾ. ವಿಶಾಲಾಕ್ಷಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಘಟಕ, ಪಶುಸಂಗೋಪನೆ ಇಲಾಖೆ ಹಾಗೂ ಚೈತನ್ಯ ಪದವಿಪೂರ್ವ ಕಾಲೇಜಿನ ಸಂಯುಕ್ತಾಶ್ರಯದಲ್ಲಿ ಕಾಲೇಜಿನ ಸಭಾಭವನದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ "ವಿಶ್ವಝೂನೋಸಿಸ್ ಜಾಗೃತಿ ದಿನ" ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ರೇಬೀಸ್, ಬರ್ಡ್ಫ್ಲೂ, ಬ್ರುಸೆಲ್ಲೋಸಿಸ್, ಲೆಪ್ಟೋಸ್ಪೈರೋಸಿಸ್ ಮುಂತಾದ ಕಾಯಿಲೆಗಳು ಹರಡದಂತೆ ತಡೆಯಲು ಸ್ವಚ್ಛತೆ, ಸುರಕ್ಷಿತ ಆಹಾರ ಪದ್ಧತಿ ಹಾಗೂ ಸಾಕುಪ್ರಾಣಿಗಳಿಗೆ ನಿಯಮಿತವಾಗಿ ಲಸಿಕೆ ಹಾಕುವುದು ಅತ್ಯಗತ್ಯ. ಮಾನವ, ಪ್ರಾಣಿ ಮತ್ತು ಪರಿಸರ ಆರೋಗ್ಯವನ್ನು ಸಮನ್ವಯಗೊಳಿಸುವ 'ಒನ್ ಹೆಲ್ತ್' ಪರಿಕಲ್ಪನೆಯನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು ಎಂದು ಅವರು ಪ್ರತಿಪಾದಿಸಿದರು.

ದೇವಿನಗರ ನಗರ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಸುಧಾರಾಣಿ ಅವರು ಮಾತನಾಡಿ, ಪ್ರಾಣಿಗಳನ್ನು ಮುಟ್ಟಿದ ನಂತರ ಸೋಪಿನಿಂದ ಕೈ ತೊಳೆಯುವುದು, ಮಾಂಸ, ಹಾಲು ಹಾಗೂ ಮೊಟ್ಟೆಗಳನ್ನು ಸರಿಯಾಗಿ ಬೇಯಿಸಿ ಸೇವಿಸುವುದು ಮುಖ್ಯ. ಒಂದು ವೇಳೆ ಯಾವುದೇ ಪ್ರಾಣಿ ಕಚ್ಚಿದರೆ, ಕಚ್ಚಿದ ಗಾಯವನ್ನು ತಕ್ಷಣವೇ ಹರಿಯುವ ನೀರು ಮತ್ತು ಸೋಪಿನಿಂದ 15 ರಿಂದ 20 ನಿಮಿಷಗಳ ಕಾಲ ಸ್ವಚ್ಛಗೊಳಿಸಬೇಕು. ಇದರಿಂದ ರೇಬೀಸ್ ವೈರಾಣು ನಿಷ್ಕ್ರಿಯಗೊಳ್ಳುತ್ತದೆ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಪ್ರಾಣಿ ಕಚ್ಚಿದ ತಕ್ಷಣವೇ ಸಮೀಪದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಉಚಿತ ಚಿಕಿತ್ಸೆ ಪಡೆಯುವಂತೆ ತಮ್ಮ ತಮ್ಮ ವಾರ್ಡ್ ಹಾಗೂ ಗ್ರಾಮಗಳಲ್ಲಿ ಅರಿವು ಮೂಡಿಸಲು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಂಶುಪಾಲ ಹರಿಕೃಷ್ಣ ಅವರು ವಹಿಸಿದ್ದರು.

ಈ ಸಂದರ್ಭದಲ್ಲಿ ಪಶುಸಂಗೋಪನೆ ಇಲಾಖೆಯ ಉಪನಿರ್ದೇಶಕ ಡಾ. ಸದಾಶಿವ, ಸಹಾಯಕ ನಿರ್ದೇಶಕ ಡಾ. ಶ್ರೀನಿವಾಸ್, ವೈದ್ಯಾಧಿಕಾರಿ ಡಾ. ವಿಭಾ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವಿ.ಪಿ., ಮುಖ್ಯ ಅತಿಥಿಗಳಾದ ಕಲ್ಪನಾ, ವೆಂಕಟರಮಣರೆಡ್ಡಿ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೇಣುಕಾ ಜಡಗನ್ನವರ, ತಾಲ್ಲೂಕು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಶಾಂತಮ್ಮ, ಕ್ಷೇತ್ರ ಶಿಕ್ಷಣಾಧಿಕಾರಿ ಖುರ್ಷಿದ್ ಬೇಗಂ ಸೇರಿದಂತೆ ಜಿಲ್ಲಾ ಸರ್ವೇಕ್ಷಣಾ ಘಟಕದ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

## 23ರಂದು ಯುವ ಸೌರಭ ಸಾಂಸ್ಕೃತಿಕ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

:ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜುಲೈ 23 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಡಾ. ರಾಜ್‌ಕುಮಾರ್ ರಸ್ತೆಯಲ್ಲಿರುವ ಬಿ.ಪಿ.ಎಸ್.ಸಿ. ಶಾಲಾ ಹಾಗೂ ಕಾಲೇಜಿನ ಶರಣ ಸಭಾಂಗಣದಲ್ಲಿ "ಯುವ ಸೌರಭ" ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲಾಗಿದೆ.ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರ ಶಾಸಕ ನಾರಾ ಭರತ್‌ರೆಡ್ಡಿ ಅವರು ಕಾರ್ಯಕ್ರಮ ಉದ್ಘಾಟಿಸುವರು ಹಾಗೂ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಸಂಸದರಾದ ಈ.ತುಕರಾಮ್, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ರಾಜ್ಯಸಭೆ ಸದಸ್ಯಡಾ.ಸೈಯದ್ ನಾಸೀರ್ ಹುಸೇನ್, ಕರ್ನಾಟಕ ರಾಜ್ಯ ಸಹಕಾರ ಕೈಮಗ್ಗ ನೇಕಾರ ಮಹಾಮಂಡಳಿ ನಿಯಮಿತ(ಕಾವೇರಿ ಹ್ಯಾಂಡ್‌ಲೂಮ್ಸ್)ದ ಅಧ್ಯಕ್ಷರೂ ಆದ ಕಂಪ್ಲಿ ಶಾಸಕ ಜೆ.ಎನ್.ಗಣೇಶ್, ಡಾ.ಬಾಬು ಜಗಜೀವನರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ, ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ, ಸಿರುಗುಪ್ಪ ಶಾಸಕ ಬಿ.ಎಂ.ನಾಗರಾಜ, ಸಂಡೂರು ಶಾಸಕಿ ಈ.ಅನ್ನಪೂರ್ಣ, ವಿಧಾನ ಪರಿಷತ್ ಶಾಸಕರಾದ ಡಾ.ಚಂದ್ರಶೇಖರ ಬಿ.ಪಾಟೀಲ, ಶಶೀಲ್ ಜಿ.ನಮೋಶಿ, ವೈ.ಎಂ.ಸತೀಶ್, ಮಹಾನಗರ ಪಾಲಿಕೆಯ ಮಹಾಪೌರರಾದ ಪಿ.ಗಾದೆಪ್ಪ, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್. ಆಂಜನೇಯಲು, ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಷನ್ ಲಿಮಿಟೆಡ್ ನ ಉಪಾಧ್ಯಕ್ಷ ಹೆಚ್.ಲಕ್ಷ ??ಣ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಬಿ.ಪಿ.ಎಸ್.ಸಿ. ಶಾಲಾ ಮತ್ತು ಕಾಲೇಜಿನ ಅಧ್ಯಕ್ಷ ಡಾ. ಎಸ್.ಜಿ.ವಿ.ಮಹಿಪಾಲ್ ಹಾಗೂ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ತ್ರಿಪುರಂಬ. ಹೆಚ್ ಸೇರಿದಂತೆ ಇತರರು ಭಾಗವಹಿಸುವರು.

ಕಾರ್ಯಕ್ರಮದಲ್ಲಿ ನಾಡಿನ ವೈವಿಧ್ಯಮಯ ಕಲೆ ಮತ್ತು ಸಂಸ್ಕೃತಿಯನ್ನು ಬಿಂಬಿಸುವ ಹಲವು ಪ್ರದರ್ಶನಗಳು ನೆರವೇರಲಿವೆ.ಸುಗಮ ಸಂಗೀತ: ಕು. ಪುಟ್ಟರಾಜು .ಕೆ, ಡಿ.ಕಗ್ಗಲ್ (ಬಳ್ಳಾರಿ ತಾಲ್ಲೂಕು) ಸಮೂಹ ನೃತ್ಯ: ಶಾರದ ನಾಟ್ಯ ಅಕಾಡೆಮಿ ಕಲಾವೃಕ್ಷ, ಬಳ್ಳಾರಿ

ಜಾನಪದ ಗೀತೆಗಳು: ಕು. ಮುದ್ದಮ್ಮ, ಮೆಟ್ರಿ (ಕಂಪ್ಲಿ ತಾಲ್ಲೂಕು) ನಾಟಕ (ಮೊಹರಂ ಕೊನೆ ದಿನ): ಶಿವಶಂಕರ ಮತ್ತು ಸಂಗಡಿಗರು, ಸೋಮಸಮುದ್ರ (ಬಳ್ಳಾರಿ ತಾಲ್ಲೂಕು) ಕಂಸಾಳೆ: ಶಿವಪ್ಪ .ಸಿ ಮತ್ತು ಸಂಗಡಿಗರು, ಗುತ್ತಿಗನೂರು (ಕುರುಗೋಡು ತಾಲ್ಲೂಕು) ವೀರಗಾಸೆ: ಮಲ್ಲಿಕಾರ್ಜುನ ಸ್ವಾಮಿ ಮತ್ತು ಸಂಗಡಿಗರು, ತಾರಾನಗರ (ಸಂಡೂರು ತಾಲ್ಲೂಕು) ಕಲಾಪ್ರೇಮಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ. ನಾಗರಾಜ ಅವರು ಕೋರಿದ್ದಾರೆ.

## ಎಸ್‌ಐಆರ್ ಪ್ರಕ್ರಿಯೆಯಲ್ಲಿ ಶೇ.69.17 ರಷ್ಟು ಡಿಜಿಟಲೀಕರಣ ಪೂರ್ಣ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



:ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಅಂಗವಾಗಿ ಜಿಲ್ಲೆಯಲ್ಲಿ ವಿತರಿಸಲಾಗಿರುವ ಎಸ್‌ಐಆರ್ ಗಣತಿ ನಮೂನೆಗಳ ಡಿಜಿಟಲೀಕರಣ ಪ್ರಕ್ರಿಯೆಯು ಶೇ. 69.17 ರಷ್ಟು ಪೂರ್ಣಗೊಂಡಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ತಿಳಿಸಿದ್ದಾರೆ.

ಎಸ್‌ಐಆರ್ ಪ್ರಕ್ರಿಯೆಯಲ್ಲಿ ಮನೆ-ಮನೆ ಭೇಟಿ ಪರಿಶೀಲನೆ ಮತ್ತು ಡಿಜಿಟಲೀಕರಣ ಅವಧಿ ಆಗಸ್ಟ್ 08 ರ ವರೆಗೆ ನಡೆಯಲಿದೆ. ಆಗಸ್ಟ್ 17 ರಂದು ಕರಡು ಮತದಾರರ ಪಟ್ಟಿ ಪ್ರಕಟಿಸಲಾಗುವುದು.

ಜಿಲ್ಲೆಯಲ್ಲಿ ಒಟ್ಟು 12,29,586 ಮತದಾರರಿದ್ದು, 12,29,586 ಮತದಾರರಿಗೂ ಎಸ್‌ಐಆರ್ ಗಣತಿ ನಮೂನೆಗಳನ್ನು ಶೇ.100 ರಷ್ಟು ವಿತರಿಸಲಾಗಿದೆ. ಅದರಲ್ಲಿ 8,50,506 (ಶೇ.69.17 ರಷ್ಟು) ನಮೂನೆಗಳನ್ನು ಡಿಜಿಟಲೀಕರಣ ಮಾಡಲಾಗಿದೆ. 5,622 ನಮೂನೆಗಳು ಆನ್‌ಲೈನ್ ಮೂಲಕ ಸಲ್ಲಿಕೆಯಾಗಿವೆ.ಮನೆ-ಮನೆ ಭೇಟಿ ಪರಿಶೀಲನೆಯ ಸಮಯದಲ್ಲಿ ಜಿಲ್ಲೆಯಾದ್ಯಂತ ಒಟ್ಟು 60,252 ಮತದಾರರನ್ನು ಎಎಸ್‌ಡಿಡಿಒ (ಗೈರುಹಾಜರಿ, ಸ್ಥಳಾಂತರ, ಮೃತ, ದ್ವಿಪ್ರತಿ/ಈಗಾಗಲೇ ನೋಂದಾಯಿತ ಮತ್ತು ಇತರೆ) ವರ್ಗದಲ್ಲಿ ಗುರುತಿಸಲಾಗಿದೆ.

ಖಾಯಂ ಸ್ಥಳಾಂತರಗೊಂಡವರು: 29,988

ಮೃತ ಮತದಾರರು: 21,645ಈಗಾಗಲೇ ನೋಂದಾಯಿತ/ದ್ವಿಪ್ರತಿ: 7,467ಗೈರುಹಾಜರಿ / ಸಿಗದವರು: 1,007ಇತರೆ: 145*ವಿಧಾನಸಭಾ ಕ್ಷೇತ್ರವಾರು ಪ್ರಗತಿ ನೋಟ (ಜುಲೈ 20 ರಂತೆ):*

91- ಕಂಪ್ಲಿ: 242 ಮತಗಟ್ಟೆಗಳು, 2,28,666 ಮತದಾರರು, 80,569 ಡಿಜಿಟಲೀಕರಣಗೊಂಡ ನಮೂನೆಗಳು, 7,548 ಎಎಸ್‌ಡಿಡಿಒ ಮತದಾರರು.

92-ಸಿರುಗುಪ್ಪ: 229 ಮತಗಟ್ಟೆಗಳು, 2,28,277 ಮತದಾರರು, 67,958 ಡಿಜಿಟಲೀಕರಣಗೊಂಡ ನಮೂನೆಗಳು, 13,291 ಎಎಸ್‌ಡಿಡಿಒ ಮತದಾರರು.

93-ಬಳ್ಳಾರಿ (ಗ್ರಾಮೀಣ): 236 ಮತಗಟ್ಟೆಗಳು, 2,51,325 ಮತದಾರರು, 1,66,523 ಡಿಜಿಟಲೀಕರಣಗೊಂಡ ನಮೂನೆಗಳು, 16,938 ಎಎಸ್‌ಡಿಡಿಒ ಮತದಾರರು.

94- ಬಳ್ಳಾರಿ ನಗರ : 261 ಮತಗಟ್ಟೆಗಳು, 2,79,144 ಒಟ್ಟು ಮತದಾರರು, 1,52,819 ಡಿಜಿಟಲೀಕರಣಗೊಂಡ ನಮೂನೆಗಳು, 9,090 ಎಎಸ್‌ಡಿಡಿಒ ಮತದಾರರು.95-ಸಂಡೂರು: 259 ಮತಗಟ್ಟೆಗಳು, 2,42,174 ಒಟ್ಟು ಮತದಾರರು, 1,82,637 ಡಿಜಿಟಲೀಕರಣಗೊಂಡ ನಮೂನೆಗಳು, 13,385 ಎಎಸ್‌ಡಿಡಿಒ ಮತದಾರರು.ಒಟ್ಟು: ಜಿಲ್ಲೆಯಲ್ಲಿ 1,227 ಮತಗಟ್ಟೆಗಳು, ಒಟ್ಟು 12,29,586 ಮತದಾರರು, 8,50,506 (ಶೇ.69.17) ಡಿಜಿಟಲೀಕರಣಗೊಂಡ ನಮೂನೆಗಳು, 60,252 ಎಎಸ್‌ಡಿಡಿಒ ಮತದಾರರಿದ್ದಾರೆ.*ಸಾರ್ವಜನಿಕರಿಗೆ ಮನವಿ:*ಆಗಸ್ಟ್ 8 ರವರೆಗೆ ಮನೆ-ಮನೆ ಭೇಟಿ ಪರಿಶೀಲನಾ ಅಭಿಯಾನ ನಡೆಯಲಿದ್ದು, ಮತದಾರರ ಪಟ್ಟಿಯನ್ನು ದೋಷರಹಿತವಾಗಿಸಲು ಸಾರ್ವಜನಿಕರು ಹಾಗೂ ಮತದಾರರು ಮನೆಗೆ ಆಗಮಿಸುವ ಬಿಎಲ್‌ಒ ಅಧಿಕಾರಿಗಳಿಗೆ ಅಗತ್ಯ ಮಾಹಿತಿ ನೀಡಬೇಕು. ಈಗಾಗಲೇ ವಿತರಿಸಲಾಗಿರುವ ಎಸ್‌ಐಆರ್ ನಮೂನೆಗಳನ್ನು ಭರ್ತಿ ಮಾಡಿ ನೀಡಿ ಸಹಕರಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಕಲಬುರಗಿಯಲ್ಲಿ 29 ರಂದು ಬೃಹತ್ ಉದ್ಯೋಗ ಮೇಳ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕೌಶಲ್ಯ ಕರ್ನಾಟಕ ಹಾಗೂ ಎಕ್ಸೆಲರೇಟರ್ ಸಂಸ್ಥೆಗಳ ಜಂಟಿ ಆಶ್ರಯದಲ್ಲಿ ಉದ್ಯೋಗಾಕಾಂಕ್ಷಿಗಳಿಗಾಗಿ ಜುಲೈ 29 ರಂದು ಕಲಬುರಗಿಯ ಶಂಭೋಗನಹಳ್ಳಿಯ ಐವಾನ್-ಇ-ಶಾಹಿ ಪ್ರದೇಶದ ಪಿ.ಡಿ.ಎ. ಇಂಜಿನಿಯರಿಂಗ್ ಕಾಲೇಜಿನಲ್ಲಿ 'ಬೃಹತ್ ಉದ್ಯೋಗ ಮೇಳ 2026' ಆಯೋಜಿಸಲಾಗಿದೆ.ಈ ಮೇಳದಲ್ಲಿ ಪ್ರಮುಖ ಬಹುರಾಷ್ಟ್ರೀಯ ಕಂಪನಿಗಳು ಹಾಗೂ ವಿವಿಧ ವಲಯಗಳ ಪ್ರತಿಷ್ಠಿತ ಸಂಸ್ಥೆಗಳು ಭಾಗವಹಿಸಲಿದ್ದು, ನಿರುದ್ಯೋಗ ಯುವಕ-ಯುವತಿಯರಿಗೆ ಬೃಹತ್ ಮಟ್ಟದ ಉದ್ಯೋಗಾವಕಾಶಗಳು ಲಭ್ಯವಾಗಲಿವೆ.

*ಶೈಕ್ಷಣಿಕ ಅರ್ಹತೆಗಳು:*10ನೇ ತರಗತಿ, 12ನೇ ತರಗತಿ, ಐ.ಟಿ.ಐ ಮತ್ತು ಡಿಪ್ಲೋಮಾ

ಪದವಿ: ಬಿ.ಸಿ.ಎ, ಬಿ.ಕಾಂ, ಬಿ.ಬಿ.ಎ, ಬಿ.ಎ.

ಇಂಜಿನಿಯರಿಂಗ್: ಮೆಕ್ಯಾನಿಕಲ್, ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್, ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್, ಆಟೋಮೊಬೈಲ್, ಕಂಪ್ಯೂಟರ್ ಸೈನ್ಸ್ ಮತ್ತು ಸಿವಿಲ್ ವಿಭಾಗಗಳು.

*ಉದ್ಯೋಗಾಕಾಂಕ್ಷಿಗಳ ನೋಂದಣಿ ಲಿಂಕ್‌ಗಳು:* ಅರ್ಹ ಅಭ್ಯರ್ಥಿಗಳು ಮುಂಚಿತವಾಗಿಯೇ ನೋಂದಾಯಿಸಿಕೊಳ್ಳಲು ಕೋರಲಾಗಿದೆ.

10ನೇ, 12ನೇ, ಐಟಿಐ, ಡಿಪ್ಲೊಮಾ, ಬಿ.ಸಿ.ಎ, ಬಿ.ಕಾಂ, ಬಿ.ಬಿ.ಎ, ಬಿ.ಎ. ಅಭ್ಯರ್ಥಿಗಳು https://forms.gle/nn7fZro6hMctptgD6 ಇಲ್ಲಿ ನೋಂದಾಯಿಸಿಕೊಳ್ಳಬೇಕು.

ಬಿ.ಇ (ಇಂಜಿನಿಯರಿಂಗ್) ಅಭ್ಯರ್ಥಿಗಳು https://forms.gle/7MMtsNin9rySAcgBA ಇಲ್ಲಿ ನೋಂದಾಯಿಸಿಕೊಳ್ಳಬೇಕು.

ಉದ್ಯೋಗದಾತರು ನೋಂದಣಿಗೆ https://forms.gle/veiTZVas4be7hQnT7 ಇಲ್ಲಿ ನೋಂದಾಯಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೊ.9148130287, 6366352281 ಗೆ ಕರೆಮಾಡಿ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಪ್ರಥಮ ಟರ್ಫ್ ಕ್ರಿಕೆಟ್ ಗ್ರೌಂಡ್ ಲೋಕಾರ್ಪಣೆ



**ಬಾಗಲಕೋಟೆ:** ನಗರದ ಬಿ.ವಿ.ವಿ. ಸಂಘದ ದಿ ಸಿಟಿ ಕ್ರಿಕೆಟ್ ಕ್ಲಬ್ ಬಾಗಲಕೋಟೆ ಹಾಗೂ ಕರ್ನಾಟಕ ಸ್ಟೇಟ್ ಕ್ರಿಕೆಟ್ ಅಸೋಸಿಯೇಷನ್ ಸಹಯೋಗದಲ್ಲಿ ಜಿಲ್ಲೆಯ ಪ್ರಥಮ ಟರ್ಫ್ ಕ್ರಿಕೆಟ್ ಮೈದಾನವನ್ನು ಮಂಗಳವಾರ ಲೋಕಾರ್ಪಣೆ ಮಾಡಲಾಯಿತು.

ಬಿ.ವಿ.ವಿ. ಸಂಘದ ಇಂಜಿನಿಯರಿಂಗ್ ಕಾಲೇಜು ಮೈದಾನದಲ್ಲಿ ನಿರ್ಮಿಸಲಾದ ಟರ್ಫ್ ಕ್ರಿಕೆಟ್ ಗ್ರೌಂಡ್ ಅನ್ನು ಮಾಜಿ ಶಾಸಕ ಹಾಗೂ ಬಿ.ವಿ.ವಿ. ಸಂಘದ ಕಾರ್ಯಾಧ್ಯಕ್ಷ ಡಾ. ವೀರಣ್ಣ ಚರಂತಿಮಠ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿಯೇ ಮೊದಲ ಬಾರಿಗೆ ಟರ್ಫ್ ಕ್ರಿಕೆಟ್ ಗ್ರೌಂಡ್ ನಿರ್ಮಾಣಗೊಂಡಿರುವುದು ಸಂತಸದ ವಿಷಯವಾಗಿದೆ. ಇದರಿಂದ ಶಾಲಾ–ಕಾಲೇಜು ವಿದ್ಯಾರ್ಥಿಗಳು ಹಾಗೂ ಕ್ರಿಕೆಟ್ ಅಭಿಮಾನಿಗಳಿಗೆ ಅತ್ಯುತ್ತಮ ಗುಣಮಟ್ಟದ ಮೈದಾನದಲ್ಲಿ ಅಭ್ಯಾಸ ನಡೆಸಲು ಮತ್ತು ಪಂದ್ಯಾವಳಿಗಳನ್ನು ಆಯೋಜಿಸಲು ಅನುಕೂಲವಾಗಲಿದೆ ಎಂದು ಹೇಳಿದರು. ಈ ಭಾಗದ ಕ್ರಿಕೆಟ್ ಆಟಗಾರರು ಮತ್ತು ಅಭಿಮಾನಿಗಳ ಬಹುದಿನಗಳ ಕನಸು ಇದೀಗ ನನಸಾಗಿದೆ. ಕ್ರೀಡಾ ಪ್ರತಿಭೆಗಳನ್ನು ಗುರುತಿಸಿ ಬೆಳೆಸಲು ಹಾಗೂ ಯುವಜನರಲ್ಲಿ ಕ್ರೀಡಾಸಕ್ತಿಯನ್ನು ಉತ್ತೇಜಿಸಲು ಈ ಟರ್ಫ್ ಕ್ರಿಕೆಟ್ ಗ್ರೌಂಡ್ ಮಹತ್ವದ ಪಾತ್ರ ವಹಿಸಲಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶಾಲಾ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಮಹಾಂತೇಶ ಶೆಟ್ಟರ, ಕಟ್ಟಡ ವಿಭಾಗದ ಕಾರ್ಯಾಧ್ಯಕ್ಷ ಮಹೇಶ ಕಕ್ಕರೆಡ್ಡಿ, ಕರ್ನಾಟಕ ಸ್ಟೇಟ್ ಕ್ರಿಕೆಟ್ ಅಕಾಡೆಮಿ ಹಾಗೂ ಬಿವಿವಿಎಸ್ ಕ್ರಿಕೆಟ್ ಕ್ಲಬ್ ಕೋಚ್ ರಾಕೇಶ ಮಠ, ಕ್ರೀಡಾ ಶಿಕ್ಷಕರಾದ ಗಣೇಶ ಕೋರಿ, ವಿಜಯ ಹಿರೇಮಠ, ದೀಪಕ ಬದಾಮಿ, ಬಸವರಾಜ ಸಜ್ಜನ ಸೇರಿದಂತೆ ಬಿ.ವಿ.ವಿ. ಸಂಘದ ಪದಾಧಿಕಾರಿಗಳು, ಗಣ್ಯರು, ಕ್ರೀಡಾಪಟುಗಳು, ವಿದ್ಯಾರ್ಥಿಗಳು ಹಾಗೂ ಕ್ರಿಕೆಟ್ ಅಭಿಮಾನಿಗಳು ಉಪಸ್ಥಿತರಿದ್ದರು.

# ಮಾಹಿತಿ ಹಕ್ಕು ಉಲ್ಲಂಘನೆ: 4 ಪ್ರಕರಣಗಳಿಗೆ ದಂಡ

**ಬಾಗಲಕೋಟೆ:** ಸಕಾಲದಲ್ಲಿ ಮಾಹಿತಿ ನೀಡದೇ ಕರ್ತವ್ಯ ಲೋಪ ಮತ್ತು ನಿರ್ಲಕ್ಷ್ಯ ತೋರಿದ ಹುನಗುಂದ ತಾಲೂಕಿನ ಪಂಚಾಯತರಾಜ್ ಇಂಜಿನೀಯರಿಂಗ್ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಿಗೆ 4 ಪ್ರಕರಣಗಳಲ್ಲಿ ತಲಾ 5 ಸಾವಿರ ರೂ.ಗಳಂತೆ ದಂಡ ವಿಧಿಸಿ ಶಿಸ್ತುಕ್ರಮ ಜರುಗಿಸಲಾಗಿದೆ ಎಂದು ಮಾಹಿತಿ ಆಯೋಗದ ಆಯುಕ್ತರಾದ ಪ್ರಕಾಶ ನಾರಾಯಣ ಚನ್ನಾಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

2021ರಲ್ಲಿ ಪ್ರಕರಣದ ಕುರಿತು ಸಹಾಯಕ ನಿರ್ವಾಹಕ ಅಭಿಯಂತರಿಗೆ ಕರ್ನಾಟಕ ಮಾಹಿತಿ ಆಯೋಗ ಪೀಠದಲ್ಲಿ ಮೇಲ್ಮನವಿಗಳ ವಿಚಾರಣೆ ನಡೆಸಿ, ಮಾಹಿತಿ ಹಕ್ಕು ಕಾಯ್ದೆ ಉಲ್ಲಂಘನೆ ಮಾಡಿದ್ದರಿಂದ 4 ಪ್ರಕರಣಗಳಲ್ಲಿ ದಂಡ ವಿಧಿಸಿ ಶಿಸ್ತುಕ್ರಮ ಜರುಗಿಸಲಾಗಿದೆ. ಮೇಲ್ಮನವಿದಾರರ ಅರ್ಜಿಗಳಿಗೆ ಸ್ಪಂದಿಸಿ, ಕಾಲಮಿತಿಯೊಳಗೆ ಸರಿಯಾದ ಮಾಹಿತಿ ನೀಡಲು ತಿಳಿಸಿರುತ್ತಾರೆ. ಮಾಹಿತಿ ನೀಡದೇ ಕರ್ತವ್ಯ ಲೋಪ ಮತ್ತು ನಿರ್ಲಕ್ಷ್ಯ ತೋರಿದಲ್ಲಿ ಶಿಸ್ತುಕ್ರಮ ಜರುಗಿಸಿ ವಿಚಾರಣೆಗೆ ಶಿಫಾರಸ್ಸು ಮತ್ತು ದಂಡ ವಿಧಿಸಲಾಗುವದು ಎಂದು ತಿಳಿಸಿದ್ದಾರೆ.

# ತಹಶೀಲ್ದಾರ ಕಚೇರಿಗೆ ಡಿಸಿ ಭೇಟಿ, ಕಾರ್ಯವೈಖರಿ ಪರಿಶೀಲನೆ



**ಬಾಗಲಕೋಟೆ:** ಬಾಗಲಕೋಟೆ ತಹಶೀಲ್ದಾರ ಕಚೇರಿಗೆ ಜಿಲ್ಲಾಧಿಕಾರಿ ಸಂಗಪ್ಪ ಅನಿರೀಕ್ಷಿತ ಭೇಟಿ ನೀಡಿ, ಭೂಮಿ ಕೇಂದ್ರ ಹಾಗೂ ಇತರೆ ವಿಭಾಗದ ಕಾರ್ಯವೈಖರಿಯನ್ನು ಪರಿಶೀಲಿಸಿದರು.

ಭೂಮಿ ಕೇಂದ್ರದಲ್ಲಿ ರೈತರು ಹಾಗೂ ಸಾರ್ವಜನಿಕರಿಗೆ ನೀಡಲಾಗುತ್ತಿರುವ ಪಹಣಿ, ಮ್ಯುಟೇಷನ್, ದಾಖಲೆಗಳ ತಿದ್ದುಪಡಿ ಸೇರಿದಂತೆ ವಿವಿಧ ಕಂದಾಯ ಸೇವೆಗಳ ಕುರಿತು ಮಾಹಿತಿ ಪಡೆದರು.

ಅರ್ಜಿಗಳನ್ನು ನಿಗದಿತ ಅವಧಿಯೊಳಗೆ ವಿಲೇವಾರಿ ಮಾಡಿ ಸಾರ್ವಜನಿಕರಿಗೆ ವಿಳಂಭವಿಲ್ಲದೇ ಸೇವೆ ಒದಗಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕಚೇರಿಯ ವಿವಿಧ ಶಾಖೆಗಳಿಗೆ ಭೇಟಿ ನೀಡಿ ಕಡತಗಳ ನಿರ್ವಹಣೆ, ಸಾರ್ವಜನಿಕರ ಅಹವಾಲುಗಳ ಸ್ವೀಕಾರ ಮತ್ತು ವಿಲೇವಾರಿ ಪ್ರಕ್ರಿಯೆಯನ್ನು ಪರಿಶೀಲಿಸಿದರು. ಕಚೇರಿಗೆ ಬರುವ ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸಬೇಕು. ಯಾವುದೇ ರೀತಿಯ ಅನಗತ್ಯ ವಿಳಂಬ ಅಥವಾ ತೊಂದರೆ ಉಂಟಾಗದಂತೆ ಕ್ರಮಕೈಗೊಳ್ಳಲು ತಿಳಿಸಿದರು.

ಸರಕಾರದ ಜನಪರ ಸೇವೆಗಳನ್ನು ಪಾರದರ್ಶಕವಾಗಿ ಹಾಗೂ ಸಮಯಬದ್ದವಾಗಿ ಒದಗಿಸುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ. ಕಚೇರಿಯಲ್ಲಿ ಶಿಸ್ತು, ಸ್ವಚ್ಚತೆ ಹಾಗೂ ದಾಖಲೆಗಳ ಸಮರ್ಪಕ ನಿರ್ವಹಣೆಗೆ ಹೆಚ್ಚಿನ ಆದ್ಯತೆ ನೀಡುವಂತೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ತಹಶೀಲ್ದಾರ ವಾಸುದೇವ ಸ್ವಾಮಿ ಸೇರಿದಂತೆ ಕಂದಾಯ ಇಲಾಖೆಯ ಇತರೆ ಅಧಿಕಾರಿಗಳು ಉಪಸ್ಥಿತರಿದ್ದು ವಿವಿಧ ಸೇವೆಗಳ ಅನುಷ್ಠಾನ ಕುರಿತು ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿದರು.

ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಉಪ ವಿಭಾಗಾಧಿಕಾರಿ ಮಹೇಶ ಮಾಲಗಿತ್ತಿ, ಚುನಾವಣಾ ವಿಭಾಗದ ಮಹೇಶ ಪಾಂಡವ ಹಾಗೂ ಇತರರು ಇದ್ದರು.

# ಹಡಪದ ಅಪ್ಪಣ್ಣ ಜಯಂತಿ ಪೂರ್ವಭಾವಿ ಸಭೆ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜಿಲ್ಲೆಯಲ್ಲಿ ಆಗಸ್ಟ್ 04ರಂದು ಜಿಲ್ಲಾ ಮಟ್ಟದಲ್ಲಿ ಹಡಪದ ಅಪ್ಪಣ್ಣ ಜಯಂತಿ ಕಾರ್ಯಕ್ರಮವನ್ನು ಎಲ್ಲರ ಸಹಕಾರ, ಸಮನ್ವಯತೆ ಹಾಗೂ ಸಾಮರಸ್ಯದೊಂದಿಗೆ ಅರ್ಥಪೂರ್ಣವಾಗಿ ಆಚರಿಸಲು ಅಗತ್ಯಕ್ರಮವಹಿಸುವಂತೆ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜುಲೈ 21ರ ಮಂಗಳವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಹಡಪದ ಅಪ್ಪಣ್ಣ ಜಯಂತಿ ಆಚರಣೆ ಸಂಬಂಧ ಕರೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಂದು ಬೆಳಿಗ್ಗೆ 9.30ಕ್ಕೆ ರಾಯಚೂರು ನಗರದ ಬಸವೇಶ್ವರ ವೃತ್ತದಿಂದ ಮೆರವಣಿಗೆ ನಡೆಸಲಾಗುವುದು. ನಂತರ 11ಗಂಟೆಗೆ ವೇದಿಕೆ ಕಾರ್ಯಕ್ರಮವನ್ನು ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಬೇಕು. ವೇದಿಕೆಯಲ್ಲಿ ಹಡಪದ ಅಪ್ಪಣ್ಣ ಭಾವಚಿತ್ರದ ಬ್ಯಾನರ್‌ಗಳನ್ನು ಅಳವಡಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿಗಳು ಸೂಚಿಸಿದರು.



ಜಯಂತಿ ಕಾರ್ಯಕ್ರಮದ ವೇದಿಕೆ ಅಲಂಕಾರ, ಗಣ್ಯರಿಗೆ ಪುಸ್ತಕ ವಿತರಣೆ, ಪೂಜೆಗೆ ಹೂವು–ಹಾರಗಳ ವ್ಯವಸ್ಥೆ ಮಾಡಬೇಕು. ಪೊಲೀಸ್ ಇಲಾಖೆಯಿಂದ ಮೆರವಣಿಗೆ ಹಾಗೂ ವೇದಿಕೆ ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಸೂಕ್ತ ಬಂದೋಬಸ್ತ್ ಒದಗಿಸಬೇಕು. ಶಿಷ್ಟಾಚಾರದಂತೆ ಆಮಂತ್ರಣ ಪತ್ರಿಕೆ ಮುದ್ರಿಸಿ ಗಣ್ಯರ ಆಹ್ವಾನಕ್ಕೆ ಕ್ರಮ ವಹಿಸಬೇಕು. ಎಲ್ಲ ಶಾಲಾ ಹಾಗೂ ಕಾಲೇಜುಗಳಲ್ಲಿ ಕಡ್ಡಾಯವಾಗಿ ಹಡಪದ ಅಪ್ಪಣ್ಣ ಜಯಂತಿ ಆಚರಣೆ ಮಾಡಬೇಕೆಂದು ಹೇಳಿದರು.

ವೇದಿಕೆ ಕಾರ್ಯಕ್ರಮದಲ್ಲಿ ಹಡಪದ ಅಪ್ಪಣ್ಣ ಅವರ ಕುರಿತು ವಿಶೇಷ ಉಪನ್ಯಾಸ ನೀಡಲು ಅವರ ಕುರಿತು ಹೆಚ್ಚಿನ ಮಾಹಿತಿ ಇರುವ ಉಪನ್ಯಾಸಕರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಲು ಸಭೆಯಲ್ಲಿ ನಿರ್ಣಯಿಸಲಾಯಿತು.

ಜಯಂತಿ ಆಚರಣೆ ಕಾರ್ಯಕ್ರಮಕ್ಕೆ ಸಮಾಜದ ಬಂಧುಗಳ ಸಹಕಾರವೂ ಅಗತ್ಯವಿದ್ದು, ಜಿಲ್ಲಾಡಳಿತದೊಂದಿಗೆ ಸಹಕರಿಸಿ ವ್ಯವಸ್ಥಿತ ಜಯಂತಿ ಆಚರಣೆಗೆ ಎಲ್ಲರೂ ಅನುಕೂಲ ಮಾಡಿಕೊಡಬೇಕು. ತಾಲೂಕು ಮಟ್ಟದಲ್ಲಿ ಜುಲೈ 29ರಂದು ಈ ಕಾರ್ಯಕ್ರಮದ ಆಚರಣೆ ಮಾಡಲಾಗುವುದು. ಸಮಾಜದ ಮುಖಂಡರ ಸಲಹೆಯಂತೆ ಜಿಲ್ಲಾ ಮಟ್ಟದ ಕಾರ್ಯಕ್ರಮವನ್ನು ಆಗಸ್ಟ್ 04ರಂದು ಆಚರಿಸಲಾಗುವುದು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಇಲಾಖೆಯ ಸಹಾಯಕ ನಿರ್ದೇಶಕಿ ಉತ್ತರಾದೇವಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಜಿ.ಸುರೇಶ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಡಿಟಿಡಿ ಚಂದ್ರಶೇಖರ, ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಅಧಿಕಾರಿ ಸರಸ್ವತಿ, ಜಿಲ್ಲಾ ಮಕ್ಕಳ ಸಂರಕ್ಷಣಾಧಿಕಾರಿ ಎಮ್.ಡಿ.ಗೋಕಲ್, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕಿ ಪುಷ್ಪಲತಾ, ಕಲ್ಯಾಣ ಕರ್ನಾಟಕ ಮಹಿಳಾ ಸಂಘದ ಮುಖಂಡರಾದ ಡಾ.ಶಾಂತ ಕುಲಕರ್ಣಿ, ಹಡಪದ ಅಪ್ಪಣ್ಣ ಸಮಾಜದ ಮುಖಂಡರಾದ ಬಸವರಾಜ ಹೀರಾ, ಬಸವಂತರಾಯ್, ಅಮರಪ್ಪ, ಕರಿಬಸವ, ಗದ್ದೆಪ್ಪ, ಮುತ್ತಣ್ಣ, ಆದಪ್ಪ, ನರಸಪ್ಪ, ಮಹಾದೇವ, ವೀರಭದ್ರಪ್ಪ, ಅಯ್ಯಪ್ಪ ಸಿರವಾರ, ವೀರೇಶ್, ಮಲ್ಲಿಕಾರ್ಜುನ ಮಹಾಂತೇಶ, ಗುಂಡಪ್ಪ ಸೇರಿದಂತೆ ಇತರರು ಇದ್ದರು.

# ಮಕ್ಕಳ ಆರೋಗ್ಯ ಕ್ಷೇಮಕ್ಕಾಗಿ ಸಾಂಪ್ರದಾಯಿಕ ಸೀತಲ ಹಬ್ಬ ಆಚರಣೆ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ಆಷಾಢ ಮಾಸದ ಅಂಗವಾಗಿ ಬಂಜಾರ ಸಮಾಜದ ವತಿಯಿಂದ ಸಾಂಪ್ರದಾಯಿಕವಾಗಿ ಸಿತ್ಲಾ ಹಬ್ಬವನ್ನು ಭಕ್ತಿ ಮತ್ತು ಸಂಭ್ರಮದಿಂದ ಆಚರಿಸಲಾಯಿತು.

ಮರಿಯಮ್ಮ ದೇವಿ ಹಾಗೂ ಸೇವಾಲಾಲ್ ದೇವಸ್ಥಾನದಿಂದ ಸಮಾಜದ ಗುರುಹಿರಿಯರು, ಮುಖಂಡರು, ಯುವಕರು, ಮಹಿಳೆಯರು ಮತ್ತು ಭಕ್ತರು ತಮ್ಮ ಮನೆಗಳಿಂದ ದೇವರಿಗೆ ಹರಕೆಯಾಗಿ ತಂದಿದ್ದ ಎಡೆ (ಪ್ರಸಾದ)ಯನ್ನು ಹೊತ್ತು ಮೆರವಣಿಗೆ ಮೂಲಕ ಸಿತ್ಲಾ ಕಟ್ಟೆಯವರೆಗೆ ಸಾಗಿದರು.

ಸಿತ್ಲಾ ಅಮ್ಮನ ದೇವಾಲಯದಲ್ಲಿ ಪೂಜಾರಿಗಳು ಶ್ರದ್ಧಾಭಕ್ತಿಯಿಂದ ವಿಶೇಷ ಪೂಜೆ ನೆರವೇರಿಸಿದರು. ಈ ವೇಳೆ ಮಹಿಳೆಯರು ಸಾಂಪ್ರದಾಯಿಕ ಯಾಡಿ ಹಾಡುಗಳನ್ನು ಹಾಡುತ್ತಾ ಸಂಭ್ರಮಿಸಿದರು. ಬಳಿಕ ಭಕ್ತರು ತಂದಿದ್ದ ಎಡೆ ಪ್ರಸಾದವನ್ನು ದೇವರಿಗೆ ಸಮರ್ಪಿಸಿ



ಪೂಜೆ ಸಲ್ಲಿಸಿದರು. ಪೂಜೆ ನಂತರ ದೇವರ ಪೂಜಾರಿಗಳು ಪ್ರಸಾದವನ್ನು ನೆರೆದಿದ್ದ ಭಕ್ತಾದಿಗಳಿಗೆ ವಿತರಿಸಿದರು. ಪ್ರತಿ ವರ್ಷ ಆಷಾಢ ಮಾಸದ ಅಮಾವಾಸ್ಯೆಯಂದು ನಡೆಯುವ ಈ ಸಾಂಪ್ರದಾಯಿಕ ಸಿತ್ಲಾ ಹಬ್ಬದಲ್ಲಿ ಬಂಜಾರ ಸಮಾಜದ ಅನೇಕ ಕುಟುಂಬಗಳು ಭಾಗವಹಿಸಿ ಧಾರ್ಮಿಕ ಆಚರಣೆಯಲ್ಲಿ ಪಾಲ್ಗೊಂಡರು.

ಮಕ್ಕಳ ಆರೋಗ್ಯ, ಸಮುದಾಯದ ಕ್ಷೇಮಕ್ಕಾಗಿ ಸಾಂಪ್ರದಾಯಿಕ ಸೀತ್ಲಾ ಹಬ್ಬ ಆಚರಣೆ ಮಣ್ಣೆತ್ತಿನ ಅಮಾವಾಸ್ಯೆ (ಆಷಾಢ ಅಮಾವಾಸ್ಯೆ) ಪ್ರಯುಕ್ತ ಹಿಂದೂ ಗೋರ್ ಬಂಜಾರ (ಲಂಬಾಣಿ) ಸಮುದಾಯದವರು ಸಾಂಪ್ರದಾಯಿಕ ಸೀತ್ಲಾ ಹಬ್ಬವನ್ನು ಭಕ್ತಿಭಾವದಿಂದ ಆಚರಿಸಿದರು.

ಬಂಜಾರ ಸಮುದಾಯದ ನಂಬಿಕೆಯಂತೆ ಮಕ್ಕಳಿಗೆ ಕಾಣಿಸಿಕೊಳ್ಳುವ ಮೈಲಮ್ಮ, ದಡಾರ, ಕಣ್ಣುಬೇನೆ ಸೇರಿದಂತೆ ಪ್ಲೇಗ್‌ನಂತಹ ಮಾರಕ ಸಾಂಕ್ರಾಮಿಕ ರೋಗಗಳು ದೂರವಾಗಲಿ ಹಾಗೂ ಸಮಾಜದ ಎಲ್ಲರಿಗೂ ಉತ್ತಮ ಆರೋಗ್ಯ, ಸುಖ–ಶಾಂತಿ ನೆಲೆಸಲಿ ಎಂದು ಸೀತ್ಲಾ ಮಾತೆಗೆ ವಿಶೇಷ ಪೂಜೆ ಸಲ್ಲಿಸಲಾಗುತ್ತದೆ. ಪ್ರತಿ ವರ್ಷ ಮಣ್ಣೆತ್ತಿನ ಅಮಾವಾಸ್ಯೆಯಂದು ಆಚರಿಸಲಾಗುವ ಈ ಹಬ್ಬದಲ್ಲಿ ಸಮಾಜದ ಗುರುಹಿರಿಯರು, ಮಹಿಳೆಯರು, ಯುವಕರು ಹಾಗೂ ಮಕ್ಕಳು ಭಾಗವಹಿಸಿ ಸಂಪ್ರದಾಯದಂತೆ ಪೂಜೆ ಸಲ್ಲಿಸಿ ದೇವಿಗೆ ನೈವೇದ್ಯ ಅರ್ಪಿಸಿದರು. ನಂತರ ಭಕ್ತರಿಗೆ ಪ್ರಸಾದ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಸಮಸ್ತ ಗೋರ್ ಬಂಜಾರ ಸಮಾಜದ ಬಂಧುಗಳು ಪರಸ್ಪರ "ಸೀತ್ಲಾ ಹಬ್ಬದ ಶುಭಾಶಯಗಳು" ವಿನಿಮಯ ಮಾಡಿಕೊಂಡು ಹಬ್ಬವನ್ನು ಸಂಭ್ರಮದಿಂದ ಆಚರಿಸಿದರು.

# ರೈತನ ಮೇಲೆ ಕರಡಿ ದಾಳಿ: ಕ್ರಮ ಕೈಗೊಳ್ಳಲು ಗ್ರಾಮಸ್ಥರ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜಿಲ್ಲೆಯ ಕೊಪ್ಪಳ ತಾಲೂಕಿನ ಹನುಮನಹಟ್ಟಿ ಗ್ರಾಮದ ರೈತನೊಬ್ಬರು ಎಂದಿನಂತೆ ತಮ್ಮ ಜಮೀನಿನಲ್ಲಿ ಕೃಷಿ ಕೆಲಸ ಮಾಡುತ್ತಿದ್ದ ವೇಳೆ ಅಂದರೆ ಬೆಳಗಿನ ಜಾವ 11 ಗಂಟೆಗೆ ಆಕಸ್ಮಿಕವಾಗಿ ಕರಡಿಯೊಂದು ದಾಳಿ ನಡೆಸಿದ ಘಟನೆ ನಡೆದಿದೆ.

ಕರಡಿ ದಾಳಿಯಲ್ಲಿ ಗಾಯಗೊಂಡ ರೈತನನ್ನು ಸ್ಥಳೀಯರು ತಕ್ಷಣ ರಕ್ಷಿಸಿ ಕೊಪ್ಪಳ ಜಿಲ್ಲಾ ಆಸ್ಪತ್ರೆಗೆ ದಾಖಲಿಸಿದ್ದಾರೆ. ವೈದ್ಯರು ಚಿಕಿತ್ಸೆ ನೀಡುತ್ತಿದ್ದು, ರೈತನ ಆರೋಗ್ಯದ ಬಗ್ಗೆ ನಿಗಾ ವಹಿಸಲಾಗಿದೆ.

ಇತ್ತೀಚಿನ ದಿನಗಳಲ್ಲಿ ರಾತ್ರಿ ಮಾತ್ರವಲ್ಲದೆ ಹಗಲಿನ ವೇಳೆಯಲ್ಲಿಯೂ ಕರಡಿಗಳು ಕೃಷಿ ಜಮೀನುಗಳಿಗೆ ನುಗ್ಗಿ ರೈತರ ಮೇಲೆ ದಾಳಿ ನಡೆಸುತ್ತಿರುವ ಘಟನೆಗಳು ಹೆಚ್ಚಾಗುತ್ತಿರುವುದರಿಂದ ರೈತರು ಭಯಭೀತರಾಗಿದ್ದಾರೆ. ಜಮೀನಿಗೆ ಕೆಲಸಕ್ಕೆ



ತೆರಳುವ ರೈತರು ಜೀವಭಯದ ನಡುವೆಯೇ ಕೃಷಿ ಚಟುವಟಿಕೆ ನಡೆಸುವಂತಾಗಿದೆ.

ಹನುಮನಹಟ್ಟಿ ಸುತ್ತಮುತ್ತಲಿನ ಗ್ರಾಮಗಳಾದ ಕೊಡದಾಳ, ಹಿರೇ ಸುಳ್ಳಿಕೇರಿ, ಚಿಕ್ಕ ಸುಳ್ಳಿಕೇರಿ, ಚಾಮಲಾಪುರ, ಗೋಸಲದೊಡ್ಡಿ, ಚಿಲ್ಕಮುಖಿ ಹಾಗೂ ಕುದರಿಮೋತಿ ಸೇರಿದಂತೆ ಇನ್ನು ಅನೇಕ ಹಲವು ಗ್ರಾಮಗಳಲ್ಲಿ ಕರಡಿಗಳ ಹಾವಳಿ ಹೆಚ್ಚಿದ್ದು, ಕೃಷಿ ಬೆಳೆಗಳನ್ನು ನಾಶಪಡಿಸುವುದರ ಜೊತೆಗೆ ಜನರ ಜೀವಕ್ಕೂ ಅಪಾಯ ಉಂಟುಮಾಡುತ್ತಿದೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ಈ ಕುರಿತು ಹಲವು ಬಾರಿ ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ದೂರು ಸಲ್ಲಿಸಿದ್ದರೂ ಶಾಶ್ವತ ಪರಿಹಾರ ಕಂಡುಬಂದಿಲ್ಲ ಎಂದು ಗ್ರಾಮಸ್ಥರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ರೈತರ ಜೀವ ಹಾಗೂ ಆಸ್ತಿಪಾಸ್ತಿಯನ್ನು ರಕ್ಷಿಸಲು ಅರಣ್ಯ ಇಲಾಖೆ ತಕ್ಷಣ ಅಗತ್ಯ ಕ್ರಮ ಕೈಗೊಂಡು ಕರಡಿಗಳ ಹಾವಳಿಗೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

# ಕರ್ತವ್ಯ ನಿಷ್ಠ ಪೊಲೀಸ್ ಅಧಿಕಾರಿಗಳಿಗೆ ಆರಕ್ಷಕ ರತ್ನ ಪ್ರಶಸ್ತಿ ಪ್ರದಾನ

• ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ (ರಿ), ತಾಲೂಕು ಘಟಕ ಹಗರಿಬೊಮ್ಮನಹಳ್ಳಿ, ವಿಜಯನಗರ ಜಿಲ್ಲೆ ವತಿಯಿಂದ ಪತ್ರಿಕಾ ದಿನಾಚರಣೆ–2026 ಅನ್ನು ಮಂಗಳವಾರ ಕೂಡ್ಲಿಗಿ ರಸ್ತೆಯಲ್ಲಿರುವ ಮಹರ್ಷಿ ವಾಲ್ಮೀಕಿ ಕಲ್ಯಾಣ ಮಂಟಪದಲ್ಲಿ ಅತ್ಯಂತ ಅರ್ಥಪೂರ್ಣವಾಗಿ ಹಾಗೂ ವಿಜೃಂಭಣೆಯಿಂದ ಆಚರಿಸಲಾಯಿತು.

ಕಾರ್ಯಕ್ರಮವು ಧಾರ್ಮಿಕ ಮತ್ತು ಸಾಂಸ್ಕೃತಿಕ ವಾತಾವರಣದಲ್ಲಿ ನಡೆಯಿತು. ಪುಣ್ಯಕ್ಷೇತ್ರ ನಂದಿಪುರದ ಪರಮಪೂಜ್ಯ ಡಾ. ಮಹೇಶ್ವರ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು. ತಮ್ಮ ಸಂದೇಶದಲ್ಲಿ ಪತ್ರಿಕಾರಂಗವು ಸಮಾಜದ ಕಣ್ಣು ಮತ್ತು ಕಿವಿಯಂತೆ ಕಾರ್ಯನಿರ್ವಹಿಸುತ್ತಿದ್ದು, ಸತ್ಯವನ್ನು ಸಮಾಜದ ಮುಂದೆ ತರುವಲ್ಲಿ ಪತ್ರಕರ್ತರ ಪಾತ್ರ ಅತ್ಯಂತ ಮಹತ್ತರವಾಗಿದೆ ಎಂದು ಹೇಳಿದರು. ಸಮಾಜದ ಒಳಿತಿಗಾಗಿ ಪತ್ರಕರ್ತರು ನಿರ್ಭೀತಿಯಿಂದ, ನಿಷ್ಪಕ್ಷಪಾತವಾಗಿ ಕಾರ್ಯನಿರ್ವಹಿಸಬೇಕು ಎಂದು ಆಶೀರ್ವದಿಸಿದರು.

ಹಗರಿಬೊಮ್ಮನಹಳ್ಳಿಯ ಪರಮಪೂಜ್ಯ ಹಾಲಸಿದ್ದೇಶ್ವರ ಸ್ವಾಮೀಜಿ ಸಹ ಕಾರ್ಯಕ್ರಮದಲ್ಲಿ ಭಾಗವಹಿಸಿ ಪತ್ರಕರ್ತರ ಸೇವೆಯನ್ನು ಶ್ಲಾಘಿಸಿದರು. ಸಮಾಜದಲ್ಲಿ ಜಾಗೃತಿ ಮೂಡಿಸುವ ಶಕ್ತಿ ಪತ್ರಕರ್ತರಿಗಿದ್ದು, ಪ್ರಾಮಾಣಿಕ ಪತ್ರಿಕೋದ್ಯಮದಿಂದ ಉತ್ತಮ ಸಮಾಜ ನಿರ್ಮಾಣ ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮವನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ (ರಿ), ಬೆಂಗಳೂರು ರಾಜ್ಯಾಧ್ಯಕ್ಷರಾದ ಬಂಗ್ಲೆ ಮಲ್ಲಿಕಾರ್ಜುನ ಉದ್ಘಾಟಿಸಿದರು. ಅಧ್ಯಕ್ಷತೆಯನ್ನು ತಾಲೂಕು ಅಧ್ಯಕ್ಷರಾದ ಜಿ. ಸೋಮನಾಥ ವಹಿಸಿದ್ದರು.




ಕಾರ್ಯಕ್ರಮದ ಪ್ರಾಸ್ತಾವಿಕವಾಗಿ ಮಾತನಾಡಿದ ಕಾರ್ಯಾಧ್ಯಕ್ಷ ಎಂ.ಶಿವಮೂರ್ತಿ, "ಒಬ್ಬ ಮಾರಾಟವಾಗದ ಪತ್ರಕರ್ತ ಸಾವಿರ ಭಯೋತ್ಪಾದಕರಿಗೆ ಸಮ" ಎಂಬ ಡಾ. ಬಿ.ಆರ್. ಅಂಬೇಡ್ಕರ್ ಅವರ ಚಿಂತನೆಯನ್ನು ಉಲ್ಲೇಖಿಸಿ, ಪತ್ರಕರ್ತರ ಕರ್ತವ್ಯ, ಜವಾಬ್ದಾರಿ ಮತ್ತು ಸಮಾಜದ ಮೇಲಿರುವ ಹೊಣೆಗಾರಿಕೆಯನ್ನು ವಿಸ್ತಾರವಾಗಿ ವಿವರಿಸಿದರು. ಸತ್ಯವನ್ನು ಧೈರ್ಯದಿಂದ ಹೊರತರುವುದು ಪತ್ರಕರ್ತನ ಧರ್ಮವಾಗಿದ್ದು, ಸಮಾಜದ ಹಿತಾಸಕ್ತಿಯೇ ಪತ್ರಿಕೋದ್ಯಮದ ಮೂಲ ಉದ್ದೇಶವಾಗಿರಬೇಕು ಎಂದು ಹೇಳಿದರು.

ನಂತರ ಮಾತನಾಡಿದ ರಾಜ್ಯಾಧ್ಯಕ್ಷ ಬಂಗ್ಲೆ ಮಲ್ಲಿಕಾರ್ಜುನ, ಇಂದಿನ ದಿನಗಳಲ್ಲಿ ಪತ್ರಿಕೋದ್ಯಮ ಎದುರಿಸುತ್ತಿರುವ ಸವಾಲುಗಳ ಕುರಿತು ಚರ್ಚಿಸಿದರು. ಪತ್ರಕರ್ತರು ಯಾವುದೇ ಒತ್ತಡ, ಪ್ರಭಾವ ಅಥವಾ ಆಮಿಷಗಳಿಗೆ ಒಳಗಾಗದೆ ವಸ್ತುನಿಷ್ಠ ವರದಿಗಾರಿಕೆಗೆ ಆದ್ಯತೆ ನೀಡಬೇಕು ಎಂದು ಕರೆ ನೀಡಿದರು. "ಗಾಳಿಯಲ್ಲಿ ಗುಂಡು ಹೊಡೆದಂತೆ ಆಧಾರವಿಲ್ಲದ ಸುದ್ದಿಗಳನ್ನು ಪ್ರಕಟಿಸಬಾರದು. ನಿಖರ ಮಾಹಿತಿ, ಸತ್ಯಾಂಶ ಮತ್ತು ಸಮಾಜದ ಹಿತವನ್ನು ಗಮನದಲ್ಲಿಟ್ಟುಕೊಂಡು ವರದಿಗಳನ್ನು ಪ್ರಕಟಿಸುವುದು ಪ್ರತಿಯೊಬ್ಬ ಪತ್ರಕರ್ತನ ಜವಾಬ್ದಾರಿಯಾಗಿದೆ" ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಹಲವು ಗಣ್ಯ ಸಾಧಕರನ್ನು ಸನ್ಮಾನಿಸಿ ಪ್ರಶಸ್ತಿ ಪ್ರದಾನ ಮಾಡಲಾಯಿತು. ಅದರಲ್ಲೂ ಸಾರ್ವಜನಿಕ ಸೇವೆಯಲ್ಲಿ ಕರ್ತವ್ಯನಿಷ್ಠೆಯಿಂದ ಕಾರ್ಯನಿರ್ವಹಿಸಿರುವ ಪೊಲೀಸ್ ಅಧಿಕಾರಿಗಳಿಗೆ "ಅರಕ್ಷಕ ರತ್ನ" ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಈ ಪ್ರತಿಷ್ಠಿತ ಪ್ರಶಸ್ತಿಯನ್ನು ಕೂಡ್ಲಿಗಿ ಪೊಲೀಸ್ ಇಲಾಖೆಯ ಕೊಟ್ರೇಶ್, ಹಗರಿಬೊಮ್ಮನಹಳ್ಳಿ ಪೊಲೀಸ್ ಇಲಾಖೆಯ ಮಲ್ಲೇಶ್ ನಾಯ್ಕ ಹಾಗೂ ಹಗರಿಬೊಮ್ಮನಹಳ್ಳಿ ಪೊಲೀಸ್ ಇಲಾಖೆಯ ದಶರಥ್ ಅವರಿಗೆ ಪ್ರದಾನಿಸಲಾಯಿತು.

ಇವರು ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ, ಸಾರ್ವಜನಿಕರ ಸುರಕ್ಷತೆಗೆ ಆದ್ಯತೆ ನೀಡುವಲ್ಲಿ, ಅಪರಾಧ ತಡೆಗಟ್ಟುವಲ್ಲಿ ಹಾಗೂ ಜನಸ್ನೇಹಿ ಪೊಲೀಸ್ ಸೇವೆಯನ್ನು ಒದಗಿಸುವಲ್ಲಿ ಸಲ್ಲಿಸಿರುವ ಸೇವೆಯನ್ನು ಕಾರ್ಯಕ್ರಮದಲ್ಲಿ ವಿಶೇಷವಾಗಿ ಸ್ಮರಿಸಲಾಯಿತು. ಸಮಾಜದಲ್ಲಿ ಶಾಂತಿ, ಸುವ್ಯವಸ್ಥೆ ಮತ್ತು ನಾಗರಿಕರ ಭದ್ರತೆಯನ್ನು ಕಾಪಾಡುವಲ್ಲಿ ಇವರ ಕರ್ತವ್ಯನಿಷ್ಠೆ ಮಾದರಿಯಾಗಿದೆ ಎಂದು ಗಣ್ಯರು ಪ್ರಶಂಸಿಸಿದರು.

ಕಾರ್ಯಕ್ರಮದಲ್ಲಿ ಪತ್ರಕರ್ತರು, ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು, ಪೊಲೀಸ್ ಅಧಿಕಾರಿಗಳು, ಸಾರ್ವಜನಿಕರು ಹಾಗೂ ವಿವಿಧ ಕ್ಷೇತ್ರಗಳ ಗಣ್ಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಯಶಸ್ಸಿಗೆ ಸಾಕ್ಷಿಯಾದರು. ಪತ್ರಿಕೋದ್ಯಮದ ಮೌಲ್ಯಗಳು, ಸಮಾಜದ ಮೇಲಿನ ಜವಾಬ್ದಾರಿ ಮತ್ತು ಪ್ರಾಮಾಣಿಕ ಸೇವೆಯ ಮಹತ್ವವನ್ನು ಸಾರಿದ ಈ ಪತ್ರಿಕಾ ದಿನಾಚರಣೆ ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು.

## ವಿದ್ಯಾರ್ಥಿಗಳಿಗೆ ಸಂಸ್ಕಾರ ಜ್ಞಾನ ಸಂಪತ್ತು ಬರಿಸಲು ಗುರುಗಳಿಂದ ಸಾಧ್ಯ



**ಯಲಬುರ್ಗಾ:** ವಿಧ್ಯಾರ್ಥಿಗಳಿಗೆ ಸಂಸ್ಕೃತಿ ಸಂಸ್ಕಾರ,ಜ್ಞಾನ ಸಂಪತ್ತು ಬರಲು ಗುರುಗಳಿಂದ ಮಾತ್ರ ಸಾಧ್ಯ ಎಂದು ಕುಕನೂರಿನ ನಿವೃತ್ತ ಉಪನ್ಯಾಸಕ, ಆಧ್ಯಾತ್ಮಿಕ ಚಿಂತಕ ಆರ್. ಪಿ.ರಾಜೂರ ಅವರು ಪಟ್ಟಣದ ಖಾಸಗಿ ಭವನದಲ್ಲಿ ಜು.19 ರಂದು ಜರುಗಿದ ಸೇವಾ ನಿವೃತ್ತಿ ಹೊಂದಿರುವ ಗೇದಗೇರಿ ಸರಕಾರಿ ಪ್ರೌಢಶಾಲೆಯ ಸಹ ಶಿಕ್ಷಕರಾಗಿರವ ಗಾಳೆಪ್ಪ ಬಂಡಿಹಾಳ ಇವರು 36 ವರ್ಷಗಳ ಕಾಲ ಸುದೀರ್ಘವಾಗಿ ಸೇವೆ ಸಲ್ಲಿಸಿ ವಯೋನಿವೃತ್ತಿ ಹೊಂದಿರುವದಕ್ಕಾಗಿ ಕೃತಜ್ಞತಾ ಸಮಾರಂಭದಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಗಾಳೆಪ್ಪ ಇವರು ಪ್ರತಿಷ್ಠಿತ ಆಸ್ತಿ ಅಂತಸ್ತು, ಅಗರ್ಭ ಶ್ರೀಮಂತರ ಅರಮನೆಯ ಮನೆತನದಲ್ಲಿ ಹುಟ್ಟಿ ಬೆಳೆದಿರುವ ವ್ಯಕ್ತಿಯಲ್ಲ, ಸಮಾಜದ ತಳಮಟ್ಟದ ಪಂಕ್ತಿಯಲ್ಲಿ, ಬಡತನದಲ್ಲಿ ಹುಟ್ಟಿ ಬೆಳೆದು, ಕಷ್ಟ ಸುಖಗಳನ್ನು ಅನುಭವಿಸಿ ಬಹಳಷ್ಟು ಪೆಟ್ಟುಗಳನ್ನು ಅನುಭವಿಸಿದ ವ್ಯಕ್ತಿ ಇಂದು ಎಲ್ಲರ ಸಮ್ಮುಖದಲ್ಲಿ ಮಿಂಚುವದಕ್ಕೆ ಕಾರಣ ಎನೆಂದರೆ ಆ ಶಿಕ್ಷಕರಲ್ಲಿರುವ ಸಮಯ ಪ್ರಜ್ಞೆ, ಉತ್ತಮ ಗುಣಗಳಿಂದ ಮಾತ್ರ ಸಾಧ್ಯ, ಎಲ್ಲಾ ದಾನಕ್ಕಿಂತ ಶ್ರೇಷ್ಠವಾದ ಅಕ್ಷರ ಜ್ಞಾನ ಮಹತ್ವವಾದದು ಎಂದರು. ಇದಕ್ಕೂ ಮೊದಲು ನಿವೃತ್ತ ಶಿಕ್ಷಕ ಗಾಳೆಪ್ಪ ಹಾಗು ಅವರ ಧರ್ಮಪತ್ನಿ ಬಸಮ್ಮ ಇವರಿಗೆ ವಿವಿಧ ಹೂ ಗಳ ಸುರಿಮಳೆಯಂತೆ ಅವರ ಮೇಲೆ ಅರ್ಪಿಸಿ ವೇದಿಕೆ ಮೇಲೆ ಕರೆತಂದು ಪ್ರೀತಿಯಿಂದ ಜಿಲ್ಲೆಯ ಸುತ್ತಮುತ್ತಲಿನ ಅಪಾರ ಶಿಷ್ಯ ಬಳಗ, ಗುರು ಬಳಗ, ಹಾಗು ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ರಾಜಕೀಯ ಮುಖಂಡರು,ನಿವೃತ್ತ ಶಿಕ್ಷಕರು,ರೈತರು, ವರ್ತಕರು,ಪತ್ರಕರ್ತರು,ಸಾಹಿತಿಗಳು ಸನ್ಮಾನಿಸಿದರು.ಈ ವೇಳೆ ಗಾಳೆಪ್ಪ ಶಿಕ್ಷಕ ಇವರ ಕೈಯಲ್ಲಿ ಕಲಿತಿರುವ ಶಿಷ್ಯ ಬಸವರಾಜ ಹೊಕ್ರಾಣಿ ಮಾತನಾಡಿ ಈ ಗುರುಗಳಿಂದ ನಮಗೆ ಸಹನೆ, ತಾಳ್ಮೆ, ಉತ್ತಮ ಆಚಾರ ವಿಚಾರ ಅರಿಯಲು ಸಾದ್ಯವಾಗಿತು ಇವರು ವಿಧ್ಯಾರ್ಥಿಗಳನ್ನು ತಿದ್ದುವ ಕೆಲಸ ಮಾಡಿದ್ದಾರೆ, ನಮ್ಮ ಊರಿನ ಶಾಲೆ ಅಭಿವೃದ್ಧಿಯಾಗಬೇಕಾದರೆ ಈ ಗುರುಗಳು ನಮ್ಮ ಗ್ರಾಮಕ್ಕೆ ಬರಬೇಕು ಎಂದು ವೇದಿಕೆ ಮೇಲೆ ದೀರ್ಘದಂಡ ನಮಸ್ಕಾರ ಸಲ್ಲಿಸಿದರು.ವೇದಿಕೆ ಮೇಲೆ ಇರುವ ಗುರುಗಳು ಇವರ ಕಾರ್ಯ ವೈಖರಿಯ ಬಗ್ಗೆ ಮೇಚ್ಚುಗೆ ವ್ಯಕ್ತಪಡಿಸಿದರು.

## ಶೇ.65.93 ರಷ್ಟು ಗಣತಿ ನಮೂನೆ ಡಿಜಿಟೈಸ್ ಕಾರ್ಯ ಪೂರ್ಣ

**ಕಲಬುರಗಿ:** ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ 43-ಗುಲಬರ್ಗಾ ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ ಭರದಿಂದ ಸಾಗಿದ್ದು, ಕ್ಷೇತ್ರದಾದ್ಯಂತ ಮಂಗಳವಾರ ಅಂತ್ಯಕ್ಕೆ ಒಟ್ಟು 2,74,878 ಮತದಾರರಿಗೆ ನೀಡಲಾದ ಗಣತಿ ನಮೂನೆಗಳ ಪೈಕಿ 1,81,220 (65.93%) ಜನರ ನಮೂನೆಗಳನ್ನು ಡಿಜಿಟೈಸ್ ಮಾಡಲಾಗಿದೆ ಎಂದು ಕಲಬುರಗಿ ಉಪ ವಿಭಾಗದ ಸಹಾಯಕ ಆಯುಕ್ತರು ಮತ್ತು ಕ್ಷೇತ್ರದ ಮತದಾರರ ನೋಂದಣಾಧಿಕಾರಿ ಸಾಹಿತ್ಯ ಆಲದಕಟ್ಟಿ ತಿಳಿಸಿದ್ದಾರೆ.

ಇನ್ನು 1099 ಮತದಾರರು ಸ್ವಯಂ ಪ್ರೇರಿತವಾಗಿ ಆನ್ ಲೈನ್ ಮೂಲಕ ಗಣತಿ ನಮೂನೆ ಸಲ್ಲಿಸಿದ್ದಾರೆ. ಬಿ.ಎಲ್.ಓ. ಗಳು ಮನೆ-ಮನೆ ಭೇಟಿ ಕೊಟ್ಟಾಗ ಇಲ್ಲಿಯವರೆಗೆ 317 ಜನ ಮತದಾರರು ಮನೆಯಲ್ಲಿ ಇಲ್ಲದಿರುವುದು(ಗೈರು), 5,525 ಮತದಾರರು ಶಾಶ್ವತವಾಗಿ ಸ್ಥಳಾಂತರಗೊಂಡಿರುವುದು, 2,939 ಜನ ಮತದಾರರು ನಿಧನ ಹೊಂದಿರುವುದು ಹಾಗೂ 794 ಜನ ಮತದಾರರು ಈಗಾಗಲೆ ನೋಂದಣಿಯಾಗಿರುವ ಬಗ್ಗೆ ವರದಿಯಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಾನುವಾರುಗಳಿಗೆ ಗಂಟಲು ಬೇನೆ ಲಸಿಕಾ ಕಾರ್ಯಕ್ರಮ, ಆರೋಗ್ಯ ತಪಾಸಣಾ ಶಿಬಿರ




**ಗಂಗಾವತಿ:** ಕೃಷಿ ಮಹಾವಿದ್ಯಾಲಯ, ಗಂಗಾವತಿ ವತಿಯಿಂದ ನಡೆಯುತ್ತಿರುವ ಗ್ರಾಮೀಣ ಕೃಷಿ ಕಾರ್ಯಾನುಭವ ಶಿಬಿರದ ಅಂಗವಾಗಿ ಜುಲೈ 20ರಂದು ಕೆರೇಹಳ್ಳಿ ಗ್ರಾಮದಲ್ಲಿ ಜಾನುವಾರುಗಳಿಗೆ ಗಂಟಲು ಬೇನೆ ಲಸಿಕಾ ಕಾರ್ಯಕ್ರಮ ಹಾಗೂ ಆರೋಗ್ಯ ತಪಾಸಣಾ ಶಿಬಿರ ಯಶಸ್ವಿಯಾಗಿ ನಡೆಯಿತು.

ಈ ಕಾರ್ಯಕ್ರಮವನ್ನು ಪಶುಪಾಲನ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ಕೊಪ್ಪಳ ತಾಲ್ಲೂಕು ಹಾಗೂ ಹಿಟ್ನಾಳ ಪಶು ಚಿಕಿತ್ಸಾಲಯದ ಸಿಬ್ಬಂದಿಗಳಾದ ಡಾ. ವಿನಯ್ ಅಂಗಡಿ, ಶಂಕ್ರಪ್ಪ ದಳವಾಯಿ, ರಾಜೇಶ್ ಹಾಗೂ ಲೋಕೇಶ್ ಡಿ. ಅವರ ಸಹಯೋಗದಲ್ಲಿ ಆಯೋಜಿಸಲಾಯಿತು.

ಕೃಷಿ ಮಹಾವಿದ್ಯಾಲಯ, ಗಂಗಾವತಿ ವತಿಯಿಂದ ಡಾ. ಎಂ.ವಿ. ರವಿ (RAWE ಆಯೋಜಕರು), ಡಾ. ವಾಸುದೇವ ನಾಯಕ್ (ಸಹ-ಆಯೋಜಕರು), ಡಾ. ಮಹಾಂತೇಶ್ ಎಂ.ಟಿ. (ಸಹಾಯಕ ಪ್ರಾಧ್ಯಾಪಕರು), ಡಾ. ಸಾಹೇಬ್ ಗೌಡ (ಸಹಾಯಕ ಪ್ರಾಧ್ಯಾಪಕರು) ಹಾಗೂ RAWE ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಯಶಸ್ವಿಗೊಳಿಸಿದರು.

ಶಿಬಿರದಲ್ಲಿ ಜಾನುವಾರುಗಳಿಗೆ ಗಂಟಲು ಬೇನೆ ವಿರುದ್ಧ ಲಸಿಕೆ ನೀಡುವುದರ ಜೊತೆಗೆ ಆರೋಗ್ಯ ತಪಾಸಣೆ ನಡೆಸಲಾಯಿತು. ಅಲ್ಲದೆ ಪಶುಗಳ ಆರೈಕೆ, ರೋಗಗಳ ತಡೆಗಟ್ಟುವಿಕೆ ಹಾಗೂ ವೈಜ್ಞಾನಿಕ ಪಶುಪಾಲನಾ ಪದ್ಧತಿಗಳ ಕುರಿತು ರೈತರಿಗೆ ಅಗತ್ಯ ಮಾಹಿತಿ ಮತ್ತು ಸಲಹೆಗಳನ್ನು ನೀಡಿ ಜಾಗೃತಿ ಮೂಡಿಸಲಾಯಿತು.

ಈ ಕಾರ್ಯಕ್ರಮದಿಂದ ರೈತರು ಹಾಗೂ ಪಶುಪಾಲಕರು ಹೆಚ್ಚಿನ ಸಂಖ್ಯೆಯಲ್ಲಿ ಪ್ರಯೋಜನ ಪಡೆದುಕೊಂಡರು.

# ಬಸವಸಾಗರಕ್ಕೆ ಸಚಿವ ರಾಮಲಿಂಗಾರೆಡ್ಡಿ ಭೇಟಿ, ಪರಿಶೀಲನೆ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಕೃಷ್ಣಾ ಅಚ್ಚು ಕಟ್ಟು ಭಾಗದ ರೈತರ ಜೀವನಾಡಿ ಬಸವಸಾಗರ ಜಲಾಶಯಕ್ಕೆ ಮಂಗಳವಾರ ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ನಂತರ ಸುದ್ದಿಗೋಷ್ಟಿ ಉದ್ದೇಶಿಸಿ ಮಾತನಾಡಿದ ಸಚಿವರು, ಆಲಮಟ್ಟಿ ಶಾಸ್ತ್ರೀ ಹಾಗೂ ನಾರಾಯಣಪುರ ಬಸವಸಾಗರ ಅವಳಿ ಜಲಾಶಯಗಳಲ್ಲಿ ಕೃಷಿಗಾಗಿ ಕಾಲುವೆಗಳಿಗೆ ನೀರು ಬಿಡಲು ಕೇವಲ 10 ಟಿಎಂಸಿಯಷ್ಟು ಲಭ್ಯವಿದೆ ಒಂದೊಮ್ಮೆ ಕೃಷ್ಣಾ ಹಾಗೂ ಅದರ ಉಪನದಿಗಳ ಜಲಾನಯನ ಪ್ರದೇಶದಲ್ಲಿ ಉತ್ತಮ ಮಳೆಯಾಗಿ ಅವಳಿ ಜಲಾಶಯಗಳು ಸಂಪೂರ್ಣ ಭರ್ತಿಯಾದರೆ ಮಾತ್ರ ಕೃಷ್ಣಾ ಅಚ್ಚುಕಟ್ಟು ಪ್ರದೇಶದ ರೈತರ ಜಮೀನುಗಳಿಗೆ ಕಾಲುವೆ ನೀರು ಹರಿಸಲು ಯೋಚಿಸಲಾಗುವದು ಎಂದು ಸಚಿವರು ಹೇಳಿದರು.

ಅವಳಿ ಜಲಾಶಯಗಳಲ್ಲಿನ ಡೆಡ್ ಸ್ಟೋರೇಜ್ ಹೊರತುಪಡಿಸಿ 86 ಟಿಎಂಸಿ ನೀರಿನ ಸಂಗ್ರಹ ಇದೆ ಇದರಲ್ಲಿ ಕುಡಿಯಲು, ಆರ್ಟಿಪಿಸಿ ಸೇರಿ ಇತರೆ ಉದ್ಯಮಿಗಳಿಗೆ, ಬ್ರಿಜ್ ಕಮ್ ಬ್ಯಾರೆಜುಗಳಿಗೆ, ಕೆರೆ ತುಂಬವದು, ಬಾಷ್ಪೀಕರಣ, ನದಿ ಪಾತ್ರ-ಕ್ಕೆ ನೀರು ಹರಿಸುವದು ಸೇರಿ ಇತರೆ ಬೇಡಿಕೆ ಅನುಗುಣವಾಗಿ ವಾರ್ಷಿಕವಾಗಿ 76 ಟಿಎಂಸಿ ಯಷ್ಟು ಬಳಕೆ ಮಾಡಿಕೊಳ್ಳಬೇಕಾಗುತ್ತದೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು ಸದ್ಯದ ಪರಿಸ್ಥಿತಿಯಲ್ಲಿ ರೈತರಿಗೆ ಕಾಲುವೆ ನೀರು ಕೊಡಲು ಆಗುವದಿಲ್ಲಾ ಒಂದೊಮ್ಮೆ ಆಗಷ್ಟವೇಳೆಗೆ ಉತ್ತಮ ಮಳೆಯಾಗುವ ನಿರೀಕ್ಷೆ ಇದೆ ಸದ್ಯ ಆಲಮಟ್ಟಿ ಶಾಸ್ತ್ರೀ ಜಲಾಶಯಕ್ಕೆ ಅಂದಾಜು 40 ಸಾವಿರ ಕ್ಯೂಸೆಕ್ ಒಳಹರಿವು ಇದೆ ನಿತ್ಯ ಜಲಾಶಯದಲ್ಲಿ 3 ರಿಂದ 4 ಟಿಎಂಸಿಯಷ್ಟು ನೀರು ಸಂಗ್ರವಾಗುತ್ತಿದೆ.

ಒಂದೊಮ್ಮೆ ಮಹಾರಾಷ್ಟದ ಕೃಷ್ಣಾ ಜಲಾನಯನ ಪ್ರದೇಶದಲ್ಲಿ ವ್ಯಾಪಕ ಮಳೆಯಾದರೆ ನಿತ್ಯ 10 ಟಿಎಂಸಿಯಷ್ಟು ನೀರಿನ ಸಂಗ್ರಹ ಹೆಚ್ಚಾದರೆ ಅವಳಿ ಜಲಾಶಯಗಳು ನಿರೀಕ್ಷೆಯಂತೆ ಭರ್ತಿಯಾದರೆ ಕಾಲುವೆ ಜಾಲಗಳಿಗೆ ನೀರು ಹರಿಸಲು ಯೋಚಿಸಬಹುದಾಗಿದೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು ಈಗಾಗಲೇ ಸಿಎಂ ಡಿ.ಕೆ ಶಿವಕುಮಾರ್ ಅವರು ಜಲಾಶಯ ನೀರು ನಂಬಿ ವ್ಯವಸಾಯ ಮಾಡದಂತೆ ರೈತರಲ್ಲಿ ಮನವಿ ಮಾಡಿದ್ದಾರೆ ಜೊತೆಗೆ ದೇಶದ 12 ದೊಡ್ಡ ರಾಜ್ಯಗಳಿಗೆ ಬರಗಾಲ ಆವರಿಸಿದೆ ರಾಜ್ಯದ ಅಂದಾಜು 175 ಬರಗಾಲ ಪೀಡಿತ ತಾಲ್ಲೂಕುಗಳಾಗಿವೆ ಎಂದು ವಿವರಿಸಿದ ಸಚಿವರು ಬಸವಸಾಗರ ಜಲಾಶಯದ ಮುಂಭಾಗದಲ್ಲಿ ಆಲಮಟ್ಟಿ ಮಾದರಿಯ ಸುಂದರ ಉದ್ಯಾವನ ನಿರ್ಮಿಸಲು ಕೇಂದ್ರ ಸರ್ಕಾರದ ಡ್ರಿಪ್ ಯೋಜನೆ ಅಡಿಯಲ್ಲಿ ಮಾಡಲು ಪ್ರಸ್ತಾವನೆ ಸಲ್ಲಿಸಲಾಗಿದೆ. ಶೀಘ್ರವಾಗಿ ಉದ್ಯಾನ ನಿರ್ಮಾಣಕ್ಕೆ ಮುಂದಾಗುವದಾಗಿ ಹೇಳಿದರು.

ಬೂದಿಹಾಳ ಪೀರಾಪುರ ಹಂತ 2 ಯೋಜನೆ ಅಡಿಯಲ್ಲಿ ಹೊಲಗಾಲುವೆಗಳು ನಿರ್ಮಿಸುವ ಮೂಲಕ ನಿಗದಿ ಪಡಿಸಿದ ಜಮೀನುಗಳಿಗೆ ನೀರಿನ ಸೌಕರ್ಯ ಕಲ್ಪಿಸಲಾಗುತ್ತದೆ ಎಂದು ಹೇಳಿದ ಸಚಿವರು ಕೆಬಿಜೆಎನ್ಎಲ್ ಅಡಿಯಲ್ಲಿ ಖಾಲಿ ಇರುವ ಪ್ರದೇಶದಲ್ಲಿ ಕೆರೆಗಳನ್ನು ನಿರ್ಮಾಣ ಬಗ್ಗೆ ಪರಿಶೀಲನೆ ಮಾಡಲಾಗುತ್ತದೆ ಮತ್ತು ವಿಶೇಷ ಯೋಜನೆ ಅಡಿಯಲ್ಲಿ ಸೌರ ವಿದ್ಯುತ್ ತಯಾರಿಕೆಗೂ ಯೋಜಿಸಲಾಗುತ್ತಿದೆ ಮತ್ತು 12 ವರ್ಷಗಳಿಂದ ನಿಂತು ಹೋಗಿರುವ ನಂದವಾಡಿ ಏತ ನೀರಾವರಿ ಯೋಜನೆ ಜಾರಿಗೆ ಕ್ರಮ ವಹಿಸುವದಾಗಿ ಸುದ್ದಿಗಾರರ ಪ್ರಶ್ನೇಯೊಂದಕ್ಕೆ ಸಚಿವರು ಉತ್ತರಿಸಿದರು.

ಇದೇ ಸಂದರ್ಭದಲ್ಲಿ ಜಲಾಶಯದ ವೀಕ್ಷಣೆ ಗೇಟ್ಗಳ ಕಾರ್ಯಚರಣೆ, ನಿರ್ವಹಣೆ ಮತ್ತು ಎಲ್ ಎಲ್ ಬಿಸಿ ಕಾಲುವೆಗಳಿಗೆ ಅಳವಡಿಸಿರುವ ಸ್ಕಾಡ್ ಗೇಟ್ಸ್ ಕಾರ್ಯಚರಣೆ ನಿರ್ವಹಣೆ ಹಾಗೂ ನಿಯಂತ್ರಣ ಕೇಂದ್ರಕ್ಕೆ ಭೇಟಿ ನೀಡಿ ಗುತ್ತಿಗೆ ವಹಿಸಿಕೊಂಡಿರುವ ಮೆಕಾಟ್ರಾನಿಕ್ಸ್ ಕಂಪನಿಯ ಇಂಜನೀಯರಿಗಳಿಂದ ವಿಡಿಯೋ ವೀಕ್ಷಣೆ ಮಾಡುವ ಮೂಲಕ ಮಾಹಿತಿ ಪಡೆದುಕೊಂಡರು.

ಜಲಾಶಯದ ಹಿನ್ನೀರು ವ್ಯಾಪ್ತಿಯಲ್ಲಿ ಪ್ರಗತಿ ಹಂತದದಲ್ಲಿರುವ ಬೂದಿಹಾಳ ಪೀರಾಪುರ ಎರಡನೇ ಹಂತದ ಕಾಮಗಾರಿ ವೀಕ್ಷಣೆ ಮಾಡಿ ಕಾರ್ಯವಿಧಾನದ ಕುರಿತು ಪರಿವೀಕ್ಷಣೆ ಮಾಡಿ ಮಾಹಿತಿ ಪಡೆದರು.

ಮುದ್ದೇಬಿಹಾಳ ಶಾಸಕ ಸಿ.ಎಸ್ ಅಪ್ಪಾಜಿ ನಾಡಗೌಡ, ಸುರಪುರ ಶಾಸಕರಾದ ರಾಜಾ ವೇಣುಗೋಪಾಲ ನಾಯಕ, ಕೆಬಿಜೆಎನ್ಎಲ್ ಎಂ.ಡಿ ಕೃಷ್ಣಮೂರ್ತಿ ಕುಲಕರ್ಣಿ, ಡಿಸಿ ರಾಹುಲ್ ತುಕಾರಾಮ್ ಪಾಂಡ್ವೆ, ಎ.ಸ್ಪಿ ಪೃಥ್ವಿಕ್ ಶಂಕರ, ಸಿಇ ಜಿ.ಜಿ ಪವಾರ, ಎಸ್ ಇ ರಮೇಶ ರಾಠೋಡ, ರಾಜಾ ಕುಮಾರನಾಯಕ, ರಾಜಾ ಸುಶಾಂತನಾಯಕ, ಮುಖಂಡರಾದ ರಾಜಶೇಖರಗೌಡ ಪಾಟೀಲ್, ಯಂಕೂಬ ಸಾಹುಕಾರ, ರವಿಚಂದ್ರ ಸಾಹುಕಾರ, ನಿಂಗಣ್ಣ ಬಾಚಿಮಟ್ಟಿ, ಗುಂಡಪ್ಪ ಸೊಲ್ಲಾಪುರ, ಶಾಂತಪ್ಪ ಮೇಸ್ತಕ್, ಅಮರೇಶ ಕೋಳುರ, ತಿಮ್ಮಣ್ಣ, ವಿರೇಶ ಸೇರಿದಂತೆ ನಾರಾಯಣಪುರ ಸುತ್ತಮುತ್ತಲಿನ ಗ್ರಾಮಗಳ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತೆಯರು ಇದ್ದರು.

# ನೀಟ್ ಬ್ಯಾನ್ ಹಾಗೂ ಸೋನಂ ವಾಂಗ್ಚುಕ್ ಬಂಧನ ಖಂಡಿಸಿ ಪ್ರತಿಭಟನೆ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ




ಜಂತರ್ ಮಂತರ್‌ನಲ್ಲಿ ಹೋರಾಟ ನಡೆಸುತ್ತಿದ್ದ ಸೋನಂ ವಾಂಗ್ಚುಕ್ ಅವರನ್ನು ಬಲವಂತವಾಗಿ ಬಂಧಿಸಿರುವುದನ್ನು ಖಂಡಿಸಿ ಹಾಗೂ ಎನ್‌ಟಿಎ (NTA)ಸಂಸ್ಥೆಯನ್ನು ರದ್ದುಪಡಿಸಿ, ನೀಟ್ (NEET) ಪರೀಕ್ಷೆಯನ್ನು ಬ್ಯಾನ್ ಮಾಡುವಂತೆ ಒತ್ತಾಯಿಸಿ ಭಾರತ ವಿದ್ಯಾರ್ಥಿ ಫೆಡರೇಷನ್ (ಎಸ್‌ಎಫ್‌ಐ) ಗಂಗಾವತಿ ತಾಲೂಕು ಸಮಿತಿ ವತಿಯಿಂದ ಮಂಗಳವಾರ ಶ್ರೀ ಕೃಷ್ಣದೇವರಾಯ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು. ಬಳಿಕ ತಹಸೀಲ್ದಾರರ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಲಾಯಿತು.

ಪ್ರತಿಭಟನೆಯಲ್ಲಿ ಮಾತನಾಡಿದ ಎಸ್‌ಎಫ್‌ಐ ಜಿಲ್ಲಾ ಕಾರ್ಯದರ್ಶಿ ಬಾಲಾಜಿ ಚಳ್ಳಾರಿ, ವೈದ್ಯಕೀಯ ಕೋರ್ಸ್‌ಗಳ ಪ್ರವೇಶಕ್ಕಾಗಿ ನಡೆಸಲಾದ NEET UG-2026 ಪರೀಕ್ಷೆಯಲ್ಲಿ ಪ್ರಶ್ನೆಪತ್ರಿಕೆ ಸೋರಿಕೆಯಾಗಿರುವ ಹಿನ್ನೆಲೆಯಲ್ಲಿ ಮರುಪರೀಕ್ಷೆ ನಡೆಸಬೇಕಾಯಿತು. ಇದ-ರಿಂದ ದೇಶಾದ್ಯಂತ ವಿದ್ಯಾರ್ಥಿಗಳು ಮಾನಸಿಕ ಒತ್ತಡಕ್ಕೆ ಒಳಗಾಗಿದ್ದು, ಹಲವರು ಆತ್ಮಹತ್ಯೆ ಮಾಡಿಕೊಂಡಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ಆರೋಪಿಸಿದರು.

ಪರೀಕ್ಷೆಗಳ ನಿರ್ವಹಣೆಯಲ್ಲಿ ಎನ್‌ಟಿಎ ನಿರಂತರವಾಗಿ ವಿಫಲವಾಗುತ್ತಿದ್ದು, ಪ್ರಶ್ನೆಪತ್ರಿಕೆ ಸೋರಿಕೆ ಮತ್ತು ಮರುಪರೀಕ್ಷೆಗಳಂತಹ ಘಟನೆಗಳು ವಿದ್ಯಾರ್ಥಿಗಳ ಭವಿಷ್ಯದ ಮೇಲೆ ದುಷ್ಪರಿಣಾಮ ಬೀರುತ್ತಿವೆ. ಆದ್ದರಿಂದ ಎನ್‌ಟಿಎ ಸಂಸ್ಥೆಯನ್ನು ರದ್ದುಪಡಿಸಿ, ಪರೀಕ್ಷಾ ವ್ಯವಸ್ಥೆಯಲ್ಲಿ ಸಮಗ್ರ ಸುಧಾರಣೆ ತರಬೇಕು ಎಂದು ಒತ್ತಾಯಿಸಿದರು. ತಾಲೂಕು ಅಧ್ಯಕ್ಷ ನಾಗರಾಜ್ ಯು ಮಾತನಾಡಿ, ಶಾಂತಿಯುತ ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದ ಸೋನಂ ವಾಂಗ್ಚುಕ್ ಹಾಗೂ ಪ್ರತಿಭಟನಾಕಾರರ ವಿರುದ್ಧ ಪೊಲೀಸ್ ಕ್ರಮ ಕೈಗೊಂಡಿರುವುದು ಪ್ರಜಾಸತ್ತಾತ್ಮಕ ಹಕ್ಕುಗಳ ಮೇಲಿನ ದಾಳಿಯಾಗಿದೆ ಎಂದು ಆರೋಪಿಸಿದರು. ವಿದ್ಯಾರ್ಥಿಗಳ ಧ್ವನಿಯನ್ನು ಹತ್ತಿಕ್ಕುವ ಬದಲು ಕೇಂದ್ರ ಸರ್ಕಾರ ಸಂವಾದದ ಮೂಲಕ ಸಮಸ್ಯೆಗಳನ್ನು ಪರಿಹರಿಸಬೇಕು ಎಂದು ಆಗ್ರಹಿಸಿದರು.

ಜುಲೈ 21ರಂದು ನಡೆದ "ಪಾರ್ಲಿಮೆಂಟ್ ಚಲೋ" ಪ್ರತಿಭಟನೆಯಲ್ಲಿ ವಿದ್ಯಾರ್ಥಿಗಳ ಮೇಲೆ ಲಾಠಿಚಾರ್ಜ್ ಹಾಗೂ ಅಶ್ರುವಾಯು ಪ್ರಯೋಗ ನಡೆಸಿರುವುದನ್ನು ಎಸ್‌ಎಫ್‌ಐ ತೀವ್ರವಾಗಿ ಖಂಡಿಸಿತು.

**ಎಸ್‌ಎಫ್‌ಐ ಪ್ರಮುಖ ಆಗ್ರಹಗಳು**

- ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿಗಳ ಕುಟುಂಬಗಳಿಗೆ ತಲಾ ₹1 ಕೋಟಿ ಪರಿಹಾರ ನೀಡಬೇಕು.
- ಎನ್‌ಟಿಎ ಸಂಸ್ಥೆಯನ್ನು ರದ್ದುಪಡಿಸಿ, ನೀಟ್ ಪರೀಕ್ಷೆಯನ್ನು ಬ್ಯಾನ್ ಮಾಡಬೇಕು.
- ನೀಟ್ ಹಗರಣದ ಕುರಿತು ನ್ಯಾಯಾಂಗ ತನಿಖೆ ನಡೆಸಬೇಕು.
- ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಬೇಕು.
- ಪರೀಕ್ಷಾ ವ್ಯವಸ್ಥೆಯ ಕೇಂದ್ರೀಕರಣವನ್ನು ನಿಲ್ಲಿಸಿ ಪಾರದರ್ಶಕ ವ್ಯವಸ್ಥೆ ಜಾರಿಗೆ ತರಬೇಕು.

ಪ್ರತಿಭಟನೆಯಲ್ಲಿ ಜಿಲ್ಲಾ ಕಾರ್ಯದರ್ಶಿ ಬಾಲಾಜಿ ಚಳ್ಳಾರಿ, ತಾಲೂಕು ಅಧ್ಯಕ್ಷ ನಾಗರಾಜ್ ಯು, ಉಪಾಧ್ಯಕ್ಷ ಶರೀಫ್ ಎಂ.ಪಿ., ಜಂಟಿ ಕಾರ್ಯದರ್ಶಿ ದರ್ಶನ ಹೋಸ್ಕೆರ, ವಿದ್ಯಾರ್ಥಿಗಳಾದ ಉಷಾ, ಪಾರ್ವತಿ, ನಂದಿತಾ, ಸಿಂಧೂ, ರಂಜನ್, ಸುಮಂತ್, ನಂದೀಶ್, ರಾಜಾಭಕ್ಷಿ ವಿನೋದ್ ಸೇರಿದಂತೆ ನೂರಾರು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಎಸ್.ಎಂ. ಪಾಟೀಲ ಗಣಿಹಾರ ಬಹಿರಂಗ ಕ್ಷಮೆಯಾಚನೆಗೆ ಆಕ್ರೋಶ..!

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ



ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣ ಜನರ ತೆರಿಗೆ ಹಣದಿಂದ ನಿರ್ಮಾಣವಾಗಿದೆ ಎಂದು ತಪ್ಪು ಮಾಹಿತಿ ನೀಡಿ ಜನರ ದಿಕ್ಕು ತಪ್ಪಿಸುತ್ತಿರುವ ಕಾಂಗ್ರೆಸ್ ವಕ್ತಾರ ಎಸ್.ಎಂ. ಪಾಟೀಲ ಗಣಿಹಾರ ಕೂಡಲೇ ದೇಶದ ಜನತೆಗೆ ಕ್ಷಮೆಯಾಚಿಸಬೇಕು ಎಂದು ಪಾಲಿಕೆ ಮಾಜಿ ಸದಸ್ಯ ಹಾಗೂ ಬಿಜೆಪಿ ಮುಖಂಡ ರವೀಂದ್ರ ಲೋಣಿ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಯೋಧ್ಯೆಯ ರಾಮ ಮಂದಿರ ನಿರ್ಮಾಣಕ್ಕೆ ಸರ್ಕಾರ ಕೇವಲ ಒಂದು ರೂ. ಮಾತ್ರ ಟ್ರಸ್ಟ್ ನೀಡಿದೆ, ಯಾವ ಅನುದಾನವನ್ನು ಸರ್ಕಾರದಿಂದ ಮಂದಿರ ನಿರ್ಮಾಣಕ್ಕೆ ಬಿಡುಗಡೆಯಾಗಿಲ್ಲ, ಆದರೆ ಜನರ ತೆರಿಗೆ ದುಡ್ಡು ಬಳಕೆ ಮಾಡಿ ಮಂದಿರ ನಿರ್ಮಾಣ ಮಾಡಿದ್ದಾರೆ ಎಂದು ತಪ್ಪು ಗ್ರಹಿಕೆ ಮಾಡುವ ಪ್ರಯತ್ನ ಮಾಡಿರುವ ಎಸ್.ಎಂ. ಪಾಟೀಲ ಗಣಿಹಾರ ಕೂಡಲೇ ಬಹಿರಂಗವಾಗಿ ಕ್ಷಮೆಯಾಚಿಸಬೇಕು ಎಂದರು.

ನಿಜವಾಗಿಯೂ ನಿಮಗೆ ಕಾಳಜಿ ಇದ್ದರೆ ಅಲ್ಪಸಂಖ್ಯಾತ ಬಗ್ಗೆ ಕಾಳಜಿ ಇದ್ದರೆ ವಕ್ಫ್ ಆಸ್ತಿ ಅತಿಕ್ರಮಣ ಬಗ್ಗೆ ಮಾತನಾಡಿ, ಅದರ ಬಗ್ಗೆ ಹೋರಾಡಿ, ಅನ್ವರ ಮಾನಿಪ್ಪಡಿ ವರದಿ ಆಧರಿಸಿ ಹೋರಾಟ ಮಾಡಿ ಅಲ್ಪಸಂಖ್ಯಾತರಿಗೆ ನ್ಯಾಯ ಒದಗಿಸಿ, ಇದನ್ನು ಬಿಟ್ಟು ರಾಮ ಮಂದಿರ ವಿಷಯ ಕೆಣಕುವುದು ಎಷ್ಟು ಸರಿ? ಎಂದು ಪ್ರಶ್ನಿಸಿದರು.

ವಿಧಾನ ಪರಿಷತ್ ಸ್ಥಾನ ಗಿಟ್ಟಿಸಿಕೊಳ್ಳಲು ಈ ರೀತಿ ಸುಳ್ಳು ಹೇಳಿಕೆ ನೀಡಿ ಕಾಂಗ್ರೆಸ್ ಹೈಕಮಾಂಡ್ ಮೆಚ್ಚಿಸಲು ಹೋಗಬೇಡಿ ಎಂದರು.

ನಿಮ್ಮ ರಾಜ್ಯ ಸರ್ಕಾರದ ಐಟಿ ಬಿಟಿ ಮಂತ್ರಿಗಳು ಏನು ಮಾಡುತ್ತಿದ್ದಾರೆ, ಕೇಂದ್ರ ಸರ್ಕಾರದ ಐಟಿ ಬಿಟಿ ಮಂತ್ರಿ ಯಾವ ರೀತಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂಬುದನ್ನು ನೋಡಿ ಕಲಿತುಕೊಳ್ಳಲು ರಾಜ್ಯ ನೀವು ಕಾಂಗ್ರೆಸ್ ಪಕ್ಷದ ಕಾರ್ಯಾಲಯದಲ್ಲಿ ಏಕೆ ಪತ್ರಿಕಾಗೋಷ್ಠಿ ಮಾಡುವುದಿಲ್ಲ? ಖಾಸಗಿ ಹೋಟೆಲ್ ನಲ್ಲಿ ಏಕೆ ಪತ್ರಿಕಾಗೋಷ್ಠಿ ಮಾಡುತ್ತೀರಿ ಎಂದು ಪ್ರಶ್ನಿಸಿದರು.

ಸಾಧು-ಸಂತರ ಮೇಲೆ ಇಲ್ಲಸಲ್ಲದ ಆರೋಪಗಳನ್ನು ಹೊರೆಸುವ ಮೂಲಕ ಅವಮಾನ ಮಾಡುವ ಕೆಲಸವನ್ನು ಕಾಂಗ್ರೆಸ್ ಮುಖಂಡ ಎಸ್.ಎಂ. ಪಾಟೀಲ ಗಣಿಹಾರ ಮಾಡುತ್ತಿದ್ದಾರೆ, ಅವರ ಆರೋಪದಲ್ಲಿ ಯಾವ ಹುರುಳಿಲ್ಲ ಎಂದರು.

ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಭಾರತ ವಿಶ್ವಗುರು ಆಗುವ ನಿಟ್ಟಿನಲ್ಲಿ ಮುನ್ನಡೆಯುತ್ತಿದೆ ಎಂದರು.

ಈ ಹಿಂದೆ ಜನಪರ ಕಾಳಜಿಯುಳ್ಳ ವ್ಯಕ್ತಿಯಾಗಿದ್ದ ಎಸ್.ಎಂ. ಪಾಟೀಲ ಗಣಿಹಾರ ಈಗ ಕೇವಲ ಕೇಂದ್ರ ಸರ್ಕಾರದ ಮೇಲೆ ವಾಗ್ದಾಳಿ ನಡೆಸುವುದನ್ನೇ ತಮ್ಮ ಕಾಯಕ ಮಾಡಿಕೊಂಡಿದ್ದಾರೆ ಎಂದರು.

**ಬಹಿರಂಗ ಚರ್ಚೆಗೆ ಬನ್ನಿ:** ಕೇಂದ್ರ ಸರ್ಕಾರದಿಂದ ವೈಫಲ್ಯವಾಗಿದ್ದರೆ ನೀವು ಚರ್ಚೆಗೆ ಬನ್ನಿ. ನಾನು ದಾಖಲೆ ಹಾಗೂ ಅಂಕಿ ಅಂಶಗಳ ಸಮೇತ ನಾನು ಕೇಂದ್ರ ಸರ್ಕಾರದ ಸಾಧನೆ ಪರ ಮಾತನಾಡುವೆ, ಬೇಕಾದರೆ ಸವಾಲು ಸ್ವೀಕರಿಸಿ ಎಂದು ಲೋಣಿ ಸವಾಲು ಹಾಕಿದರು.

ನಿಮ್ಮ ಪಕ್ಷದಲ್ಲಿ ಶಿಸ್ತು ಇಲ್ಲ, ನೀವು ಮುಖಂಡರ ಜೊತೆ ಚರ್ಚಿಸುವುದಿಲ್ಲ, ನೀವು ತಪ್ಪು ಮಾಹಿತಿ ಬಿತ್ತರಿಸಿದರೆ ಕಾಂಗ್ರೆಸ್ ಪಕ್ಷಕ್ಕೂ ಮುಜುಗರ, ಹೀಗಾಗಿ ಕಾಂಗ್ರೆಸ್ ನಾಯಕರು ಎಸ್.ಎಂ. ಪಾಟೀಲರಿಗೆ ಬ್ರೇಕ್ ಹಾಕುವ ಕೆಲಸ ಮಾಡಲಿ ಎಂದರು.

# ಅತಿಥಿ ಉಪನ್ಯಾಸಕರ ಬದುಕು: ಆತಿಥ್ಯವೂ ಇಲ್ಲ, ಸೇವಾ ಭದ್ರತೆಯೂ ಇಲ್ಲ!



**ಸಮತೆ-ಸಹೋದರತೆ**

● ಡಾ. ಯಂಕನಗೌಡ ಪಾಟೀಲ್
ಉಪನ್ಯಾಸಕರು, ಕೆಂಭಾವಿ

ರಾಜ್ಯದ 430 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ನಡೆಯುತ್ತಿರುವುದು ಅತಿಥಿ ಉಪನ್ಯಾಸಕರಿಂದಲೇ ಎಂಬುದು ಕಹಿ ಸತ್ಯ. ಸುಮಾರು 10 ಸಾವಿರಕ್ಕೂ ಅಧಿಕ ಅತಿಥಿ ಉಪನ್ಯಾಸಕರು ಕನಿಷ್ಠ ಗೌರವಧನಕ್ಕೆ 15-20 ವರ್ಷಗಳ ಕಾಲ ಸೇವೆ ಸಲ್ಲಿಸಿದ್ದಾರೆ. ಯುಜಿಸಿ (UGC) ಮತ್ತು ನಾನ್-ಯುಜಿಸಿ (Non-UGC) ಎಂಬ ತಾರತಮ್ಯದ ಸುಳಿಯಲ್ಲಿ ಸಿಲುಕಿ, ವಯೋನಿವೃತ್ತಿಯ ಅಂಚಿನಲ್ಲಿರುವ ಈ ಉಪನ್ಯಾಸಕರ ಗೋಳು ಕೇಳುವವರಿಲ್ಲದಂತಾಗಿದೆ. ಕಾಲೇಜು ಶಿಕ್ಷಣ ಇಲಾಖೆಯಲ್ಲಿ ದೀರ್ಘಾವಧಿ ಸೇವೆ ಸಲ್ಲಿಸುತ್ತಿದ್ದ ಅರೆಕಾಲಿಕ ಉಪನ್ಯಾಸಕರನ್ನು ಖಾಯಂಗೊಳಿಸಲು ಮತ್ತು ಅವರಿಗೆ ಸೇವಾ ಭದ್ರತೆ ನೀಡಲು ಒತ್ತಡಗಳು ಹೆಚ್ಚಾದಾಗ, ಆ ಸಮಸ್ಯೆಯಿಂದ ನುಣುಚಿಕೊಳ್ಳಲು 2003ರಲ್ಲಿ ಅಧಿಕಾರದಲ್ಲಿದ್ದ ಸರ್ಕಾರವು 'ಅರೆಕಾಲಿಕ' (Part Time) ಎಂಬ ಪದದ ಬದಲಾಗಿ 'ಅತಿಥಿ ಉಪನ್ಯಾಸಕರು' (Guest Lecturer) ಎಂಬ ಪದವನ್ನು ಜಾರಿಗೆ ತಂದಿತು.

ಮೊದಮೊದಲು ಅತಿಥಿ ಉಪನ್ಯಾಸಕರಿಗೆ ವಾರಕ್ಕೆ ಕಲಾ ವಿಭಾಗದಲ್ಲಿ ಕನಿಷ್ಠ 4 ರಿಂದ ಗರಿಷ್ಠ 8 ಗಂಟೆ ಹಾಗೂ ವಿಜ್ಞಾನ ವಿಭಾಗದಲ್ಲಿ ಕನಿಷ್ಠ 5 ರಿಂದ ಗರಿಷ್ಠ 10 ಗಂಟೆಗಳ ಬೋಧನಾ ಕಾರ್ಯಭಾರವಿತ್ತು. ಆದರೆ ಪ್ರಸ್ತುತ, ಕಲಾ ವಿಭಾಗದಲ್ಲಿ ಕನಿಷ್ಠ 4 ರಿಂದ ಗರಿಷ್ಠ 15 ಗಂಟೆ ಹಾಗೂ ವಿಜ್ಞಾನ ವಿಭಾಗದಲ್ಲಿ ಕನಿಷ್ಠ 5 ರಿಂದ ಗರಿಷ್ಠ 19 ಗಂಟೆಗಳ ಕಾಲ ಕಾರ್ಯಭಾರ ನಿರ್ವಹಿಸುತ್ತಿದ್ದಾರೆ. ಖಾಯಂ ಉಪನ್ಯಾಸಕರು ವಾರಕ್ಕೆ ಕಲಾ ವಿಭಾಗದಲ್ಲಿ 16 ಹಾಗೂ ವಿಜ್ಞಾನ ವಿಭಾಗದಲ್ಲಿ 20 ಗಂಟೆ ಬೋಧನೆ ಮಾಡಲಿದ್ದು, ಖಾಯಂ ಮತ್ತು ಅತಿಥಿ ಉಪನ್ಯಾಸಕರ ಕಾರ್ಯಭಾರದ ನಡುವೆ ಕೇವಲ ಒಂದು ಗಂಟೆಯ ವ್ಯತ್ಯಾಸವಿದೆ.

ಆರಂಭದಲ್ಲಿ ಅತಿಥಿ ಉಪನ್ಯಾಸಕರಿಗೆ ಅವರ ಕಾರ್ಯಭಾರಕ್ಕೆ ತಕ್ಕಂತೆ ₹1,200, ₹2,000, ₹5,000 ಗೌರವಧನವನ್ನು ಮೂರು ಅಥವಾ ಆರು ತಿಂಗಳಿಗೊಮ್ಮೆ ಪಾವತಿಸಲಾಗುತ್ತಿತ್ತು. ಉಪನ್ಯಾಸಕರ ನಿರಂತರ ಹೋರಾಟದ ಫಲವಾಗಿ ಯುಜಿಸಿ/ನಾನ್-ಯುಜಿಸಿ ಆಧಾರದಲ್ಲಿ ₹11,000 ಮತ್ತು ₹13,000 ಗೌರವಧನ ನಿಗದಿಯಾಗಿ, ತದನಂತರ ₹26,000 ಹಾಗೂ ₹32,000 ಕ್ಕೆ ಏರಿಕೆಯಾಯಿತು. ಇತ್ತೀಚಿನ ದಿನಗಳಲ್ಲಿ ಇದನ್ನು ₹26,000/₹28,000 ಹಾಗೂ ₹32,000/₹40,000 ಕ್ಕೆ ಹೆಚ್ಚಿಸಲಾಗಿದೆ. ಈ ಗೌರವಧನ ಹೆಚ್ಚಳದಿಂದಾಗಿ ಅರ್ಹ ನಿರುದ್ಯೋಗಿ ಯುಜಿಸಿ ಪದವೀಧರರು ಅತಿಥಿ ಉಪನ್ಯಾಸಕರ ಹುದ್ದೆಯತ್ತ ಆಕರ್ಷಿತರಾಗಿದ್ದು, ಸುದೀರ್ಘ ಕಾಲ ಸೇವೆ ಸಲ್ಲಿಸಿದ ನಾನ್-ಯುಜಿಸಿ ಪದವೀಧರರಿಗೆ ನುಂಗಲಾರದ ತುತ್ತಾಗಿ ಪರಿಣಮಿಸಿದೆ ಎಂಬುದನ್ನು ಅಲ್ಲಗಳೆಯುವಂತಿಲ್ಲ.



ಅತಿಥಿ ಉಪನ್ಯಾಸಕರ ಹೋರಾಟಗಳಿಗೆ ಸ್ಪಂದಿಸುವ ನೆಪದಲ್ಲಿ ಸರ್ಕಾರವು ಕಾಲಕಾಲಕ್ಕೆ ಗೌರವಧನ ಹೆಚ್ಚಳ, ತಿಂಗಳಿಗೆ ಒಂದು ದಿನದ ಸಾಂದರ್ಭಿಕ ರಜೆ, ಮಹಿಳಾ ಉಪನ್ಯಾಸಕಿಯರಿಗೆ ವೇತನಸಹಿತ ಮಾತೃತ್ವ ರಜೆ, ₹5 ಲಕ್ಷ ಇಡಿಗಂಟು ಹಾಗೂ ಸೇವೆಯಿಂದ ಹೊರಗುಳಿದವರಿಗೆ ಶೈಕ್ಷಣಿಕ ಸಂಯೋಜಕ ಹುದ್ದೆ ಸೃಷ್ಟಿಸುವಂತಹ ಕ್ರಮಗಳನ್ನು ಕೈಗೊಳ್ಳುತ್ತಿದೆಯಾದರೂ, ಇವೆಲ್ಲವೂ ಮೂಲ ಸಮಸ್ಯೆಯನ್ನು ಮರೆಮಾಚುವ 'ಜಾಣ ಕುರುಡುತನ' ಎಂಬಂತಾಗಿದೆ.

ಪ್ರತಿ ವರ್ಷವೂ ಬದಲಾಗುತ್ತಿರುವ ಅತಿಥಿ ಉಪನ್ಯಾಸಕರ ಆಯ್ಕೆಯ ಸುತ್ತೋಲೆಗಳು ಗೊಂದಲದ ಗೂಡಾಗಿವೆ. ಕಳೆದ ಬಾರಿ ಕೌನ್ಸೆಲಿಂಗ್‌ನಲ್ಲಿ ವಿಕಲಚೇತನರಿಗೆ ಮೊದಲ ಆದ್ಯತೆ ನೀಡಿದ್ದರೆ, ಈ ಬಾರಿ ಎಸ್‌ಸಿ/ಎಸ್‌ಟಿ, ಒಬಿಸಿ ಮೀಸಲಾತಿ ಕಣ್ಣೊರೆಸುವ ತಂತ್ರ ಎಂಬ ಯಕ್ಷ ಪ್ರಶ್ನೆ ಕಾಡುತ್ತಿದೆ.

ಅಧಿಕಾರಕ್ಕೆ ಬರುವ ಮುನ್ನ ಕಾಂಗ್ರೆಸ್, ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳು ತಮ್ಮ ಪ್ರಣಾಳಿಕೆಯಲ್ಲಿ ಅತಿಥಿ ಉಪನ್ಯಾಸಕರ ಹಣೆಬರಹ ಬದಲಾಯಿಸುವುದಾಗಿ ಭರವಸೆ ನೀಡುತ್ತವೆ. ಆದರೆ ಅಧಿಕಾರಕ್ಕೇರಿದ ಮೇಲೆ ರಾಜಕಾರಣಿಗಳು ಮತ್ತು ಅಧಿಕಾರಿಗಳು ಒಬ್ಬರನ್ನೊಬ್ಬರು ಹೊಣೆಗಾರರನ್ನಾಗಿ ಮಾಡಿ ಕೈತೊಳೆದುಕೊಳ್ಳುತ್ತಿದ್ದಾರೆ. "ಅತಿಥಿ ದೇವೋ ಭವ" ಎನ್ನುವ ಸಂಸ್ಕೃತಿಯಲ್ಲಿ, ಅತಿಥಿ ಉಪನ್ಯಾಸಕರಿಗೆ ಪ್ರೀತಿಯ ಆತಿಥ್ಯ ನೀಡುವುದನ್ನು ಬಿಟ್ಟು, 'ಹೊಡೆದು ಆಳುವ' ನೀತಿ ಅನುಸರಿಸುವುದು ಎಷ್ಟು ಸರಿ?

ಶೈಕ್ಷಣಿಕ ವರ್ಷದಲ್ಲಿ ಕೇವಲ 7-8 ತಿಂಗಳು ಮಾತ್ರ ಕರ್ತವ್ಯ ನಿರ್ವಹಿಸಿ, ಉಳಿದ 4-5 ತಿಂಗಳು ಸಣ್ಣಪುಟ್ಟ ವ್ಯಾಪಾರ-ವಹಿವಾಟು ನಡೆಸಿ ಜೀವನ ನಿರ್ವಹಣೆಗೆ ಹೆಣಗಾಡುತ್ತಾ, ಅದೆಷ್ಟೋ ಅತಿಥಿ ಉಪನ್ಯಾಸಕರು ಸೂಕ್ತ ಭದ್ರತೆವಿಲ್ಲದೆ ಮೃತಪಟ್ಟಿದ್ದಾರೆ. ಇನ್ನು ಕೆಲವರು ಸೇವೆಯಿಂದಲೇ ಹೊರಗುಳಿದಿದ್ದಾರೆ. ಎರಡ್ಮೂರು ದಶಕಗಳಿಂದ ಅಭದ್ರತೆಯಲ್ಲಿಯೇ ಕಾಲ ಕಳೆಯುತ್ತಿರುವ ಯುಜಿಸಿ ಮತ್ತು ನಾನ್-ಯುಜಿಸಿ ಅತಿಥಿ ಉಪನ್ಯಾಸಕರಿಗೆ ಮಾನವೀಯತೆಯ ಆಧಾರದ ಮೇಲೆ ಪ್ರಸ್ತುತ ಕಾಂಗ್ರೆಸ್ ಸರ್ಕಾರವು 2023ರ ಚುನಾವಣಾ ಪ್ರಣಾಳಿಕೆಯಲ್ಲಿ ನೀಡಿದ್ದ ಭರವಸೆಯಂತೆ 'ಉದ್ಯೋಗ ಗ್ಯಾರಂಟಿ' ಮತ್ತು ಸೇವಾ ಭದ್ರತೆ ಒದಗಿಸಬೇಕು ಎಂದು ಹೆಸರು ಹೇಳಲು ಇಚ್ಛಿಸದ ಅತಿಥಿ ಉಪನ್ಯಾಸಕರೊಬ್ಬರು ಆಗ್ರಹಿಸಿದ್ದಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number:08483200222

PRGI NO. 120927
(RNINO:KARKAN/2011/48371)